₹ 4 | ಪುಟ: 4 | ಸಂಪುಟ: 4 | ಸಂಚಿಕೆ 90 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 90 | Tuesday, 23, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

# ರಾಜ್ಯ ವಿಧಾನಸಭಾ ಅಧಿವೇಶನ



## ಸಿಎಂ, ಡಿಸಿಎಂ ಸೇರಿ ನೂತನ ಸಚಿವರು ಹಾಗೂ ಶಾಸಕರ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಚಿವರು ಸೇರಿದಂತೆ ಒಟ್ಟು 93 ಮಂದಿ ಶಾಸಕರು ಇಂದು ವಿಧಾನಸಭೆಯ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು. 16ನೇ ವಿಧಾನಸಭೆಯ ಮೊದಲ ಅಧಿವೇಶನವು ಸೋಮವಾರ ವಂದೇ ಮಾತರಂ ಗೀತೆಯೊಂದಿಗೆ ಆರಂಭವಾಯಿತು.ವಿಧಾನಸಭೆ ಹಂಗಾಮಿ ಸ್ಪೀಕರ್ ಆರ್ವಿ ದೇಶಪಾಂಡೆ ಅವರು, ನೂತನ ಸದಸ್ಯರು ಪ್ರಮಾಣವಚನ ಸ್ವೀಕರಿಸಲು ಅನುವು ಮಾಡಿಕೊಟ್ಟಾಗ ವಿಧಾನಸಭೆ ಕಾರ್ಯದರ್ಶಿ ಎಂ.ಕೆ ವಿಶಾಲಾಕ್ಷಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಮಾಣವಚನ ಸ್ವೀಕರಿಸಲು ಆಹ್ವಾನಿಸಿದರು. ವರುಣಾ ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾಗಿರುವ ಸಿದ್ದರಾಮಯ್ಯ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ನಂತರ ಸಭಾಧ್ಯಕ್ಷರಿಗೆ ವಂದಿಸಿ ಪ್ರತಿಪಕ್ಷದ ಸಾಲಿನಲ್ಲಿದ್ದ ಬಸವರಾಜ



ಬೊಮ್ಮಾಯಿ ಮತ್ತಿತರ ಸದಸ್ಯರಿಗೆ ಹಸ್ತಲಾಘವ ಮಾಡಿ ಸ್ವಸ್ಥಾನಕ್ಕೆ ಮರಳಿದರು.

ಕನಕಪುರ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾದ ಡಿ.ಕೆ ಶಿವಕುಮಾರ್ ಅವರು ಗಂಗಾಧರಯ್ಯ ಅಜ್ಜಯ್ಯ ಹೆಸರಿನಲ್ಲಿ ಪ್ರಮಾಣ ಮಾಡಿ ಸತ್ಯನಿಷ್ಠೆಯ ಪ್ರತಿಜ್ಞೆ ಮಾಡಿದರು. ನಂತರ ಪ್ರತಿಪಕ್ಷ ಮತ್ತು ಆಡಳಿತ ಪಕ್ಷದ ಸದಸ್ಯರನ್ನು ಅಭಿನಂದಿಸಿದರು. ಸಚಿವರಾದ ಡಾ.ಜಿ ಪರಮೇಶ್ವರ್, ಕೆ.ಹೆಚ್ ಮುನಿಯಪ್ಪ, ಕೆ.ಜೆ ಜಾರ್ಜ, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ ಮತ್ತು ರಾಮಲಿಂಗಾರೆಡ್ಡಿ ಅವರು ಸತ್ಯನಿಷ್ಠೆ ಹೆಸರಿನಲ್ಲಿ ವಿಧಾನಸಭೆ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು.ಸಚಿವರಾದ ಎಂ.ಬಿ ಪಾಟೀಲ್ ಭಗವಂತನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.ಪ್ರಮಾಣವಚನ ಸ್ವೀಕರಿಸಲು ಕಾರ್ಯದರ್ಶಿ ಅವರು ಆಹ್ವಾನಿಸಿದಾಗ ಸಚಿವ ಜಮೀರ್ ಅಹಮ್ಮದ್ ಖಾನ್, ಕೃಷ್ಣಬೈರೇಗೌಡ ಸದನದಲ್ಲಿ ಹಾಜರಿರಲಿಲ್ಲ.ವಿಧಾನಸಭೆ ಸದಸ್ಯರಾಗಿ ಕೆ.ಎನ್ ರಾಜಣ್ಣ, ಅಲ್ಲಮ ಪ್ರಭು ಪಾಟೀಲ್, ಕೆ.ಎಸ್ ಆನಂದ್.

ಅರವಿಂದ್ ಬೆಲ್ಲದ್, ಆರ್ ಅಶೋಕ್, ಅರಗ ಜ್ಞಾನೇಂದ್ರ, ಅಶೋಕ್ ಪಟ್ಟಣ್, ಅಶೋಕ್ ಕುಮಾರ್ ರೈ, ಬಾಬಾಸೇಹಬ್ ಪಾಟೀಲ್, ಅವಿನಾಶ್ ಜಾದವ್, ಡಾ ಅಜಯ್ ಧರ್ಮಸಿಂಗ್, ಬಸವನಗೌಡ ತುರುವಿಹಾಳ್, ಬಸವರಾಜ ರಾಯರೆಡ್ಡಿ, ಬಸನಗೌಡ ಗದ್ದಲ್, ಬಸವನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಹಲವು ಹೊಸಬರು ಹಾಗೂ ಪ್ರಮುಖರು ಪ್ರಮಾಣ ವಚನ ಸ್ವೀಕರಿಸಿದರು.ವಿಶೇಷವಾಗಿ ಯತ್ನಾಳ್ ಅವರು ಹಿಂದುತ್ವ ಹಾಗೂ ಗೋಮಾತೆ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಬೆಳಗಾವಿ ಉತ್ತರ ಕ್ಷೇತ್ರದಿಂದ ಚುನಾಯಿತರಾದ ಆಸೀಫ್ ಸೇಠ್ ಇಂಗ್ಲೀಷ್‌ನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಶಿವಾನಂದ ಪಾಟೀಲ್ ಬಸವಣ್ಣನವರ ಹೆಸರಿನಲ್ಲಿ, ಅಶೋಕ್ ಮನಗುಳಿ ಅವರು ಮನೆದೇವರು, ತಂದೆ–ತಾಯಿ, ಕ್ಷೇತ್ರದ ಜನರು ಹಾಗೂ ಸತ್ಯನಿಷ್ಠೆ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

**ಸ್ಪೀಕರ್ ಸಲಹೆ:** ಇದಕ್ಕೂ ಮುನ್ನ 16ನೇ ವಿಧಾನಸಭೆಯ ಮೊದಲ ಅಧಿವೇಶನ 'ವಂದೇ ಮಾತರಂ' ಗೀತೆ ಹಾಡುವುದರೊಂದಿಗೆ ಸಮಾವೇಶಗೊಂಡಾಗ ಹಂಗಾಮಿ ಸ್ಪೀಕರ್ ಆರ್ವಿ ದೇಶಪಾಂಡೆ ಮಾತನಾಡಿ, ವಿಧಾನಸಭೆಗೆ ಚುನಾಯಿತರಾಗಿರುವ ನೂತನ ಸದಸ್ಯರು ಯಾವುದೇ ವ್ಯಕ್ತಿ ಹೆಸರಿನಲ್ಲಿ ಸ್ವೀಕರಿಸಬಾರದು ಎಂದು ಸಲಹೆ ಮಾಡಿದರು. ಸಂವಿಧಾನ ಅಥವಾ ದೇವರ ಹೆಸರಿನಲ್ಲಿ ಮಾತ್ರ ಪ್ರಮಾಣವಚನ ಸ್ವೀಕರಿಸಬೇಕು. ಯಾವುದೇ ವ್ಯಕ್ತಿ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರೆ ಕಾನೂನು ಬದ್ಧವಾಗಿರುವುದಿಲ್ಲ ಎಂದು ತಿಳಿಸಿದರು. ಃಥಿಣಜ

ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಸಚಿವರಿಗೆ ಅಭಿನಂದಿಸಿದ ಸಭಾಧ್ಯಕ್ಷರು, 16ನೇ ವಿಧಾನಸಭೆಗೆ ಆಯ್ಕೆಯಾಗಿರುವ ಸದಸ್ಯರನ್ನು ಸ್ವಾಗತಿಸಿ ಅಭಿನಂದಿಸಿದರು. ರಮೇಶ್ ಜಾರಕಿಹೊಳಿ ಅವರು ಆರಂಭದಿಂದಲೇ ಕುಳಿತ್ತಿದ್ದರು. ಆದರೆ, ಪ್ರಮಾಣವಚನ ಸ್ವೀಕರಿಸಲು ಅವರ ಹೆಸರನ್ನು ಕರೆದಾಗ ಸ್ಥಾನದಲ್ಲಿ ಇರಲಿಲ್ಲ. ಹೊಸದಾಗಿ ಆಯ್ಕೆಯಾದ ಶಾಸಕರೊಬ್ಬರು ಕೇಸರಿ ಪೇಟ ಧರಿಸಿ ಸದನಕ್ಕೆ ಬಂದಿದ್ದರು. ಅದೇ ರೀತಿ ಶಿವಮೊಗ್ಗ ಕ್ಷೇತ್ರದಿಂದ ಆಯ್ಕೆಯಾದ ಚನ್ನಬಸಪ್ಪ ಅವರು ಕೇಸರಿ ಶಾಲು ಹಾಕಿಕೊಂಡು ಪ್ರಮಾಣವಚನ ಸ್ವೀಕರಿಸಿದರು.

---

## ವಿಪಕ್ಷಗಳ ಒಕ್ಕೂಟ ರಚನೆಗೆ ಕಸರತ್ತು

### ಖರ್ಗೆ, ರಾಹುಲ್ ಭೇಟಿಯಾದ ನಿತೀಶ್ ಕುಮಾರ್



ನವದೆಹಲಿ: 2024 ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಎದುರಿಸಲು ಪ್ರತಿಪಕ್ಷಗಳ ಒಕ್ಕೂಟ ರಚನೆಯ ಪ್ರಯತ್ನ ನಡೆಯುತ್ತಿರುವಂತೆಯೇ, ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಸೋಮವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿದ್ದು, ಮಾತುಕತೆ ನಡೆಸಿದ್ದಾರೆ. ಕಳೆದ ಒಂದೂವರೆ ತಿಂಗಳಲ್ಲಿ ನಡೆದ ಎರಡನೇ ಸಭೆ ಇದಾಗಿದೆ.

10 ರಾಜಾಜಿ ಮಾರ್ಗ್ ನಲ್ಲಿರುವ ಖರ್ಗೆ ಅವರ ನಿವಾಸದಲ್ಲಿ ಹಿರಿಯ ನಾಯಕರ ಸಮಾಗಮ ನಡೆಯಿತು. ಸಭೆಯಲ್ಲಿ ಪ್ರತಿಪಕ್ಷಗಳ ಒಗ್ಗಟ್ಟು ಬಲಪಡಿಸುವ ಮಾರ್ಗಸೂಚಿ ಮತ್ತು ಪಾಟ್ನಾದಲ್ಲಿ ಪ್ರತಿಪಕ್ಷ ನಾಯಕರ ಸಂಭವನೀಯ ಸಭೆಯ ಕುರಿತು ಚರ್ಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಭೇಟಿಯಾದ ಮಾರನೇ ದಿನ ನಡೆದ ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ಜೆಡಿಯು ಮುಖ್ಯಸ್ಥ ಲಾಲನ್ ಸಿಂಗ್ ಸಭೆಯಲ್ಲಿ ಉಪಸ್ಥಿತರಿದ್ದರು.

---

## ವಿಧಾನಸಭೆಯ ಮೊಗಸಾಲೆಯಲ್ಲಿ ಒಂದಾದ ಬಿಜೆಪಿ–ಕಾಂಗ್ರೆಸ್ ನಾಯಕರು



ಬೆಂಗಳೂರು: ಮೂರು ದಿನ ವಿಧಾನಸೌಧದಲ್ಲಿ ವಿಶೇಷ ಅಧಿವೇಶನ ಆರಂಭವಾಗಿದ್ದು, 16ನೇ ವಿಧಾನಸಭೆಯ ಮೊಟ್ಟ ಮೊದಲ ಅಧಿವೇಶನ ಆರಂಭಕ್ಕೂ ಮುನ್ನ ವಿಧಾನಸಭೆಯ ಮೊಗಸಾಲೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿರೋಧ ಪಕ್ಷದ ಶಾಸಕರುಗಳ ಜೊತೆ ಲವಲವಿಕೆಯಿಂದ ಮಾತನಾಡಿಸಿ ಫೋಟೋಗೆ ಫೋಸ್ ನೀಡಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಜಯಪುರ ನಗರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ಗೆ ಹಸ್ತಲಾಘವ ಮಾಡಿದರು. ಇನ್ನು ತಮ್ಮ ವಿರುದ್ಧ ಕನಪುರದಲ್ಲಿ ಸ್ಪರ್ಧಿಸಿ ಸೋತಿರುವ ಆರ್ ಅಶೋಕ್ ಅವರ ಹೆಗಲ ಮೇಲೆ ಹಾಕಿ ನಗುತ್ತಲೇ ಫೋಟೋ ಕ್ಲಿಕ್ಕಿಸಿಕೊಂಡರು. ವಿಧಾನಸಭೆ ಅಧಿವೇಶನ ಹಾಲ್ನಲ್ಲಿ ಹಲವು ಶಾಸಕರ ಜೊತೆ ಡಿಕೆ ಶಿವಕುಮಾರ್ ಮಾತು ಕತೆ ನಡೆಸಿದರು. ಇನ್ನು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ನೂತನ ಡಿಸಿಎಂ ಡಿಕೆ ಶಿವಕುಮಾರ್ಗೆ ವಿಶ್ ಮಾಡಿದರು. ಅಲ್ಲದೇ ಮೊದಲ ಅಧಿವೇಶನಕ್ಕೆ ಆಗಮಿಸಿದ್ದ ಶಾಸಕ ಜನಾರ್ದನ ರೆಡ್ಡಿಯವರಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಶುಭ ಕೋರಿದರು.

---

## ಜೀರೋ ಟ್ರಾಫಿಕ್ ನಿರಾಕರಿಸಿದ ಸಿದ್ದರಾಮಯ್ಯ: 'ಸಿಂಪಲ್ ರಾಮಯ್ಯ' ಎಂದೆನಿಕೊಂಡ ಸಿಎಂ



ಬೆಂಗಳೂರು: 2ನೇ ಬಾರಿಗೆ ರಾಜ್ಯದ ಸಿಎಂ ಪಟ್ಟ ಅಲಂಕರಿಸಿರುವ ಸಿದ್ದರಾಮಯ್ಯ ಫುಲ್ ಜೋಶ್ನಲ್ಲಿದ್ದಾರೆ. ಪ್ರಮಾಣವಚನ ಸ್ವೀಕರಿಸಿ ಕೇವಲ ಒಂದೇ ಒಂದು ದಿನದಲ್ಲೇ ಸಿಲಿಕಾನ್ ಸಿಟಿ ಮಂದಿಗೆ ಸಿಹಿ ಸುದ್ದಿ ನೀಡಿದ್ದಾರೆ. ಹಾಗೇ ತನ್ನನ್ನು ನೋಡಲು ಬರುವ ರಾಜ್ಯದ ಜನತೆಗೆ ಒಂದೊಳ್ಳೇ ಸಂದೇಶವನ್ನೂ ರವಾನಿಸಿದ್ದಾರೆ.

ಅಹಿಂದ ರಾಮಯ್ಯ. ಅನ್ನ ರಾಮಯ್ಯ. ಭಾಗ್ಯ ರಾಮಯ್ಯ. ಅಬ್ಬಬ್ಬಾ ಮುಖ್ಯಮಂತ್ರಿ ಸಿದ್ದರಾಮಯ್ಯಗಿರೋ ಬಿರುದು ಒಂದೇ ಎರೆಡಾ. ಸಿದ್ದರಾಮಯ್ಯರನ್ನ ಇಷ್ಟ ಪಡುವವವರು ಅವರಿಗೆ ಹೀಗೆ ನಾನಾ ಬಿರುದುಗಳನ್ನ ಕೊಟ್ಟಿದ್ದಾರೆ. ಇಂಟರೆಸ್ಟಿಂಗ್ ಅಂದ್ರೆ ಈ ಲಿಸ್ಟ್ಗೆ ಹೊಸ ಬಿರುದು ಆ್ಯಡ್ ಆಗಿದೆ. ಅದೇ ಸಿಂಪಲ್ ರಾಮಯ್ಯ.

ಸಿಲಿಕಾನ್ ಸಿಟಿ ಮಂದಿಗೆ ಸಿಹಿ ಸುದ್ದಿ ನೀಡಿದ ಸಿದ್ದು: ಹೌದು, ನನಗೆ ಜಿರೋ ಟ್ರಾಫಿಕ್ ಬೇಡ ಅನ್ನೋ ಮೂಲಕ ಸಿದ್ದರಾಮಯ್ಯ ನಾನೊಬ್ಬ ಕಾಮನ್ ಅಂತಾ ಪ್ರೂವ್ ಮಾಡಿದ್ದಾರೆ. ಸಾಮಾನ್ಯವಾಗಿ ಮುಖ್ಯಮಂತ್ರಿಗಳಿಗೆ ಜೀರೋ ಟ್ರಾಫಿಕ್ ಸೌಲಭ್ಯವಿರುತ್ತೆ.. ಜಿರೋ ಟ್ರಾಫಿಕ್ನಿಂದ ರಾಜಾಧಾನಿ ಜನತೆಗೆ ಉಂಟಾಗುವ ಸಮಸ್ಯೆಗಳನ್ನ ಅರಿತ ಸಿದ್ದರಾಮಯ್ಯ ನನಗೆ ಜಿರೋ ಟ್ರಾಫಿಕ್ ಸೌಲಭ್ಯ ಬೇಡ ಅಂತಾ ನಿರಾಕರಿಸಿದ್ದಾರೆ.

---


## ಒಂದೇ ದಿನದಲ್ಲಿ, ಒಂದೇ ಗ್ರಾಮದ ನಾಲ್ವರು ಮಕ್ಕಳು ನಾಪತ್ತೆ

ತುಮಕೂರು : ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಚಿಕ್ಕಬಾಣಗೆರೆ ಗ್ರಾಮದಲ್ಲಿ ಒಂದೇ ದಿನ 4 ಮಕ್ಕಳು ನಾಪತ್ತೆಯಾಗಿರುವ ಘಟನೆ ನಡೆದಿದೆ.

ಮಂಜುಳಾ, ಮಧು ಕುಮಾರ್, ಮಹಾಲಕ್ಷ್ಮೀ ಹಾಗೂ ಭಾನು ಕಣ್ಮರೆಯಾದ ಮಕ್ಕಳು. ಅಚ್ಚರಿ ಸಂಗತಿಯೆಂದರೆ ನಾಪತ್ತೆಯಾಗಿರುವ ಎಲ್ಲರೂ 15–16 ವರ್ಷದ ವಯಸ್ಸಿನವರಾಗಿದ್ದಾರೆ. ಒಂದೇ ಗ್ರಾಮದ, ಒಂದೇ ವಯಸ್ಸಿನ ಅಂತರವಿರುವ 4 ಮಕ್ಕಳು ನಾಪತ್ತೆಯಾಗಿರುವುದು ಹಲವು ಅನುಮಾನಗಳನ್ನು ಹುಟ್ಟಿಹಾಕಿದೆ.

ಮಧ್ಯಾಹ್ನ ಆಟ ಆಡಲೆಂದು ಮನೆಯಿಂದ ಹೋದವರು ವಾಪಸ್ಸು ಮನೆಗೆ ಬಂದಿಲ್ಲ. ಇದರಿಂದ ಭಯಗೊಂಡ ಪೋಷಕರು ಎಲ್ಲಾ ಕಡೆ ಹುಡುಕಾಡಿದ್ದಾರೆ. ಆದ್ರೆ ಏನು ಪ್ರಯೋಜನವಾಗಿಲ್ಲ ಕಾರಣ ಪೋಷಕರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ನಾಪತ್ತೆ ಯಾದವರಲ್ಲಿ ಮಂಜುಳಾ–ಮಧು ಕುಮಾರ್ ಅವಳಿ ಜವಳಿ ಮಕ್ಕಳು. ಊರಿನಿಂದ ಬೆಂಗಳೂರಿಗೆ ಹೋಗಿರುವ



ಬಗ್ಗೆ ಮಾಹಿತಿ ಲಭ್ಯವಾಗಿದ್ದು, ಬೆಂಗಳೂರಿಗೆ ಯಾಕೆ ಹೋದರೂ ಯಾರು ಇವರನ್ನು ಕರೆಸಿಕೊಂಡರೆಂಬ ಮಾಹಿತಿ ಇನ್ನೂ ತಿಳಿದುಬಂದಿಲ್ಲ. ಪೊಲೀಸರು ಶೋಧ ನಡೆಸುತ್ತಿದ್ದು,ಮಕ್ಕಳು ಸಿಕ್ಕ ಬಳಿಕವಷ್ಟೇ ಸತ್ಯ ಹೊರಬರಲಿದೆ.

ಇನ್ನು ಮತ್ತೊಂದೆಡೆ ಶಿರಾ ಶಾಸಕ ಟಿ ಬಿ ಜಯಚಂದ್ರ ಅವರು ಘಟನೆ ಸಂಬಂಧ ಪ್ರತಿಕ್ರಿಯಿಸಿದ್ದಾರೆ.

ತಮ್ಮ ಫೇಸ್ಬುಕ್ ಖಾತೆಯಲ್ಲಿ ಮಕ್ಕಳ ಚಿತ್ರಗಳನ್ನು ಪೋಸ್ಟ್ ಮಾಡಿ, ಘಟನೆ ಸಂಬಂಧ ನಾನು ಪೊಲೀಸ್ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಾರ್ವಜನಿಕರ ಸಹಕಾರ ಕೂಡ ನಿರೀಕ್ಷಿತ ಎಂದು ಮನವಿ ಮಾಡಿದ್ದಾರೆ.

ಸದ್ಯ ಘಟನೆ ಸಂಬಂಧ ದೂರು ದಾಖಲಿಸಿಕೊಂಡಿರುವ ಪಟ್ಟನಾಯಕನಹಳ್ಳಿ ಪೊಲೀಸರು ತನಿಖೆಗೆ ಇಳಿದಿದ್ದಾರೆ.

### ಒಂದೇ ದಿನದಲ್ಲಿ 7 ಜನರು ಸಾವು

ಬೆಂಗಳೂರು: ರಾಜ್ಯದಲ್ಲಿ ಸಂಭವಿಸಿದ ವರುಣಾರ್ಭಟಕ್ಕೆ 7 ಜನರು ಸಾವನ್ನಪ್ಪಿದ್ದಾರೆ. ಒಂದೇ ದಿನದಲ್ಲಿ 7 ಜನರು ಮಳೆ ಆರ್ಭಟಕ್ಕೆ ಸಾವನ್ನಪ್ಪಿದ್ದಾರೆ. ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಮಹಾಮಳೆಗೆ ಅಂಡರ್ ಪಾಸ್ ನಲ್ಲಿ ಕಾರು ಮುಳುಗಿ ಇನ್ಫೋಸಿಸ್ ಉದ್ಯೋಗಿ ಯುವತಿ ಭಾನುರೇಖಾ ಸಾವನ್ನಪ್ಪಿದ್ದಾರೆ. ಬೆಂಗಳೂರಿನ ಕೆ.ಪಿ.ಅಗ್ರಹಾರ ರಾಜಕಾಲುವೆಯಲ್ಲಿ ಲೋಕೇಶ್ ಎಂಬ ಯುವಕ ನೀರಿನ ರಭಸಕ್ಕೆ ಕೊಚ್ಚಿ ಹೋಗಿದ್ದಾನೆ. ಬೆಳಿಗ್ಗೆ ಆತನ ಶವ ಪತ್ತೆಯಾಗಿದೆ. ಇನ್ನು ಮೈಸೂರು ಜಿಲ್ಲೆಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ವರುಣಾರ್ಭಟಕ್ಕೆ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತಗುಲಿ ಓರ್ವ ಸಾವನ್ನಪ್ಪಿದ್ದರೆ, ಮೈಸೂರಿನ ಮಂಟಿಕೊಪ್ಪಲಲ್ಲಿ ಸಿಡಿಲು ಬಡಿದು ರೈತರೊಬ್ಬರು ಸಾವನ್ನಪ್ಪಿದ್ದಾರೆ.

---

## ಹೆಚ್ ಡಿ ದೇವೇಗೌಡರನ್ನು ಭೇಟಿಯಾದ ಡಿಕೆಶಿ



ಬೆಂಗಳೂರು: ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದ ಹುಮ್ಮಸ್ಸಿನಲ್ಲಿರುವ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಪಕ್ಷ ಬೇಧ ಮರೆತು ಹಿರಿಯ ರಾಜಕಾರಣಿಗಳನ್ನು ಭೇಟಿ ಮಾಡುವ ಮೂಲಕ ಅವರ ಆಶೀರ್ವಾದ ಪಡೆದುಕೊಳ್ಳುತ್ತಿದ್ದಾರೆ.

ಬೆಳಗ್ಗೆ ಬಿಜೆಪಿ ಹಿರಿಯ ಮುಖಂಡ ಎಸ್ ಎಂ ಕೃಷ್ಣ ಅವರನ್ನು ಭೇಟಿಯಾಗಿದ್ದ ಡಿಕೆ ಶಿವಕುಮಾರ್, ಸಂಜೆ ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರನ್ನು ಭೇಟಿಯಾಗಿದ್ದಾರೆ. ಪದ್ಮನಾಭ ನಗರದಲ್ಲಿರುವ ನಿವಾಸಕ್ಕೆ ತೆರಳಿ ದೇವೇಗೌಡ ಅವರನ್ನು ಭೇಟಿಯಾಗಿದ್ದು, ಅವರ ಕಾಲುಗಳಿಗೆ ನಮಸ್ಕರಿಸಿ, ಶಾಲು ಹೊದಿಸಿ ಸನ್ಮಾನಿಸುವ ಮೂಲಕ ಆಶೀರ್ವಾದ ಪಡೆದುಕೊಂಡಿದ್ದಾರೆ.

ಇದೇ ಸಂದರ್ಭದಲ್ಲಿ ದೇವೇಗೌಡರ ಆರೋಗ್ಯ ಸೇರಿದಂತೆ ಹಲವು ವಿಚಾರ ಕುರಿತು ಮಾತುಕತೆ ನಡೆಸಿದ್ದಾರೆ. ಶಾಸಕ ಶರತ್ ಬಚ್ಚೇಗೌಡ ಸೇರಿದಂತೆ ಹಲವು ಮಂದಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಇದಕ್ಕೂ ಮುನ್ನಾ ಸದಾಶಿವ ನಗರದ ನಿವಾಸಕ್ಕೆ ತೆರಳಿ ಎಸ್ಎಂ ಕೃಷ್ಣ ಅವರನ್ನು ಭೇಟಿ ಮಾಡಿದ್ದಾರೆ. ಭಾನುವಾರ ರಾಜೀವ್ ಗಾಂಧಿ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ನಾನು ಎಸ್ಎಂ ಕೃಷ್ಣ ಶಿಷ್ಯನಲ್ಲ, ನಾನು ಬಂಗಾರಪ್ಪ ಶಿಷ್ಯ ಎಂದು ಹೇಳಿ ಅಚ್ಚರಿ ಮೂಡಿಸಿದ್ದ ಶಿವಕುಮಾರ್ ಮರುದಿನವೇ ಮಾಜಿ ಮುಖ್ಯಮಂತ್ರಿ ಭೇಟಿಯಾಗುವ ಮೂಲಕ ಡ್ಯಾಮೇಜ್ ಕಂಟ್ರೋಲ್ ಗೆ ಮುಂದಾಗಿದ್ದಾರಾ ಎಂಬ ಮಾತು ಕೇಳಿ ಬಂದಿತ್ತು.

---

## ಕಾರಿನಲ್ಲಿ 1.70 ಕೋಟಿ ಪತ್ತೆ



ಗದಗ : ಗದಗ ಜಿಲ್ಲೆ ನರಗುಂದ ಪಟ್ಟಣದ ಮೂಲಕ ಹಾದುಹೋಗುತ್ತಿದ್ದ ಕಾರನ್ನು ಪರಿಶೀಲಿಸಿದಾಗ ಅದರಲ್ಲಿ ಅಪಾರ ಪ್ರಮಾಣದ ಹಣ ಪತ್ತೆಯಾದ ಘಟನೆ ನಡೆದಿದೆ.

ಕಾರಿನಲ್ಲಿ ಸುಮಾರು 1.70 ಕೋಟಿ ರೂಪಾಯಿ ಹಣ ಸಿಕ್ಕಿದೆ. ಇದಕ್ಕೆ ಸೂಕ್ತ ದಾಖಲೆಗಳು ನೀಡದ ಕಾರಣ ಪೊಲೀಸರು ಈ ಹಣವನ್ನು ಜಪ್ತಿ ಮಾಡಿಕೊಂಡಿದ್ದಾರೆ.

ಈ ಹಣ ಹುಬ್ಬಳ್ಳಿ ಮೂಲದ ವ್ಯಾಪಾರಿ ವಿಕ್ರಮ್ ಸಿಂಗ್ ಎಂಬುವವರಿಗೆ ಸೇರಿದ್ದು ಎಂದು ತಿಳಿದುಬಂದಿದೆ. ಈ ಕಾರು ಬಾಗಲಕೋಟೆಯಿಂದ ಹುಬ್ಬಳ್ಳಿ ಕಡೆಗೆ ಹೊರಟಿತ್ತು ಎಂದು ತಿಳಿದುಬಂದಿದೆ.

ಚುನಾವಣೆ ಮುಗಿದಿದೆ. ಹೊಸ ಸರ್ಕಾರ ರಚನೆಯೂ ಆಗಿದೆ. ಆದರೂ, ಹಣದ ಅಕ್ರಮ ವರ್ಗಾವಣೆ ಮುಂದುವರೆದೇ ಇದೆ.

---

## ಸಂವಿಧಾನದ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ ಸತೀಶ್ ಜಾರಕಿಹೊಳಿ



ಬೆಂಗಳೂರು: ವಿಧಾನಸಭೆ ಕಲಾಪದಲ್ಲಿ ನೂತನ ಶಾಸಕರಿಂದ ಪ್ರಮಾಣವಚನ ಸ್ವೀಕಾರ ಪ್ರಕ್ರಿಯೆ ನಡೆದಿದ್ದು, ಯಮಕನಮರಡಿ ಶಾಸಕರಾದ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರು ಸಂವಿಧಾನದ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಒಂದೆಡೇ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರು ಪ್ರಮಾಣವಚನ ಸ್ವೀಕರಿಸುತ್ತಿದ್ದಂತೆ ಬೆಳಗಾವಿ ಜಿಲ್ಲೆಯಾದ್ಯಂತ ಸತೀಶ್ ಜಾರಕಿಹೊಳಿ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಬೆಳಗಾವಿಯ ಚನ್ನಮ್ಮ ವೃತ್ತದಲ್ಲಿ 32 ಅಡಿ ಎತ್ತರದ ಕಟೌಟ್ ನಿರ್ಮಿಸಿ, ಪಟಾಕಿ ಸಿಡಿಸಿ–ಸಿಹಿ ಹಂಚಿ ಸಂಭ್ರಮಾಚರಿಸಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಭರ್ಜರಿ ಬಹುಮತದೊಂದಿಗೆ ಅಧಿಕಾರದ ಗದ್ದುಗೆ ಏರಿದ್ದು, ಬೆಳಗಾವಿ ಜಿಲ್ಲೆಯ 18 ಕ್ಷೇತ್ರಗಳ ಪೈಕಿ 11ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಿ ಬಿಜೆಪಿಯನ್ನು ದೂಳಿಪಟ ಮಾಡಿದ್ದಾರೆ. ಒಟ್ಟಾರೆ ಬೆಳಗಾವಿ ಜಿಲ್ಲೆಯಲ್ಲಿ ಅತಿ ಹೆಚ್ಚು ಸಂಖ್ಯೆಯಲ್ಲಿ ಕಾಂಗ್ರೆಸ್ ಸ್ಥಾನ ಪಡೆಯುವಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಪ್ರಮುಖ ಪಾತ್ರ ವಹಿಸಿದ್ದು, ಇಂದು ಸಾಹುಕಾರ್ ಶ್ರಮಕ್ಕೆ ಸಚಿವ ಸ್ಥಾನ ಒಲಿದು ಬಂದಿದೆ.

---

## ಬಿಜೆಪಿ ಸರ್ಕಾರದ ಮೇಲಿನ 40% ಕಮಿಷನ್ ಆರೋಪ


## ದಾಖಲೆಸಹಿತ ತೋರಿಸಲಿ: ಕಾಂಗ್ರೆಸ್ ಗೆ ಮಾಜಿ ಸಿಎಂ ಬೊಮ್ಮಾಯಿ ಸವಾಲ್

ಬೆಂಗಳೂರು: ಬಿಜೆಪಿ ಸರ್ಕಾರದ ಮೇಲಿನ 40% ಕಮಿಷನ್ ಆರೋಪವನ್ನು ಕಾಂಗ್ರೆಸ್ ಸರ್ಕಾರ ದಾಖಲೆಸಹಿತ ತೋರಿಸಲಿ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸವಾಲ್ ಹಾಕಿದರು.

ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ಬಿಜೆಪಿ ಅವಧಿಯ ಹಗರಣಗಳ ತನಿಖೆ ಮಾಡುತ್ತೇವೆ ಎಂದಿರುವ ಕಾಂಗ್ರೆಸ್ ಗೆ, ನಾನು ಸ್ಪಷ್ಟವಾಗಿ ಹೇಳುತ್ತಿದ್ದೇನೆ. ದಯವಿಟ್ಟು ಎಲ್ಲ ತನಿಖೆ ಮಾಡಲಿ. 40% ಕಮೀಷನ್ ಆರೋಪವನ್ನು ನಮ್ಮ ಮೇಲೆ ಅವರು ಹೊರೆಸಿದ್ದಾರೆ. 40% ಆಗಿದೆ ಅಂತ ಅವರು ಪುರಾವೆ ಸಮೇತ ತೋರಿಸಬೇಕು. ಕಾಂಗ್ರೆಸ್ ಸರ್ಕಾರ 40% ಆರೋಪ ಕುರಿತ ಎಲ್ಲ ದಾಖಲೆ ಕೊಡಲಿ. ನಾವು 40% ಕಮೀಷನ್ ತೆಗೆದುಕೊಂಡಿದ್ದೇವೆ ಎಂಬುದನ್ನು ದಾಖಲೆಸಹಿತ ತೋರಿಸಲಿ. ಈ ಸಂಬಂಧ ನಾನು ಕೂಡ ಆಗ್ರಹ ಮಾಡುತ್ತೇನೆ ಎಂದರು.

ಗುತ್ತಿಗೆದಾರರ ಸಂಘದವರೂ 40% ಕಮೀಷನ್ ಆರೋಪ ಮಾಡಿದ್ದರು. ಈಗ ಅವರ ಸರ್ಕಾರ ಬಂದಿದೆ. 40% ಇಲ್ಲ ಅಂತ ಹೇಳಬಹುದು. ಗುತ್ತಿಗೆದಾರ ಸಂಘದವರು ಇನ್ನು ಮುಂದಿನ ಎಲ್ಲ ಟೆಂಡರ್‌ಗಳಲ್ಲೂ 40% ಕಡಿಮೆ ಹಾಕಲಿ. ಅಂದರೆ ಮಾತ್ರ ನಮ್ಮ ಕಾಲದಲ್ಲಿ 40% ಇತ್ತು ಅಂತ ಆಗುತ್ತದೆ. ಇವತ್ತು ಅಷ್ಟೇ ಮೊತ್ತಕ್ಕೆ ಟೆಂಡರ್ ಹಾಕಿದರೆ, 40% ಈಗಲೂ ಇದೆ ಅಂತ ಆಗುತ್ತದೆ ಎಂದರು.

ಗುತ್ತಿಗೆದಾರರು ಸಂಘದ ಅಧ್ಯಕ್ಷ ಕೆಂಪಣ್ಣ ಮೇಲೆ ಬಹಳ ದೊಡ್ಡ ಜವಾಬ್ದಾರಿ ಇದೆ. ಇನ್ಮೇಲೆ ಕೆಂಪಣ್ಣ ತಮ್ಮೆಲ್ಲ ಸಂಘದವರಿಗೂ 40% ಕಮ್ಮಿಗೆ ಟೆಂಡರ್ ಹಾಕುವಂತೆ ಹೇಳಬೇಕು.



ಕೆಂಪಣ್ಣ ಇದುವರೆಗೆ 40% ದಾಖಲೆ ಕೊಡ್ಲಿಲ್ಲ, ಕೋರ್ಟ್‌ಗೂ ಕೊಡ್ಲಿಲ್ಲ. ನಮ್ಮ ವಿರುದ್ಧ ಅಪಪ್ರಚಾರ ಮಾಡಿದರು. ಕಾಂಗ್ರೆಸ್‌ನವರು ಅದರ ಲಾಭ ತೆಗೆದುಕೊಂಡಿದ್ದಾರೆ.

ನಮ್ಮ ಕಾಲದ, ಅವರ ಕಾಲದ ಎಲ್ಲವನ್ನೂ ತನಿಖೆ ಮಾಡಲಿ. ಅದರ ಜೊತೆಗೆ ಪಿಎಸ್‌ಐ ಪ್ರಕರಣವನ್ನೂ ತನಿಖೆ ಮಾಡಲಿ. ಎಲ್ಲ ಪ್ರಕರಣಗಳ ಸತ್ಯ ಹೊರಗೆ ಬರಲಿ. ನಾವು ಅವರ ಕಾಲದ ಹಗರಣಗಳನ್ನು ಲೋಕಾಯುಕ್ತಕ್ಕೆ ಕೊಟ್ಟಿದೀವಿ ಎಂದರು.

**ಗ್ಯಾರಂಟಿ ಬಗ್ಗೆ ಜನರಿಗೆ ಕಾಂಗ್ರೆಸ್ ಮೋಸ ಮಾಡಿದೆ:**

ಗ್ಯಾರಂಟಿ ಸ್ಕೀಂ ಬಗ್ಗೆಯೂ ಬಹಳ ಜನ ಹೇಳಿದ್ದಾರೆ. ಗ್ಯಾರಂಟಿ ಬಗ್ಗೆ ಜನರಿಗೆ ಕಾಂಗ್ರೆಸ್ ಮೋಸ ಮಾಡಿದೆ. ಕಾರ್ಯಕರ್ತರು ಜನರ ಬಳಿ ಹೋಗಿ ಹೇಳಿಲ್ಲ. ಅದರ ಬಗ್ಗೆ ಯಾವುದೋ ಬ್ಯಾಂಕ್ ನಿಂದ, ಕಂಪೆನಿಯಿಂದ ಬಂದವರ ರೀತಿ ಹೋಗಿ ಗ್ಯಾರಂಟಿ ಸ್ಕೀಂ ಬಗ್ಗೆ ಹೇಳಿದ್ದಾರೆ. ಬೆಂಗಳೂರಿನಲ್ಲಿ ಡಿಸಿ ಆಫೀಸ್ ನಿಂದ ಅಂತ ಕರೆ ಮಾಡಿ ಸುಳ್ಳು ಹೇಳಿದ್ದಾರೆ.

ಯಾವ ಡಿಸಿ ಆಫೀಸ್ ಅಂದರೆ, ಡಿಸ್ಟ್ರಿಕ್ಟ್ ಕಾಂಗ್ರೆಸ್ ಆಫೀಸ್ ಅಂತ ಹೇಳಿದ್ದಾರೆ. ಈ ತರಹ ಮೋಸ ಮಾಡಿ ಗ್ಯಾರಂಟಿ ಸ್ಕೀಂ ಬಗ್ಗೆ ಹೇಳಿದ್ದಾರೆ. ಎಲ್ಲವೂ ಮುಂದೆ ಬೆಳಕಿಗೆ ಬರಲಿದೆ ಎಂದರು.

**ಲೋಕಸಭಾ ಚುನಾವಣೆ ತಯಾರಿ; ಬಿಜೆಪಿ ಪದಾಧಿಕಾರಿಗಳು ಮತ್ತು ನಾಯಕರಿಂದ ರಾಜ್ಯ ಪ್ರವಾಸ:**

ನಿನ್ನೆ ಬಿಜೆಪಿ ಆತ್ಮಾವಲೋಕ ಸಭೆ ನಡೆಸಿದ್ದೇವೆ. ಎಲ್ಲ ಜಿಲ್ಲೆಗಳಿಂದ ವರದಿ ತರಿಸಿದ್ದೇವೆ. ಒಂದೊಂದು ಜಿಲ್ಲೆಗಳಲ್ಲಿ ಒಂದೊಂದು ರೀತಿ ಚುನಾವಣೆ ನಡೆದಿದೆ. ಕೆಲವು ಕಡೆ ಲೋಪದೋಷಗಳಾಗಿದ್ದು, ಸರಿಪಡಿಸಲು ತೀರ್ಮಾನ ಮಾಡಿದ್ದೇವೆ. ಮುಂದೆ ಪಕ್ಷ ಪುನರ್ ಸಂಘಟನೆ, ಲೋಕಸಭೆ ಚುನಾವಣೆ ತಯಾರಿ ಬಗ್ಗೆ ತೀರ್ಮಾನ ಮಾಡಿದ್ದೇವೆ.

ಮುಂದಿನ ದಿನಗಳಲ್ಲಿ ಬಿಜೆಪಿ ಪಕ್ಷದ ನಾಯಕರು, ಪದಾಧಿಕಾರಿಗಳು ರಾಜ್ಯ ಪ್ರವಾಸ ಮಾಡಲು ತೀರ್ಮಾನಿಸಲಾಗಿದೆ. ಚುನಾವಣೆ ಸೋಲಿಗೆ ಹಲವು ಕಾರಣಗಳನ್ನು ಕಂಡುಕೊಂಡಿದ್ದೇವೆ. ಕೆಲವು ಕಡೆ ಅಭ್ಯರ್ಥಿಗಳು ಕಾರಣ, ಕೆಲವು ಕಡೆ ಸಂಘಟನೆ ಕಾರಣ ಎನ್ನುವುದು ತಿಳಿದು ಬಂದಿದೆ ಎಂದರು.

## ಕಿವುಡ ಮಕ್ಕಳ ಶಾಲೆ: ಅಂಶಕಾಲಿಕ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಇಲ್ಲಿನ ಕಿವುಡ ಮಕ್ಕಳ ಸರಕಾರಿ ಶಾಲೆಗೆ ಪದವಿದರ ಸಹಾಯಕ ಶಿಕ್ಷಕರನ್ನು ಅಂಶಕಾಲಿಕವಾಗಿ ಮಾಸಿಕ ಗೌರವಧನ ಗರಿಷ್ಟ ರೂ: 6,000=00 (ಆರು ಸಾವಿರ ) ರಂತೆ ಭೋಧನೆ ಮಾಡಲು ಒಟ್ಟು 3 (ಮೂರು) ಅಭ್ಯರ್ಥಿಗಳನ್ನು ಭರ್ತಿಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಶ್ರವಣದೋಷವುಳ್ಳ ಮಕ್ಕಳಿಗೆ ಪಾಠ ಮಾಡಲು ವಿಶೇಷ ಶಿಕ್ಷಣ/ತರಬೇತಿ ಹೊಂದಿರುವವರಿಗೆ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

ಆಸಕ್ತರು ದಿನಾಂಕ: 30–05–2023 ರ ಒಳಗಾಗಿ "ಅಧೀಕ್ಷಕರು ಕಿವುಡ ಮಕ್ಕಳ ಸರಕಾರಿ ಶಾಲೆ ಅಜಮ ನಗರ, ವಿದ್ಯಾಗಿರಿ ಬೆಳಗಾವಿ–590010" ಇವರಿಗೆ ಅಗತ್ಯ ದೃಢೀಕೃತ ದಾಖಲಾತಿಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:–9901073686 ಅಥವಾ9663711081 ಸಂಪರ್ಕಿಸಬಹುದಾಗಿದೆ ಎಂದು ಕಿವುಡ ಮಕ್ಕಳ ಸರಕಾರಿ ಶಾಲೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

ಬೆಳಗಾವಿ: ಬೆಳಗಾವಿಯ 33/11 ಕೆ.ವ್ಹಿ ಸದಾಶಿವ ನಗರ ಉಪಕೇಂದ್ರ ವಿದ್ಯುತ ಸರಬರಾಜು ಆಗುವ ಬೆಳಗಾವಿ ನಗರದ ಈ ಕೆಳಗೆ ತಿಳಿಸಿದ ವಿದ್ಯುತ್ ಉಪಕೇಂದ್ರದಿಂದ ಹೊರಡುವ ಪೂರಕಗಳ ಮೇಲೆ ಬರುವ ಪ್ರದೇಶಗಳಲ್ಲಿ ಮಂಗಳವಾರ ಮೆ. 23, 24 ಮುಂಜಾನೆ 10 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಆಗಲಿದೆ.

ವಿದ್ಯುತ್ ವ್ಯತ್ಯಯ ಆಗುವ ಪ್ರದೇಶಗಳು ಎಫ್–02 ಪೋರ್ಟರೋಡ ವ್ಯಾಪ್ತಿಯ ಬಾಜಿ ಮಾರ್ಕೆಟ, ಕಿಲ್ಲಾ,ಪಾಟೀಲ ಗಲ್ಲಿ, ಭಾಂಧೂರಗಲ್ಲಿ, ತಹಶಿಲ್ದಾರ ಗಲ್ಲಿ, ರವಿವಾರ ಪೇಟೆ, ಅನಂತಶಯನಗಲ್ಲಿ ಕುಲಕರ್ಣಿಗಲ್ಲಿ,ಶೆರಿಗಲ್ಲಿ, ಘುಲಭಾಗಗಲ್ಲಿ ಎರಿಯಾ ಮಠಗಲ್ಲಿ ಕಲ್ಮಠಗಳಲ್ಲಿ.

ಎಫ್–5 ಶೆಟ್ಟಿಗಲ್ಲಿ ವ್ಯಾಪ್ತಿಯ ಐಬಿ, ಸೆಂಟ್ರಲ ಬಸ್ ನಿಲ್ದನ ಶೆಟ್ಟಿಗಲಿ ಚವಟಗಲ್ಲಿ, ನಾನಾ ಪಾಟೀಲ ಚೌಕ, ದರಬಾರಗಲ್ಲಿ, ಜಾರಗಾರಗಲ್ಲಿ, ಕಸಾಯಿಗಲ್ಲಿ, ಕಿರ್ತಿ ಹೋಟೆಲ, ಪರೆಸ್ಟ ಆಫೀಸ್,ಆರ್‌ಟಿಓ ಆಫೀಸ್,ಕೋತವಾಲಗಲ್ಲಿ,ಡಿಸಿಸಿ ಬ್ಯಾಂಕ, ಖಡೇ ಬಜರ,ಭಾಗಶಂ,ಶೀತಲ ಹೋಟೆಲ ವರಗೆ, ಎಫ್–6 ಖಡೆಬಜಾರ,ಬೆಂಡಿ ಬಜಾರ,ಪಾಂಗೂಳಿಗಲ್ಲಿ, ಮೇಣಸೇಗಲ್ಲಿ,ಮಾಗಲ್ಲಿ, ಕಲಾಯಿಗಾರಗಲ್ಲಿ, ಖಂಜರಗಲ್ಲಿ,ಕಚೇರಿರೋಡ,ಕಾಕತಿ, ಎಫ್–8 ಮಾಳಿಗಲ್ಲಿ ವ್ಯಾಪ್ತಿಯ ವೇಸ, ರಿಸಾಲ್ದಾರಗಲ್ಲಿ, ನಾರ್ವೇಕರಗಲ್ಲಿ, ತರುಣ ಭಾರತ ಪ್ರೆಸ, ಗವಳಿಗಲ್ಲಿ,ಖಢಕಗಲ್ಲಿ, ಬಡಕಲಗಲ್ಲಿ ಆಯಾದ ನಗರ ವ್ಯಾಪ್ತಿಯ ಬರುವ ಆಯಾದ ನಗರ ಎರಿಯಾ, ಹಳೇಗಾಂಧಿನಗರ, ದೀಪಕ ಗಲ್ಲಿ, ಸಂಕಮ ಹೋಟೆಲ, ಬಾಗಲಕೋಟರಸ್ತೆ.

ಎಫ್–7 ಧಾರವಾಡ ರೋಡ, ವ್ಯಾಪ್ತಿಯ ಉಜ್ವಲನಗರ ನ್ಯೂಗಾಂದಿ ನಗರ,ಅಮನ ನಗರ, ಎಸ ಸಿ ಮೋಟಾರ್ಸ ಎರಿಯಾ,ಮಾರುತಿ ನಗರ, ಎಫ್–8 ಬಸವ ನಗರ ವ್ಯಾಪ್ತಿಯ ಬಸವನ ಕುಡಚಿ ,ದೇವರಾಜ ಅರಸ ಕಾಲನಿ,ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ.

ಎಫ್ 1, ಕುಮಾರಸ್ವಾಮಿ ಲೇಔಟ್ ವ್ಯಾಪ್ತಿಯ ಕುಮಾರಸ್ವಾಮಿ ಲೇಔಟ್ ವಿದ್ಯಾ ಗಿರಿ, ಸಾರಥಿನಗರ. ಎಫ್ 2 ಹನುಮಾನ್ ನಗರ ವ್ಯಾಪ್ತಿಯ ಹನುಮಾನ ನಗರ ಸ್ಟೇಜ್ 1,2,3,4, ಕುವೆಂಪು ನಗರ, ಮಾಡರ್ನ ಕೋ ಆಪರೇಟಿವ್ ಹೌಸಿಂಗ್ ಸೊಸೈಟಿ (ಬಸವೇಶ್ವರನಗರ) ಟಿವಿ ಸೆಂಟರ್, ಬಾಕ್ಸೈಟ್ ರೋಡ್, ಕುಮಾರಸ್ವಾಮಿ ಲೇಔಟ್, ಎಫ್ 3, ಸಹ್ಯಾದ್ರಿನಗರ ವ್ಯಾಪ್ತಿಯ ಸಹ್ಯಾದ್ರಿನಗರ, ಸ್ಕೀಮ್ ನಂ 47, ಸ್ಕೀಮ್ ನಂ51, ಬುಡಾ,ಕುವೆಂಪು ನಗರ, ವಿಜಯನಗರ, ಪೈಪ್ ಲೈನ್ ರೋಡ್, ಸೈನಿಕ್ ನಗರ, ಲಕ್ಷ್ಮಿ ಟೇಕ ನೀರು ಸರಬರಾಜು, ವಿನಾಯಕ ನಗರ,ಹಿಂಡಲಗಾ, ಗಣಪತಿ ದೇವಸ್ಥಾನ, ಮಹಾಬಲೇಶ್ವರ ನಗರ, 33 ಕೆವ್ಹಿ ಕೆ.ಎಲ್. ಎ. ಪೀಡರ್ ವ್ಯಾಪ್ತಿಯ 33 ಕೆವ್ಹಿ ಕೆ.ಎಲ್.ಎ ಸ್ಥಾವರದ ,ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ. ಎಂದು ಕಾರ್ಯ ಮತ್ತು ಪಾಲನೆ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿವಿಧ ತಾಲೂಕುಗಳಿಗೆ ಲೋಕಾಯುಕ್ತ ಅಧಿಕಾರಿಗಳ ಭೇಟಿ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಿಗೆ ಲೋಕಾಯುಕ್ತ ಅಧಿಕಾರಿಗಳು ಮೇ.23 ರಿಂದ 26 ರವರೆಗೆ ಭೇಟಿ ನೀಡಲಿದ್ದಾರೆ.

ಸರ್ಕಾರಿ ಕಛೇರಿಗಳಲ್ಲಿ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ಹಾಗೂ ಸದರಿ ಸರ್ಕಾರಿ ಕೆಲಸ ನಿರ್ವಹಿಸಲು ಹಣ, ಲಂಚ, ವಸ್ತುಗಳ ಬೇಡಿಕೆ ಇಟ್ಟಲ್ಲಿ ಸಾರ್ವಜನಿಕರು ತಮ್ಮ ದೂರುಗಳನ್ನು ನೇರವಾಗಿ ಲೋಕಾಯುಕ್ತ ಅಧಿಕಾರಿಗಳಿಗೆ ಸಲ್ಲಿಸಬಹುದು.

**ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕುವಾರು ಭೇಟಿ ವಿವರ:**

ಕರ್ನಾಟಕ ಲೋಕಾಯುಕ್ತ ಪಿಐ ರವಿಕುಮಾರ ಧರ್ಮಟ್ಟಿ ಮೇ. 23 ರಂದು ಮುಂಜಾನೆ 11 ಗಂಟೆಯಿಂದ 2 ವರೆಗೆ ಕರ್ನಾಟಕ ಪ್ರವಾಸಿ ಮಂದಿರ ಅಥಣಿ, ಲೋಕಾಯುಕ್ತ ಡಿ.ಎಸ್.ಪಿ. ಬಿ.ಎಸ್ ಪಾಟೀಲ, ಮೇ..25 ರಂದು ಮುಂಜಾನೆ 11 ಗಂಟೆಯಿಂದ 2 ವರೆಗೆ ಕ. ಲೋ. ಕಛೇರಿ ಬೆಳಗಾವಿ, ಡಿ.ಎಸ್.ಪಿ. ಭರತ ಎಸ್. ಆರ್ ಇವರು ಮೇ.25 ರಂದು ಮುಂಜಾನೆ 10.30 ರಿಂದ 1 ಗಂಟೆ ವರೆಗೆ ಪ್ರವಾಸಿ ಮಂದಿರ ಸವದತ್ತಿ, ಪಿಐ ಯು.ಎಸ್.ಅವಟಿ ಇವರು ಮೇ.25 ರಂದು ಮದ್ಯಾಹ್ನ 2 ರಿಂದ 4.30 ಗಂಟೆಯವರೆಗೆ ಪ್ರವಾಸಿ ಮಂದಿರ ಹುಕ್ಕೇರಿ ಇಲ್ಲಿ ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ.

ಡಿ.ಎಸ್.ಪಿ.ಭರತ ಎಸ್ ಆರ್ ಇವರು ಮೇ.25 ರಂದು ಮದ್ಯಾಹ್ನ 2 ರಿಂದ 4.30 ವರೆಗೆ ಪ್ರವಾಸಿ ಮಂದಿರ ಬೈಲಹೊಂಗಲ, ಪಿಐ ಯು.ಎಸ್. ಅವಟಿ ಇವರು ಮೇ.25 ರಂದು ಮುಂಜಾನೆ 10.30 ಗಂಟೆಯಿಂದ 1 ವರೆಗೆ ಗಂಟೆಯವರೆಗೆ ಪ್ರವಾಸಿ ಮಂದಿರ ನಿಪ್ಪಾನಿ, .ನಿರಂಜನ ಎಮ್. ಪಾಟೀಲ ಮೇ.25 ರಂದು ಮುಂಜಾನೆ 11 ರಿಂದ 2 ಗಂಟೆಯವರೆಗೆ ಪ್ರವಾಸಿ ಮಂದಿರ ಚಿಕ್ಕೋಡಿ,ಲೋಕಾಯುಕ್ತ ಡಿ.ಎಸ್.ಪಿ. ಜೆ.ರಘು ಮೇ.26 ರಂದು ಮುಂಜಾನೆ 10:30 ರಿಂದ 1 ಗಂಟೆವರೆಗೆ ಪ್ರವಾಸಿ ಮಂದಿರ ಗೋಕಾಕ, ಲೋಕಾಯುಕ್ತ ಡಿ.ಎಸ್.ಪಿ. ಜೆ.ರಘು ಮೇ.26 ರಂದು ಮಧ್ಯಾಹ್ನ 02 ರಿಂದ 4.30 ಗಂಟೆಯವರೆಗೆ ತಹಶೀಲ್ದಾರ ಕಛೇರಿ ಮೂಡಲಗಿ, ಕರ್ನಾಟಕ ಲೋಕಾಯುಕ್ತ ಪಿಐ ಪಿ.ನಿರಂಜನ ಎಮ್. ಪಾಟೀಲ ಮೇ.26 ರಂದು ಮುಂಜಾನೆ 11 ರಿಂದ 2 ಗಂಟೆಯವರೆಗೆ ಪ್ರವಾಸಿ ಮಂದಿರ ರಾಯಬಾಗ ಇಲ್ಲಿ ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ. ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಧಾನಸಭೆಯ ಮೊದಲ ದಿನ ಹೀಗಿತ್ತು

ಬೆಂಗಳೂರು: ವಿಧಾನಸಭೆಯಲ್ಲಿ ಸಂಭ್ರಮದ ವಾತಾವರಣ. ಚುನಾವಣಾ ಕಣದಲ್ಲಿ ರೋಷಾವೇಶದಿಂದ ಹೋರಾಡಿ ಮೊದಲ ಬಾರಿ ಗೆದ್ದು ಬಂದವರ ಸಂಭ್ರಮ, ಹಿರಿಯರ ಸಂತೃಪ್ತಿ, ಹಳೆ ಮಿತ್ರರ ಸಮಾಗಮಕ್ಕೆ ವಿಧಾನಸಭೆ ಅಧಿವೇಶನದ ಮೊದಲ ದಿನ ವೇದಿಕೆಯಾಗಿತ್ತು. ನಗು, ಹಾಸ್ಯ, ಪರಸ್ಪರ ಕಾಲೆಳೆಯುವಿಕೆಯ ಮಧ್ಯೆಯೇ ನೂತನವಾಗಿ ಆಯ್ಕೆಯಾದ ಶಾಸಕರ ಪ್ರಮಾಣ ವಚನ ಸ್ವೀಕಾರ ನಡೆಯಿತು.

ಮೊದಲ ದಿನವೇ ವಿಧಾನಸಭೆಯಲ್ಲಿ ಶಾಸಕರು ತುಂಬಿ ತುಳುಕಬಹುದು ಎಂಬ ನಿರೀಕ್ಷೆ ಹುಸಿಯಾಯಿತು. ಮೊದಲ ಬಾರಿ ಆಯ್ಕೆ ಆದವರೂ ಸೇರಿ ಸಾಕಷ್ಟು ಶಾಸಕರು ಅಧಿವೇಶನಕ್ಕೆ ಬಂದಿರಲಿಲ್ಲ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇತರ ಎಲ್ಲರಿಗಿಂತಲೂ ಹೆಚ್ಚು ಚುರುಕಿನಿಂದ ಓಡಾಡುತ್ತಿದ್ದರು. ಆಡಳಿತ ಪಕ್ಷದ ಮೊಗಸಾಲೆಯಲ್ಲೂ ಓಡಾಡಿ ಸಿಕ್ಕಿದ ಶಾಸಕರನ್ನು ಆತ್ಮೀಯತೆಯಿಂದ ಮಾತನಾಡಿಸಿದರು. ವಿರೋಧ ಪಕ್ಷದ ಸದಸ್ಯರು ಪ್ರವೇಶಿಸುವ ದ್ವಾರದ ಮೂಲಕ ಒಳಗೆ ಬಂದು ವಿರೋಧ ಪಕ್ಷದ ಸಾಲಿನಲ್ಲಿ ಕುಳಿತಿದ್ದ ಶಾಸಕರನ್ನು ಮಾತನಾಡಿಸಿದರು. ಕೆಲವರನ್ನು ಅಪ್ಪಿಕೊಂಡರೆ, ಇನ್ನು ಕೆಲವರ ಬೆನ್ನಿಗೆ ಗುದ್ದಿ ಆತ್ಮೀಯತೆ ಪ್ರದರ್ಶಿಸಿದರು.



ಕಾಂಗ್ರೆಸ್ ತನ್ವೀರ್ ಸೇಠ್ ಅವರು ಬಿಜೆಪಿಯ ಎಲ್ಲ ನಾಯಕರನ್ನು ಅವರು ಕೂತಿದ್ದ ಆಸನದ ಬಳಿಯೇ ಹೋಗಿ ಹಸ್ತಲಾಘವ ನೀಡಿ ಶುಭ ಕೋರಿದರು. ಪ್ರಿಯಾಂಕ್ ಖರ್ಗೆ, ಲಕ್ಷ್ಮಿ ಹೆಬ್ಬಾಳ್ಕರ್, ಗಣೇಶ್, ಅನಿಲ್ ಚಿಕ್ಕಮಾದು ಸೇರಿದಂತೆ ಹಲವರು ವಿರೋಧ ಪಕ್ಷದ ಸಾಲಿಗೆ ಬಂದು ಹಿರಿಯ ಶಾಸಕರನ್ನು ಮಾತನಾಡಿಸಿದರು. ಕೆಲವು ಹೊಸ ಮತ್ತು ಯುವ ಶಾಸಕರು ಹಿರಿಯ ಶಾಸಕರ ಕಾಲು ಮುಟ್ಟಿ ಆಶೀರ್ವಾದ ಕೋರಿದರು.

ಹಂಗಾಮಿ ಸಭಾಧ್ಯಕ್ಷ ಪೀಠಕ್ಕೆ ಬರುವವರೆಗೂ ಇದು ನಡೆದೇ ಇತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಮ್ಮ ಆಸನದಲ್ಲೇ ಕುಳಿತು ಪರಸ್ಪರ ನಮಸ್ಕಾರ ವಿನಿಮಯ ಮಾಡಿಕೊಂಡರು. ಖಾನಾಪುರ ಶಾಸಕ ವಿಠಲರಾವ್ ಹಲಗೇಕರ ಅವರು ಕೇಸರಿ ಪೇಠ ಧರಿಸಿ ಬಂದಿದ್ದರೆ, ಬಸನಗೌಡ ಪಾಟೀಲ ಯತ್ನಾಳ ಕೇಸರಿ ವಾಸ್ಕೋಟ್ ಧರಿಸಿದ್ದರು. ಕಾಂಗ್ರೆಸ್‌ನ ಅಶೋಕ ಪಟ್ಟಣ್ಣ ನೀಲಿ ಬಣ್ಣದ ಶೇರ್ವಾನಿ ಧರಿಸಿ ಬಂದಿದ್ದರು. ಅಶೋಕ ಪಟ್ಟಣ ಅವರನ್ನು ಉದ್ದೇಶಿಸಿ ಬಸವರಾಜ ಬೊಮ್ಮಾಯಿ, 'ಬ್ಲೂ ಡೇ' ಎಂದು ಕಿಚಾಯಿಸಿದರು.

ಸದನದ ಅತ್ಯಂತ ಹಿರಿಯ ಶಾಸಕರೂ ಆಗಿರುವ ಆರ್.ವಿ.ದೇಶಪಾಂಡೆ ಹಂಗಾಮಿ ಸಭಾಧ್ಯಕ್ಷರಾಗಿ ಶಾಸಕರಿಗೆ ಪ್ರಮಾಣ ವಚನ ಬೋಧಿಸುವಂತೆ ಕಾರ್ಯದರ್ಶಿ ವಿಶಾಲಾಕ್ಷಿ ಅವರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಲ್ಲಿ ಹಿರಿಯರು ಮತ್ತು ಹೊಸಬರು ಬಂದಿದ್ದಾರೆ. ಎಲ್ಲರೂ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮವಹಿಸಬೇಕು. ನಾಡಿನ ಪ್ರಗತಿ ಮತ್ತು ವಿಶ್ವದಲ್ಲೇ ಕರ್ನಾಟಕ ಆದರ್ಶ, ಶಾಂತಿ, ಸಮೃದ್ಧಿ ಮತ್ತು ಪ್ರೀತಿ ವಿಶ್ವಾಸಗಳ ನಾಡು ಎಂಬ ಖ್ಯಾತಿ ಪಡೆಯುವ ನಿಟ್ಟಿನಲ್ಲಿ ರಾಜ್ಯವನ್ನು ಕಟ್ಟಬೇಕು ಎಂದು ಸಲಹೆ ನೀಡಿದರು.

ಆಡಳಿತ ಸಾಲಿನಲ್ಲಿದ್ದವರ ಮುಖ ಅರಳಿದ್ದರೆ, ವಿರೋಧಿ ಸಾಲಿನಲ್ಲಿದ್ದ ಬಹುತೇಕರು ಬೇಸರದ ಮೂಡ್‌ನಲ್ಲೇ ಇದ್ದರು. ಪರಸ್ಪರ ತಿಳಿ ಹಾಸ್ಯದ ಮೂಲಕ ಬೇಸರದ ಭಾವವೂ ತಿಳಿಯಾಯಿತು.

## ಗಾಳಿ– ಮಳೆಗೆ ಬೆಸ್ಕಾಂ ವ್ಯಾಪ್ತಿಯಲ್ಲಿ 546 ವಿದ್ಯುತ್ ಕಂಬಗಳು ಧರೆಗೆ

ಬೆಂಗಳೂರು: ಬೆಸ್ಕಾಂ ವ್ಯಾಪ್ತಿಯಲ್ಲಿ ಕಳೆದ ಎರಡು ದಿನಗಳಿಂದ ಸುರಿದ ಭಾರಿ ಗಾಳಿ–ಮಳೆಗೆ 546 ವಿದ್ಯುತ್ ಕಂಬಗಳು ಧರೆಗುರುಳಿವೆ. ದುರಸ್ಥಿ ಕಾರ್ಯ ಭರದಿಂದ ಸಾಗಿದ್ದು, ಹಾನಿಯ ಅಂದಾಜು ಮಾಡಲಾಗುತ್ತಿದೆ. ಭಾರೀ ಮಳೆ–ಗಾಳಿಗೆ ವಿದ್ಯುತ್ ಮೂಲಸೌಕರ್ಯಗಳು ಹಾನಿಗೊಂಡಿದ್ದು, ವಿದ್ಯುತ್ ವ್ಯತ್ಯಯ ಉಂಟಾಗಿರುವ ಪ್ರದೇಶಗಳಲ್ಲಿ ವಿದ್ಯುತ್ ಮರು ಸ್ಥಾಪನೆಗೆ ಕ್ರಮ ವಹಿಸಲಾಗಿದೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ ಬೀಳಗಿ ತಿಳಿಸಿದ್ದಾರೆ.

ಶನಿವಾರ ಬೆಂಗಳೂರು ನಗರ ಸೇರಿ ಬೆಸ್ಕಾಂ ವ್ಯಾಪ್ತಿಯ ಹಲವು ಭಾಗಗಳಲ್ಲಿ 142 ಕಂಬಗಳು ಮುರಿದ್ದಿದ್ದು ಹಾಗು 20 ಟಿಸಿಗಳು ಹಾನಿಗೊಳಗಾಗಿವೆ. ಹಾಗೆಯೇ ಭಾನುವಾರ 404 ಕಂಬಗಳು ಮುರಿದ್ದಿದ್ದು, 44 ಟಿಸಿಗಳು ಹಾಗೂ 9 ಡಬಲ್ ಪೋಲ್ ಸ್ಟ್ರಕ್ಚರ್ ಗಳು ಹಾನಿಗೊಳಗಾಗಿವೆ. ಬೆಸ್ಕಾಂ ಅಭಿಯಂತರರು ಹಾಗೂ ಸಿಬ್ಬಂದಿಗಳು ಸ್ಥಳಕ್ಕೆ ತೆರಳಿದ್ದು, ದುರಸ್ಥಿ ಕಾರ್ಯದಲ್ಲಿ ತೊಡಗಿದ್ದಾರೆ. ಕೆಲ ಪ್ರದೇಶದಲ್ಲಿ ಭಾರೀ ಗಾಳಿಗೆ ಮರಗಳು ವಿದ್ಯುತ್ ತಂತಿ ಮೇಲೆ ಬಿದ್ದಿದ್ದು, ಅವುಗಳ ತೆರವು ಕಾರ್ಯ ಮಾಡಲಾಗಿದೆ ಎಂದು ಬೆಸ್ಕಾಂ ಎಂಡಿ ಮಾಹಿತಿ ನೀಡಿದ್ದಾರೆ.

ಬೆಂಗಳೂರು ನಗರ ವ್ಯಾಪ್ತಿಯ ಹೆಬ್ಬಾಳ, ಮಲ್ಲೇಶ್ವರಂ, ಯಲಹಂಕ, ವಿಜಯನಗರದ, ನಾಗರಭಾವಿ, ಮಹಾಲಕ್ಷ್ಮಿ ಬಡಾವಣೆ, ಹೆಸರಘಟ್ಟ, ಕೋರಮಂಗಲ, ರಾಜನಕುಂಟೆ, ಜಯನಗರ, ಶಿವಾಜಿನಗರ, ಇಂದಿರಾನಗರ, ಕೆಂಗೇರಿ, ಆರ್. ಆರ್. ನಗರ, ಪೀಣ್ಯ ಸೇರಿದಂತೆ ಮತ್ತಿತ್ತರ ಪ್ರದೇಶಗಳಲ್ಲಿ, ಬೆಸ್ಕಾಂನ ಗ್ರಾಮಾಂತರ ವ್ಯಾಪ್ತಿಯ ತುಮಕೂರು, ಮಾಲೂರು, ಸರ್ಜಾಪುರ, ಚಂದಾಪುರ, ಶೀಡ್ಲಘಟ್ಟ, ಕೆಜಿಎಫ್, ಕೈವಾರ, ಮಧುಗಿರಿ, ಪಾವಗಡ, ಹಿರಿಯೂರು, ಚಿಂತಾಮಣಿ, ತಿಪಟೂರು, ರಾಮನಗರ ಸೇರಿದಂತೆ ಮತ್ತಿತರ ಕಡೆ ವಿದ್ಯುತ್ ವ್ಯತ್ಯಯ ಉಂಟಾಗಿದೆ. ವಿದ್ಯುತ್ ಕಂಬಗಳ ಮೇಲೆ ಬಿದ್ದಿರುವ ಮರ ಹಾಗೂ ಕೊಂಬೆಗಳನ್ನು ತೆರವುಗೊಳಿಸಲಾಗಿದ್ದು, ವಿದ್ಯುತ್ ಮರುಸ್ಥಾಪನೆ ಮಾಡಲಾಗಿದೆ. ಮುರಿದಿರುವ ಕಂಬಗಳ ಬದಲಾವಣೆ ಮಾಡಿ ಶೀಘ್ರ ವಿದ್ಯುತ್ ಪೂರೈಸಲು ಕ್ರಮ ವಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.



ಸಹಾಯವಾಣಿಗೆ ದೂರುಗಳ ಸುರಿಮಳೆ: ಭಾನುವಾರ ಒಟ್ಟು 44,784 ಕರೆಗಳು ಬೆಸ್ಕಾಂ ಸಹಾಯವಾಣಿ 1912 ಕ್ಕೆ ಬಂದಿದ್ದು, ಈ ಪೈಕಿ 22,249 ದೂರುಗಳನ್ನು ದಾಖಲಿಸಿಕೊಳ್ಳಲಾಗಿದೆ. ಹಾಗೆಯೇ ಪ್ರತಿ 1 ಗಂಟೆ ಅವಧಿಯಲ್ಲಿ ಸರಾಸರಿ 1691 ಕರೆಗಳು ಬಂದಿದ್ದು, 779 ದೂರುಗಳು ದಾಖಲಾಗಿವೆ. ಹೆಚ್ಚಿನ ಕರೆಗಳು ಗಾಳಿ– ಮಳೆಯಿಂದಾಗಿ ವಿದ್ಯುತ್ ವ್ಯತ್ಯಯಕ್ಕೆ ಸಂಬಂದಿಸಿದ್ದಾಗಿದೆ. ವಿದ್ಯುತ್ ಅವಘಡ ಮತ್ತು ಅಪಘಾತ ತಡೆಗೆ ಸಹಾಯವಾಣಿ ಎಚ್ಚರದಿಂದ ಕಾರ್ಯನಿರ್ವಹಿಸುತ್ತಿದ್ದು, ದೂರುಗಳನ್ನು ದಾಖಲಿಸಿಕೊಂಡು ಪರಿಹಾರಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ರವಾನಿಸುತ್ತಿದೆ.

## ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿ ರಜನೀಶ್ ಗೋಯಲ್ ನೇಮಕ

ಬೆಂಗಳೂರು: ಐಎಎಸ್ ಅಧಿಕಾರಿ ರಜನೀಶ್ ಗೋಯಲ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯನ್ನಾಗಿ ನಿಯೋಜಿಸಲಾಗಿದೆ.



ರಜನೀಶ್ ಗೋಯಲ್ ಅವರು ಸದ್ಯ ಗೃಹ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿದ್ದು, ಅದರ ಜೊತೆಗೆ ಹೊಸ ಜವಾಬ್ದಾರಿಯನ್ನು ವಹಿಸಲಾಗಿದೆ.

ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆಗಳ ಇಲಾಖೆಯ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದಾರೆ.

## ಅನುಪಯುಕ್ತ ಸಾಮಗ್ರಿಗಳು ಹಾಗೂ ಪೀಠೋಪಕರಣಗಳ ಬಹಿರಂಗ ಹರಾಜು

ಧಾರವಾಡ: ಅನುಪಯುಕ್ತ ಪೀಠೋಪಕರಣ ಹಾಗೂ ಯಂತ್ರೋಪಕರಣಗಳನ್ನು ಕಲಘಟಗಿಯ ದಾಸ್ತಿಕೊಪ್ಪದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜೂನ್ 12 ರಂದು ಬಹಿರಂಗ ಹರಾಜು ನಡೆಸಲಾಗುವುದು.

ಹರಾಜಿನಲ್ಲಿ ಭಾಗವಹಿಸಲು ಇಚ್ಛಿಸುವವರು ಪ್ರಕ್ರಿಯೆಯು ಪ್ರಾರಂಭವಾಗುವ ಮೊದಲೇ ಸದರಿ ದಿನದ 10 ಗಂಟೆಯ ಒಳಗೆ ರೂ.2,000 (ಎರಡು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಠೇವಣಿ ನಗದು ರೂಪದಲ್ಲಿ ಇಡಬೇಕು. ಮುಂಗಡ ಠೇವಣಿ ಪಾವತಿಸುವವರಿಗೆ ಮಾತ್ರ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಹರಾಜಿನ ದಿನದಂದು ಹರಾಜು ಪ್ರಕ್ರಿಯೆಯು ಹಾಗೂ ಹರಾಜಿನ ಮೊತ್ತ ತೃಪ್ತಿಕರವಾಗಿಲ್ಲದಿದ್ದಲ್ಲಿ ಪ್ರಕ್ರಿಯೆಯನ್ನು ರದ್ದುಗೊಳಿಸುವ ಸಂಪೂರ್ಣ ಅಧಿಕಾರವು ಸಂಸ್ಥೆಯ ಪ್ರಾಚಾರ್ಯರಿಗೆ ಇರುತ್ತದೆ.

## ಆನೇಕಲ್: ನಂಬರ್ ಬೋರ್ಡ್ ಇಲ್ಲದೆ ಅನುಮಾನಾಸ್ಪದ ಓಡಾಟ ಹಿಡಿಯಲು ಬಂದ ಪೊಲೀಸರ ಮೇಲೆ ಕಾರು ಹತ್ತಿಸಿದ ದುಷ್ಕರ್ಮಿಗಳು

ಬೆಂಗಳೂರು: ಬೆಂಗಳೂರಿನ ಹೊರವಲಯದಲ್ಲಿ ನಂಬರ್ ಬೋರ್ಡ್ ಇಲ್ಲದ ಕಾರನ್ನು ಅನುಮಾನಾಸ್ಪದವಾಗಿ ಚಲಾಯಿಸಿಕೊಂಡು ಹೋಗುತ್ತಿದ್ದ ದುಷ್ಕರ್ಮಿಗಳ ತಂಡವನ್ನು ಹಿಡಿಯಲು ಪೊಲೀಸರ ಹರಸಾಹಸ ಪಟ್ಟ ಘಟನೆ ನಡೆದಿದೆ.

ತಮ್ಮನ್ನು ಹಿಡಿಯಲು ಬಂದ ಪೊಲೀಸರ ಬೈಕ್ ಗಳ ಮೇಲೆಯೇ ದುಷ್ಕರ್ಮಿಗಳು ಕಾರು ಚಲಾಯಿಸಿ ಪೊಲೀಸರಿಂದ ತಪ್ಪಿಸಿಕೊಂಡ ಘಟನೆ ದೃಶ್ಯ ಸಿಸಿ ಟಿವಿಯಲ್ಲಿ ಸೆರೆಯಾಗಿದ್ದು, ಈ ವಿಡಿಯೋ ಇದೀಗ ವ್ಯಾಪಕ ವೈರಲ್ ಆಗುತ್ತಿದೆ. ತಮಿಳುನಾಡು ಪೊಲೀಸರ (ಖಿಚಿಟುಟ ಓಚಿಜಡಿ ಕಿಠಟುಭಿಜ) ಕೈಯಿಂದ ತಪ್ಪಿಸಿಕೊಳ್ಳಲು ಮುಂಭಾಗದಲ್ಲಿ ಬಂದ ದ್ವಿಚಕ್ರ ವಾಹನಗಳ ಮೇಲೆ ಕಾರು ಹರಿಸಿ ಎಸ್ಕೇಪ್ ಆಗಿರುವ ಘಟನೆಯ ದೃಶ್ಯಾವಳಿಗಳು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನಲ್ಲಿ ಸಿನಿಮಾ ಶೈಲಿಯಲ್ಲಿ ನಡೆದ ಭೀಕರ ಅಪಘಾತಕ್ಕೆ ಇಡೀ ಗ್ರಾಮವೇ ಬೆಚ್ಚಿಬಿದ್ದಿದ್ದು, ಘಟನೆಯಲ್ಲಿ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.



ರಾಜ್ಯ ಗಡಿ ತಮಿಳುನಾಡಿನ ಜೂಜುವಾಡಿ ಬಳಿ ನಂಬರ್ ಪ್ಲೇಟ್ ಇಲ್ಲದ ಕಾರು ಅನುಮಾನಸ್ಪದವಾಗಿ ಸಂಚರಿಸುತ್ತಿತ್ತು. ಇದನ್ನು ನೋಡಿದ ತಮಿಳುನಾಡು ಪೊಲೀಸರು ಚೇಸ್ ಮಾಡಿದ್ದಾರೆ. ಈ ವೇಳೆ ಆನೇಕಲ್ ತಾಲ್ಲೂಕಿನ ಅತ್ತಿಬೆಲೆ ಪೊಲೀಸ್ ಠಾಣಾ ವ್ಯಾಪ್ತಿಯ ಬಳ್ಳೂರು ಗ್ರಾಮದಲ್ಲಿ ಮಿನಿ ಬಸ್ ಮತ್ತು ಮಿನಿ ಟೆಂಪೊ ಅಡ್ಡ ಬಂದು ತಪ್ಪಿಸಿಕೊಳ್ಳಲಾಗದೆ ಕಾರು ಸಿಕ್ಕಿಹಾಕಿಕೊಂಡಿತ್ತು. ಈ ವೇಳೆ ಅಡ್ಡಗಟ್ಟಿದ ಪೊಲೀಸರು ವಿಚಾರಣೆಗೆ ಮುಂದಾಗಿದ್ದಾರೆ.

ಪೊಲೀಸರು ಸಮೀಪ ಬರುತ್ತಿದ್ದಂತೆ ಅಡ್ಡಲಾಗಿ ಬರುತ್ತಿದ್ದ ಎರಡು ಮೂರು ದ್ವಿಚಕ್ರ ವಾಹನಗಳ ಮೇಲೆ ಕಿರಾತಕರು ಕಾರು ಚಲಾಯಿಸಿಕೊಂಡು ಎಸ್ಕೇಪ್ ಆಗಿದ್ದಾರೆ. ಒಂದು ದ್ವಿಚಕ್ರ ವಾಹನವನ್ನು ಒಂದಷ್ಟು ದೂರಕ್ಕೆ ಎಳೆದುಕೊಂಡು ಹೋಗಲಾಗಿದೆ. ಈ ಭೀಕರ ದೃಶ್ಯ ಕಂಡ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ. ಘಟನೆ ದೃಶ್ಯಾವಳಿಗಳು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಕಾರಿನಲ್ಲಿ ಅಕ್ರಮವಾಗಿ ಮದ್ಯ ಸಾಗಾಟ ಮಾಡುತ್ತಿದ್ದರು ಎನ್ನುವ ಶಂಕೆ ವ್ಯಕ್ತವಾಗಿದೆ. ಅಪರಾಧ ಕೃತ್ಯ ಎಸಗಿ ಆರೋಪಿಗಳು ಪರಾರಿಯಾಗಲು ಯತ್ನಿಸಿದ್ದಾರಾ ಎನ್ನುವ ಬಗ್ಗೆಯೂ ಪೋಲೀಸರು ತನಿಖೆ ಆರಂಭಿಸಿದ್ದಾರೆ. ಘಟನೆಯಲ್ಲಿ ಮೂವರು ಗಂಭೀರವಾಗಿ ಗಾಯಗೊಂಡಿದ್ದು, ಆರೋಪಿಗಳ ಬಂಧನಕ್ಕೆ ತಮಿಳುನಾಡು ಹಾಗೂ ಕರ್ನಾಟಕ ಪೊಲೀಸರು ತನಿಖೆ ಆರಂಭಿಸಿದ್ದಾರೆ.

## ಆಗ್ರ ಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳ ಸನ್ಮಾನಕ್ಕೆ ಅರ್ಜಿ ಆಹ್ವಾನ

ಬೀದರ: ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ಹಾಗೂ ವೀರ ಕನ್ನಡಿಗರ ಸೇನೆ ರಾಜ್ಯ ಹಾಗೂ ಬೀದರ ಜಿಲ್ಲಾ ಘಟಕದಿಂದ ಈ ವರ್ಷ ಎಸ್. ಎಸ್. ಎಲ್ ಸಿ ಮತ್ತು ಪಿ ಯು ಸಿಯಲ್ಲಿ ಆಗ್ರಶ್ರೇಣಿಯಲ್ಲಿ ಪಾಸಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿವರ್ಷದಂತೆ ಈ ವರ್ಷವೂ ಕೂಡ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ವಿದ್ಯಾರ್ಥಿಗಳು ಆಗ್ರಶ್ರೇಣಿಯಲ್ಲಿ ಪಾಸಾಗಲಿಕ್ಕೆ ಕಾರಣರಾಗಿರುವ ಉಪನ್ಯಾಸಕರಿಗೂ, ಪ್ರಾಶುಂಪಾಲರಿಗೂ, ಆಡಳಿತ ಮಂಡಳಿಯವರಿಗೂ, ತಂದೆತಾಯಿ ಪಾಲಕರಿಗೂ ಸನ್ಮಾನ ಕಾರ್ಯಕ್ರಮವನ್ನು ಆಯೊಜನೆ ಮಾಡಲಾಗಿದೆ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಲ್ಲಿಸಲು 30–5–2023 ರಂದು ಕೊನೆಯ ದಿನಾಂಕವಾಗಿರುತ್ತದೆಂದು ಪತ್ರಿಕಾ ಪ್ರಕಟಣೆಗೆ ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ರಾಜ್ಯಾಧ್ಯಕ್ಷ ಸುಬ್ಬಣ್ಣ ಕರಕನಳ್ಳಿ , ವೀರ ಕನ್ನಡಿಗರ ಸೇನೆ ಜಿಲ್ಲಾಧ್ಯಕ್ಷ ಮುಕೇಶ ಶಾಹಗಂಜ್ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ. 9901612139 ಸಂಖ್ಯೆಗೆ ವಾಟ್ಸಾಪ್ vksenbidar@gmail.com ಸಲ್ಲಿಸಿ.

## ಎಸ್‌ಸಿ ಎಸ್‌ಟಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ: ಅಧೀಕಾರೇತರ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995 ರ ಉಪನಿಯಮ 17 ರಿತ್ಯಾ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ರಚಿಸಲು ಸರ್ಕಾರದಿಂದ ಆದೇಶಿಸಿಲಾಗಿದ್ದು, ಸದರಿ ಸಮಿತಿಯಲ್ಲಿ 3 ಪರಿಶಿಷ್ಟ ಜಾತಿ ಮತ್ತು 2 ಪರಿಶಿಷ್ಟ ಪಂಗಡದ, ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಕ್ಕೆ ಸೇರಿದ 3 ಎನ್.ಜಿ.ಓ ಗಳ ಅಧೀಕಾರೇತರ ಸದಸ್ಯರುಗಳನ್ನು ನೇಮಕ ಮಾಡಲು ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯದ ಸರ್ವತೋಮುಖ ಅಭಿವೃದ್ದಿಗಾಗಿ ಶ್ರಮಿಸಿದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡೇತರ ಎನ್.ಜಿ.ಓ ಗಳ ಆಸಕ್ತ ಸದಸ್ಯರಿಂದ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡೇತರ ಎನ್.ಜಿ.ಓ ಗಳ ಆಸಕ್ತ ಸದಸ್ಯರು ಅರ್ಜಿ ನಮೂನೆಗಾಗಿ ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರು ಅಥವಾ ಜಿಲ್ಲೆಯ ಎಲ್ಲ ತಾಲೂಕಿನ ಸಹಾಯಕ ನಿರ್ದೇಶಕ ಸಮಾಜ ಕಲ್ಯಾಣ ಇಲಾಖೆ ಕಛೇರಿಗಳಿಂದ ಪಡೆದು ಜೂನ್ 5. 2023 ರಂದು ಸಂಜೆ 5 30 ರೊಳಗಾಗಿ ಭರ್ತಿ ಮಾಡಿ, ಅರ್ಜಿಗಳನ್ನು ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ನಗರಸಭೆಯಲ್ಲಿ ಮರುಬಳಕೆ ವಸ್ತುಗಳ ಸಂಗ್ರಹಣ ಕೇಂದ್ರ ಆರಂಭ

ಕೊಪ್ಪಳ: ಕೊಪ್ಪಳ ನಗರಸಭೆಯಲ್ಲಿ ಮರುಬಳಕೆ ವಸ್ತುಗಳ ಸಂಗ್ರಹಣ ಕೇಂದ್ರವನ್ನು ತೆರೆಯಲಾಗಿದೆ. ಮರುಬಳಕೆ ವಸ್ತುಗಳನ್ನು ಎಲ್ಲೆಂದರಲ್ಲಿ ಬಿಸಾಡದೆ ಈ ಆರ್.ಆರ್.ಆರ್ ಕೇಂದ್ರಗಳಲ್ಲಿ ನೀಡುವಂತೆ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಆದೇಶದಂತೆ ಕೊಪ್ಪಳ ನಗರಸಭೆಯಲ್ಲಿ ಎಸ್.ಬಿ.ಎಂ ಯೋಜನೆಯಡಿಯಲ್ಲಿ "ಮೇರಿ ಲೈಫ್ ಮೇರಿ ಸ್ವಚ್ಛ ಶೆಹರ್" ಅಂದರೆ ನನ್ನ ಜೀವನ ನಮ್ಮ ಸ್ವಚ್ಛ ಸುಂದರ ನಗರ ಕಾರ್ಯಕ್ರಮದಡಿ ಈ ಯೋಜನೆ ರೂಪಿಸಲಾಗಿದೆ.

ನಗರದ ಸಾರ್ವಜನಿಕರು ತಮ್ಮ ಮನೆ ಮತ್ತು ಅಂಗಡಿಗಳಲ್ಲಿ ಉತ್ಪತ್ತಿಯಾಗುವ ಅಂದರೆ ಆರ್.ಆರ್.ಆರ್ (ರೆಡ್ಯೂಸ್ ರೀಯೂಸ್ & ರೀಸೈಕಲ್) ಆಗುವಂತ ವಸ್ತುಗಳಾದ ಬಳಕೆಯಾದ ಪ್ಲಾಸ್ಟಿಕ್, ಹಳೆಬುಕ್ಸ್, ಎಲೆಕ್ಟ್ರಿಕ್ ಸಾಮಾನುಗಳು, ಹಳೆಬಟ್ಟೆ, ಗೊಂಬೆಗಳು, ನ್ಯೂಸ್ ಪೇಪರ್ ಮತ್ತು ಉಪಯೋಗಕ್ಕೆ ಬಾರದ ಚಪ್ಪಲಿಗಳನ್ನು ಎಲ್ಲೆಂದರಲ್ಲಿ ಬಿಸಾಡಬಾರದು. ಇವುಗಳ ಕಲೆಕ್ಷನ್ (ಸಂಗ್ರಹ) ಕೇಂದ್ರಗಳನ್ನು ಕೊಪ್ಪಳ ನಗರಸಭೆ ವ್ಯಾಪ್ತಿಯಲ್ಲಿ ತೆರೆಯಲಾಗಿದೆ.

ಆರ್.ಆರ್.ಆರ್ ಕೇಂದ್ರಗಳ ವಿವರ: ಎಲ್ಲಾ ಸಾರ್ವಜನಿಕರು ಮರುಬಳಕೆ ವಸ್ತುಗಳನ್ನು ಕೊಪ್ಪಳ ನಗರಸಭೆ ವ್ಯಾಪ್ತಿಯಲ್ಲಿನ ಆರ್. ಆರ್.ಆರ್ ಸಂಗ್ರಹಣೆಯಾದ ಘನ ತ್ಯಾಜ್ಯ ವಿಲೇವಾರಿ ವಾಹನಗಳ ನಿಲುಗಡೆ ಸ್ಥಳ, ನಗರಸಭೆಯ ನೀರು ಸರಬರಾಜು ಘಟಕ, ವಾರ್ಡ ನಂಬರ್–01 ಮಹೆಬೂಬ ನಗರ, ಜೆ.ಪಿ ಮಾರುಕಟ್ಟೆಯ ನಗರಸಭೆಯ ಐ.ಡಿ.ಎಸ್.ಎಂ.ಟಿ ಮಳಿಗೆ, ದಿವಟರ್ ಸರ್ಕಲ್ ಜವಹಾರ್ ರಸ್ತೆ ನಗರಸಭೆಯ ಐ.ಡಿ.ಎಸ್.ಎಂ.ಟಿ ಮಳಿಗೆ, ಘನ ತ್ಯಾಜ್ಯ ವಿಲೇವಾರಿ ಘಟಕ, ನಗರಸಭೆ ಕಾರ್ಯಾಲಯ ಕೊಪ್ಪಳ ಆರ್.ಆರ್.ಆರ್ ಸಂಗ್ರಹಣ ಕೇಂದ್ರಕ್ಕೆ ತಂದುಕೊಡಬೇಕು.

ಹೆಚ್ಚಿನ ಮಾಹಿತಿಗಾಗಿ ನಗರಸಭೆ ಕಾರ್ಯಾಲಯದ ಆರೋಗ್ಯ ಶಾಖೆಗೆ ಸಂಪರ್ಕಿಸುವಹುದಾಗಿದೆ ಎಂದು ಕೊಪ್ಪಳ ನಗರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಮಾಜಿ ಶಾಸಕ ಯು.ಆರ್. ಸಭಾಪತಿ ನಿಧನ



ಉಡುಪಿ: ಅಲ್ಪಕಾಲದ ಅನಾರೋಗ್ಯದಿಂದ ಬಳಲುತ್ತಿದ್ದ ಉಡುಪಿ ಯ ಮಾಜಿ ಶಾಸಕ ಯು. ಆರ್. ಸಭಾಪತಿ ಭಾನುವಾರ ನಿಧನರಾಗಿದ್ದಾರೆ.

1980–1990ರ ದಶಕದಲ್ಲಿ ಕರಾವಳಿಯ ಪ್ರಭಾವಿ ನಾಯಕ ಎಂದೇ ಗುರುತಿಸಿಕೊಂಡಿದ್ದ ಯುಆರ್ ಸಭಾಪತಿ (71) ಅನಾರೋಗ್ಯಕ್ಕೆ ತುತ್ತಾಗಿದ್ದು, ಚಿಕಿತ್ಸೆಗೆ ಸ್ಪಂದಿಸದೆ ಕೊನೆಯುಸಿರೆಳೆದಿದ್ದಾರೆ.

ಇವರು ಉಡುಪಿ ವಿಧಾನಸಭಾ ಕ್ಷೇತ್ರದಲ್ಲಿ ಎರಡು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. 1994ರಲ್ಲಿ ಕೆಸಿಪಿಯಿಂದ (KCP) ಶಾಸಕರಾಗಿದ್ದ ಇವರು 1999ರಲ್ಲಿ ಕಾಂಗ್ರೆಸ್ ಪಕ್ಷದಿಂದ ಶಾಸಕರಾಗಿ ಆಯ್ಕೆಯಾಗಿದ್ದರು.


ಬಂಗಾರಪ್ಪನವರ ಅನುಯಾಯಿಯಾಗಿದ್ದ ಸಭಾಪತಿ, ಆಸ್ಕರ್ ಫರ್ನಾಂಡಿಸ್ ರಾಜಕೀಯ ಪ್ರವೇಶಕ್ಕೂ ಪ್ರೇರಣೆಯಾಗಿದ್ದರು. ಅಷ್ಟೇ ಅಲ್ಲದೇ ರಾಷ್ಟ್ರೀಯ ಜನತಾದಳ ಮತ್ತು ಜಾತ್ಯಾತೀತ ಜನತಾದಳದೊಂದಿಗೂ ತಮ್ಮನ್ನು ತಾವು ಗುರುತಿಸಿಕೊಂಡಿದ್ದರು.

## 10 ತಿಂಗಳ ಗರ್ಭಿಣಿ ಆನೆಗೆ ಎಸ್ಟೇಟ್ ಮಾಲೀಕರ ಗುಂಡೇಟು: ಭ್ರೂಣದೊಂದಿಗೇ ಪ್ರಾಣಬಿಟ್ಟ ಹೆಣ್ಣಾನೆ

ಮಡಿಕೇರಿ: ಕೊಡಗಿನ ಕುಶಾಲನಗರ ವ್ಯಾಪ್ತಿಯಲ್ಲಿ ಇಬ್ಬರು ಎಸ್ಟೇಟ್ ಮಾಲೀಕರು ಕಾಡಾನೆಯನ್ನು ಗುಂಡಿಕ್ಕಿ ಕೊಂದಿದ್ದು, ಸಾಯುವ ವೇಳೆ ಆನೆ ಗರ್ಭಿಣಿಯಾದ ಪರಿಣಾಮ ತಾಯಿ ಆನೆಯೊಂದಿಗೆ ಭ್ರೂಣದಲ್ಲಿದ್ದ ಆನೆ ಕೂಡ ಸಾವನ್ನಪ್ಪಿದೆ.

ಹಸಿವು ನೀಗಿಸಿಕೊಳ್ಳಲು ತೋಟದತ್ತ ನುಗ್ಗಿದ 10 ತಿಂಗಳ ಗರ್ಭಿಣಿ ಹೆಣ್ಣಾನೆಯೊಂದು ದಾರುಣವಾಗಿ ಉಸಿರು ಚೆಲ್ಲಿದ ಘಟನೆ ಕೊಡಗು ಜಿಲ್ಲೆ ಕುಶಾಲನಗರ ತಾಲ್ಲೂಕಿನ ರಸೂಲ್ ಪುರ ಬಾಳುಗೋಡಿನಲ್ಲಿ ಶನಿವಾರ ತಡರಾತ್ರಿ ನಡೆದಿದೆ. ಆಹಾರ ಅರಸಿ ಕಾಡಿನಿಂದ ನಾಡಿಗೆ ಬಂದ ಈ ಹೆಣ್ಣಾನೆಯನ್ನು ಕಿಡಿಗೇಡಿಗಳು ಗುಂಡಿಟ್ಟು ಹತ್ಯೆ ಮಾಡಿದ್ದಾರೆ. ಅಂದಾಜು 20 ವರ್ಷದ ಹೆಣ್ಣಾನೆಯನ್ನು ಗುಂಡಿಟ್ಟು ಹತ್ಯೆ ಮಾಡಲಾಗಿದೆ.

ಡಿಂಪು ಎಂಬುವವರ ತೋಟದಲ್ಲಿ ಆನೆ ಸತ್ತು ಬಿದ್ದಿದೆ. ವಿಷಯ ತಿಳಿಯುತ್ತಿದ್ದಂತೆ ಬೆಳಿಗ್ಗೆಯೇ ಸ್ಥಳಕ್ಕೆ ಮಡಿಕೇರಿ ಡಿಎಫ್‌ಓ ಶಿವರಾಮ್ ಬಾಬು, ಕುಶಾಲನಗರ ಆರ್–ಎಫ್‌ಓ ಶಿವರಾಮ್, ದುಬ್ಬಾರೆ ವ್ಯಾಪ್ತಿಯ ಡಿಆರ್‌ಎಫ್‌ಓ ಕೆ.ಪಿ. ರಂಜನ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆನೆಯು ಸತ್ತು ಬಿದ್ದಿರುವ ತೋಟದ ಮಾಲೀಕರಾದ ಡಿಂಪು ಮತ್ತು ಅದೇ ಗ್ರಾಮದ ಮತ್ತೋರ್ವ ವ್ಯಕ್ತಿ ದಿನೇಶ್ ಎಂಬುವವರ ಮೇಲೆ ಅರಣ್ಯ ಇಲಾಖೆ ಅಧಿಕಾರಿಗಳು ಅನುಮಾನ ವ್ಯಕ್ತಪಡಿಸಿದ್ದಾರೆ. ಆರೋಪಿ ಎಸ್ಟೇಟ್ ಮಾಲೀಕರಾದ ಜಗದೀಶ್ ಮತ್ತು ಡಿಂಪಲ್ ಅವರ ಮನೆಯಿಂದ ಬಂದೂಕುಗಳು ನಾಪತ್ತೆಯಾಗಿದ್ದರೂ ಅವರು ನಾಪತ್ತೆಯಾಗಿದ್ದಾರೆ. ಇಬ್ಬರು ಆರೋಪಿಗಳ ಪತ್ತೆಗೆ ಅರಣ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆ ಜಂಟಿ ಕಾರ್ಯಾಚರಣೆ ಆರಂಭಿಸಿದೆ. ಆರೋಪಿಗಳ



ವಿರುದ್ಧ ಪೊಲೀಸರು ಶಸ್ತ್ರಾಸ್ತ್ರ ಕಾಯ್ದೆಯಡಿ ಮತ್ತು ಅರಣ್ಯ ಇಲಾಖೆಯಿಂದ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ

ಅಧಿಕಾರಿಯೊಬ್ಬರು ನೀಡಿರುವ ಮಾಹಿತಿಯಂತೆ ಆನೆ ಸತ್ತು ಬಿದ್ದಿರುವ ಜಾಗದಲ್ಲಿ ಗುಂಡಿನ ಕಾಟ್ರೇಜ್ಗಳು ಕೂಡ ಸಿಕ್ಕಿದ್ದು, ಇದರಿಂದ ಯಾರು ಆನೆಯನ್ನು ಶೂಟ್ ಮಾಡಿ ಹತ್ಯೆ ಮಾಡಿದ್ದಾರೆ ಎನ್ನುವುದನ್ನು ಪತ್ತೆ ಹಚ್ಚಲು ಸುಲಭವಾಗಲಿದೆ. ಅನುಮಾನ ವ್ಯಕ್ತಪಡಿಸಿರುವ ಇಬ್ಬರು ವ್ಯಕ್ತಿಗಳು ತಲೆಮರೆಸಿಕೊಂಡಿದ್ದು ಅರಣ್ಯ ಇಲಾಖೆ ಪೊಲೀಸರು ಇಬ್ಬರಿಗಾಗಿ ಹುಡುಕಾಟ ನಡೆಸಿದ್ದಾರೆ. ಹತ್ಯೆಯಾಗಿರುವ ಆನೆಯನ್ನು ಸ್ಥಳದಲ್ಲಿಯೇ ಮರಣೋತ್ತರ ಪರೀಕ್ಷೆ ಮಾಡಲಾಗಿದೆ. ಆನೆಗೆ ಎರಡು ಸುತ್ತಿನ ಗುಂಡು ಹಾರಿಸಲಾಗಿದ್ದು, ಇದು ಉದ್ದೇಶ ಪೂರ್ವಕವಾಗಿಯೇ ಗುಂಡು ಹೊಡೆದು ಹತ್ಯೆ ಮಾಡಿರುವುದು ಎಂಬ ಶಂಕೆ ಇದೆ. ಒಂದು ಗುಂಡು ಆನೆಯ ತಲೆಗೆ ಸರಿಯಾಗಿ ಬಿದ್ದಿದ್ದರೆ, ಮತ್ತೊಂದು ಗುಂಡು ಕುತ್ತಿಗೆಗೆ ಹೊಕ್ಕಿದೆ. ಹೀಗಾಗಿ ಆನೆ ಸ್ಥಳದಲ್ಲಿಯೇ ಮೃತಪಟ್ಟಿದೆ ಎಂದು ಅರಣ್ಯಾಧಿಕಾರಿ ಶಿವರಾಮ್ ಬಾಬು ತಿಳಿಸಿದ್ದಾರೆ.

ಆನೆ 10 ತಿಂಗಳ ಗರ್ಭಿಣಿಯಾಗಿತ್ತು ಎನ್ನುವುದು ಮರಣೋತ್ತರ ಪರೀಕ್ಷೆ ವೇಳೆ ಗೊತ್ತಾಗಿದೆ. ಇನ್ನು ಕೆಲವು ತಿಂಗಳು ಕಳೆದಿದ್ದರೆ ಆನೆ ಮರಿಯೊಂದಕ್ಕೆ ಜೀವ ನೀಡುತಿತ್ತು. ಆನೆ ಮೃತಪಟ್ಟಿದ್ದರಿಂದ ಹೊಟ್ಟೆಯಲ್ಲಿದ್ದ ಮರಿಯೂ ಕಣ್ಬಿಡುವುದಕ್ಕೂ ಮುನ್ನವೇ ಸಾವನ್ನಪ್ಪಿದೆ. ಮರಣೋತ್ತರ ಪರೀಕ್ಷೆ ಬಳಿಕ ಅಲ್ಲಿಯೇ ಆನೆ ಶವ ಸಂಸ್ಕಾರ ಮಾಡಲಾಗಿದೆ.

ರಸೂಲ್ ಪುರ, ಬಾಳುಗೋಡು ಹಾಗೆ ದುಬಾರೆ ಭಾಗದಲ್ಲಿ ಕಾಡಾನೆಗಳ ಕಾಟ ಹೊಸದೇನು ಅಲ್ಲ. ಆ ಭಾಗದಲ್ಲೆಲ್ಲಾ ಸಾಕಷ್ಟು ಅರಣ್ಯ ಪ್ರದೇಶ ಇರುವುದರಿಂದ ಅಲ್ಲಿರುವ ಆನೆಗಳು ಪ್ರತೀ ರಾತ್ರಿ ಕಾಡಿನಿಂದ ನಾಡಿಗೆ ಆಹಾರ ಅರಸಿ ಬಂದೇ ಬರುತ್ತವೆ. ಇದಕ್ಕಾಗಿ ರೈತರು, ಅರಣ್ಯ ಇಲಾಖೆ ಕಾಡಿನ ಅಂಚಿನಲ್ಲಿ ಸೋಲಾರ್ ವಿದ್ಯುತ್ ಬೇಲಿಯನ್ನು ನಿರ್ಮಿಸಲಾಗಿದೆ. ಆದರೆ ಇವುಗಳು ಸರಿಯಾಗಿ ಕೆಲಸ ಮಾಡದ ಹಿನ್ನೆಲೆಯಲ್ಲಿ ಆನೆಗಳು ಸುಲಭವಾಗಿ ರೈತರ ತೋಟ ಗದ್ದೆಗಳಿಗೆ ನುಗ್ಗುತ್ತವೆ. ಇದು ಅರಣ್ಯಾಧಿಕಾರಿಗಳು ಮತ್ತು ರೈತರ ತಲೆನೋವಿಗೆ ಕಾರಣವಾಗಿದೆ.

# ಓದಿನಲ್ಲಿ ವಿದ್ಯಾರ್ಥಿಗಳ ಆಯ್ಕೆಗೆ ಸಹಕಾರವಿರಲಿ; ಮಕ್ಕಳ ಉತ್ತಮ ಭವಿಷ್ಯ ನಿರ್ಮಾಣಕ್ಕೆ ಪಾಲಕರ ಪಾತ್ರವು ಮುಖ್ಯ: ಜಿಲ್ಲಾಧಿಕಾರಿ

ಧಾರವಾಡ: ಓದಿನಲ್ಲಿ ವಿದ್ಯಾರ್ಥಿಗಳಿಗೆ ಆಯ್ಕೆ ಸ್ವಾತಂತ್ರ್ಯವಿರಬೇಕು, ಆಸಕ್ತಿಗೆ ಅನುಗುಣವಾಗಿ ವಿಷಯಗಳನ್ನು ತೆಗೆದುಕೊಂಡು ಅಧ್ಯಯನ ಮಾಡಿ ಯಶಗಳಿಸುವಲ್ಲಿ ಪಾಲಕರ ಸಹಕಾರ ಮತ್ತು ಪಾತ್ರವು ಮುಖ್ಯವಾಗಿದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದರು.

ಅವರು ಸೋಮವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಛೇರಿ ನೂತನ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಛೇರಿ ಆಯೋಜಿಸಿದ್ದ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಅತಿ ಹೆಚ್ಚು ಅಂಕ ಪಡೆದ ಅತ್ಯುತ್ತಮ 10 ವಿದ್ಯಾರ್ಥಿಗಳ ಗೌರವ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಓದಿನಲ್ಲಿ, ವಿಷಯದ ಆಯ್ಕೆಯಲ್ಲಿ ಪಾಲಕರು ಒತ್ತಡ ಹಾಕಬಾರದು, ವಿದ್ಯಾರ್ಥಿಗಳ ಆಸಕ್ತಿ, ಆಯ್ಕೆಗೆ ಸ್ವಾತಂತ್ರ್ಯ ನೀಡಬೇಕು. ಇದ–ರಿಂದ ಅವರ ಓದು ಉತ್ತಮವಾಗಿ, ಒಳ್ಳೆಯ ಭವಿಷ್ಯ ನಿರ್ಮಾಣಕ್ಕೆ ಅನುಕೂಲವಾಗುತ್ತದೆ ಎಂದು ಅವರು ಹೇಳಿದರು.

ಪ್ರಸಕ್ತ ಸಾಲಿನಲ್ಲಿ ಸುಮಾರು 48 ಶಾಲೆಗಳು ನೂರಕ್ಕೆ ನೂರರಷ್ಟು ಫಲಿತಾಂಶ ಮಾಡಿವೆ. ಆದರೆ ಜಿಲ್ಲೆಯ ಒಟ್ಟಾರೆ ಸುಧಾರಣೆಗೆ ಶಿಕ್ಷಣ ಇಲಾಖೆ ಈಗಿನಿಂದಲೇ ಕ್ರಮವಹಿಸಬೇಕು. ಮುಂದಿನ ವರ್ಷದ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಮೊದಲ ಮೂರು ರ್ಯಾಂಕ್ ಪಡೆಯುವ ಜಿಲ್ಲೆಗಳಲ್ಲಿ ನಮ್ಮ ಜಿಲ್ಲೆ ಸ್ಥಾನ ಪಡೆಯಬೇಕು ಎಂದು ತಿಳಿಸಿದರು.



ವಿದ್ಯಾರ್ಥಿಗಳ ಸಾಧನೆಗೆ ಪ್ರೋತ್ಸಾಹಿಸಿದ ಪಾಲಕರನ್ನು, ಶಿಕ್ಷಕರನ್ನು ಜಿಲ್ಲಾಧಿಕಾ–ರಿಗಳು ಅಭಿನಂದಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧಿಕಾರಿ ಬಾರಾಟಕ್ಕೆ ಅವರು ಸ್ವಾಗತಿಸಿದರು. ಎಸ್. ಎಂ.ಹುಡೆದಮನಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಪಾಲಕರು, ಶಿಕ್ಷಕರು ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು.

ಜಿಲ್ಲೆಗೆ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳ ವಿವರ

ಹುಬ್ಬಳ್ಳಿ ಕೇಶ್ವಾಪುರದ ಸೆಂಟ್ ಮೈಕಲ್ಸ್ ಪ್ರೌಢ ಶಾಲೆಯ ವಿದ್ಯಾರ್ಥಿ ಬಾಲಾಜಿ ಕೃಷ್ಣ ನಾಯ್ದು (621) ಮತ್ತು ಧಾರವಾಡ ಮರಾಠಾ ಕಾಲೋನಿಯ ಮಲ್ಲಸಜ್ಜನ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿನಿ ಸಂಜನಾ ಶಿವಲಿಂಗಪ್ಪ ಅಂಗಡಿ (621) ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ.

ಹುಬ್ಬಳ್ಳಿಯ ವಿದ್ಯಾನಗರ ಕೆ.ಎಲ್.ಇ. ಎಂ.ಆರ್.ಸಾಖರೆ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿನಿ ಸಹನಾ ಪತ್ತಾರ (620) ಮತ್ತು ಧಾರವಾಡದ ವಿದ್ಯಾಗಿರಿ ಜೆ.ಎಸ್.ಎಸ್. ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿ ಸಾಚಿ ಶಶಿಧರ್ ಹೊಂಗಲಮಠ (620) ಹಾಗೂ ಧಾರವಾಡದ ಮಾಳಮಡ್ಡಿಯ ಕೆ.ಇ. ಬೋರ್ಡ್ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿ ಪ್ಲುಷ್ ಜೋಗಳೇಕರ್ (620) ಮತ್ತು ಧಾರವಾಡದ ಮಾಳಮಡ್ಡಿಯ ಕೆ.ಇ. ಬೋರ್ಡ್ ಸಂಯುಕ್ತ ಪದವಿ ಪೂರ್ವ ಕಾಲೇಜ್ನ ವಿದ್ಯಾರ್ಥಿ ರೋಹನ್ ಚಿವಟೆ (620) ಮತ್ತು ನವನಗರ ರೋಟರಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿನಿ ಸೃಜನಾ ಬಂಗಾರಿಮಠ (620) ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ.

ಹುಬ್ಬಳ್ಳಿ ಆದರ್ಶ ನಗರದ ಡಾ.ಜಿ.ವಿ. ಜೋಶಿ ರೋಟರಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿನಿ ದೀಯಾ ಕಠಾರೆ (619) ಮತ್ತು ಧಾರವಾಡ ವಿಕಾಸ್ ನಗರದ ಶ್ರೀ ಆದಿಚುಂಚನಗಿರಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿ ವಿನೋದ್ ವಿ. ಹಳಕಟ್ಟಿ (619), ಧಾರವಾಡದ ಪವನ್ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿ ಅಮಾನ್ ಅಫ್ಜಲ್ ಅಹ್ಮದ್ ಖಾನ್ (619) ಹಾಗೂ ಧಾರವಾಡ ಆರ್.ಎನ್. ಶೆಟ್ಟಿ ಕ್ರೀಡಾಂಗಣ ಹತ್ತಿರದ ಸರಕಾರಿ ಆದರ್ಶ ವಿದ್ಯಾಲಯ (ಆರ್.ಎಂ.ಎಸ್.ಎ) ಶಾಲೆಯ ವಿದ್ಯಾರ್ಥಿನಿ ವೈಷ್ಣವಿ ಪರಶುರಾಮ್ ಶಿಂಗನ್ನವರ್ (619) ಅಂಕಗಳನ್ನು ಪಡೆದು ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.

# ನಾಳೆ ಮಹಾವೀರ ಸಹಕಾರಿ ಶಾಖೆ ಉದ್ಘಾಟನೆ: ನಿಲಜಗಿ



ಹುಕ್ಕೇರಿ: ಜನಸ್ನೇಹಿ ಆಡಳಿತಕ್ಕೆ ಹೆಸರುವಾಸಿಯಾದ ಹುಕ್ಕೇರಿ ಮಹಾವೀರ ಮಲ್ಟಿಪರಪಜ್ ಸೌಹಾರ್ದ ಸಹಕಾರಿ ಸಂಘದ 15ನೇ ಶಾಖೆಯನ್ನು ಸಂಕೇಶ್ವರದಲ್ಲಿ ಆರಂಭಿಸಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷ ಮಹಾವೀರ ನಿಲಜಗಿ ಹೇಳಿದರು.

ಪಟ್ಟಣದಲ್ಲಿ ರವಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಸೇ–ರಿದಂತೆ ಅಕ್ಕಪಕ್ಕದ ಜಿಲ್ಲೆಗಳಲ್ಲಿ ಸಂಸ್ಥೆ ರೈತರ ಜೀವನಾಡಿಯಾಗಿ ಸೇವೆ ಸಲ್ಲಿಸುತ್ತಿದ್ದು ಸದಸ್ಯ ಗ್ರಾಹಕರಿಗೆ ಇನ್ನೂ ಹೆಚ್ಚಿನ ಸೇವೆ ಒದಗಿಸಲು ಸಂಕೇಶ್ವರ ನೇಸರಿ ಗಾರ್ಡನ್ ಎದುರಿಗೆ ನೂತನ ಶಾಖೆಯ ಉದ್ಘಾಟನಾ ಸಮಾರಂಭ ಮೇ 24 ರಂದು ಬೆಳಗ್ಗೆ 11 ಕ್ಕೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಬ್ಯಾಂಕ್‌ನ ಸೇವೆಯನ್ನು ಗ್ರಾಹಕರ ಮನೆ ಬಾಗಿಲಿಗೆ ತಲುಪಿಸಲು ಆಧುನಿಕ ತಂತ್ರಜ್ಞಾನ ಅಳವಡಿಸಲು ಆದ್ಯತೆ ನೀಡಲಾಗಿದೆ. ಸದಸ್ಯರ ಸಹಕಾರದಿಂದ ಪ್ರಧಾನ ಕಚೇರಿ ಸೇರಿ ಎಲ್ಲ ಶಾಖೆಗಳು ಅತ್ಯಂತ ಯಶಸ್ವಿಯಿಂದ ಕಾರ್ಯ ನಿರ್ವಹಿಸುತ್ತಿದ್ದು ಈಗ ಸಹಕಾರಿ ಸಾಧನೆಯ ಹಾದಿಯಲ್ಲಿ ಮತ್ತೊಂದು ಹೆಜ್ಜೆ ಮುಂದಿಟ್ಟು ನೂತನ ಶಾಖೆ ಆರಂಭಿಸಲಾಗುತ್ತಿದೆ. ಬರುವ ದಿನಗಳಲ್ಲಿ ಬೆಳಗಾವಿಯಲ್ಲಿಯೂ ಮತ್ತೊಂದು ಶಾಖೆ ತೆರೆಯಲು ಚಿಂತನೆ ನಡೆಸಲಾಗಿದೆ ಎಂದು ಅವರು ಹೇಳಿದರು.

ಸಹಕಾರಿಯಿಂದ ಹುಕ್ಕೇರಿಯಲ್ಲಿ ಶೀಘ್ರದಲ್ಲಿಯೇ ಗೃಹೋಪಯೋಗಿ ಸೇರಿದಂತೆ ವಿವಿಧ ವಿಧದ ವಸ್ತುಗಳುಳ್ಳ ಮಹಾವೀರ ಮಲ್ಟಿ ಸೂಪರ್ ಮಾರ್ಕೆಟ್ ಆರಂಭಿಸಲಾಗುವುದು. ಬರುವ ದಿನಗಳಲ್ಲಿ ಆರೋಗ್ಯ ಕ್ಷೇತ್ರದಲ್ಲೂ ಸೇವೆ ಸಲ್ಲಿಸುವ ದೃಷ್ಟಿಯಿಂದ ಮಹಾವೀರ ಸೂಪರ್ ಸ್ಪೇಶಾಲಿಟಿ ಆಸ್ಪತ್ರೆ ಆರಂಭಿಸಲಾಗುವುದು. ಗ್ರಾಮೀಣ ಜನರ ಆರ್ಥಿಕ ಸುಧಾರಣೆಗೆ ಕಳೆದೆರಡು ದಶಕಗಳ ಹಿಂದೆ ಜನ್ಮ ತಳೆದ ಸಂಸ್ಥೆಯ ಆಡಳಿತ ಮಂಡಳಿಗೆ ಇದುವರೆಗೆ ಚುನಾವಣೆ ನಡೆದಿಲ್ಲ. ಇದಕ್ಕೆ ದಕ್ಷ ಮತ್ತು ಪ್ರಾಮಾಣಿಕ ಆಡಳಿತವೇ ಕಾರಣ ಎಂದು ಅವರು ಹೇಳಿದರು.

ಉಪಾಧ್ಯಕ್ಷ ಕಿರಣ ಸೊಲ್ಲಾಪುರೆ, ನಿರ್ದೇಶಕರಾದ ಸುಕುಮಾರ ಖತಗಲ್ಲಿ, ಭರಮಪ್ಪಾ ಲಠ್ಠೆ, ಬಾಹುಬಲಿ ಸೊಲ್ಲಾಪುರೆ, ಶಾಖಾ ಕಾರ್ಯದರ್ಶಿ ಸಂತೋಷ ರಜಪೂತ ಮತ್ತಿತರರು ಉಪಸ್ಥಿತರಿದ್ದರು.

## ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳ ಸಭೆ

# ತ್ಯಾಜ್ಯ ವಿಲೇವಾರಿ, ಚರಂಡಿ–ಗಟಾರುಗಳ ಸ್ವಚ್ಛತೆಗೆ ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ: ಘನತ್ಯಾಜ್ಯ ವಿಲೇವಾರಿ ಘಟಕ ಸೇ–ರಿದಂತೆ ಸ್ಥಳೀಯ ಸಂಸ್ಥೆಗಳ ವಿವಿಧ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕೂಡಲೇ ಟೆಂಡರ್ ಕರೆದು ಕೆಲಸ ಆರಂಭಿಸಬೇಕು. ಕಾಮಗಾರಿ ಪೂರ್ಣಗೊಂಡ ಬಳಿಕ ತಕ್ಷಣವೇ ಬಿಲ್ ಪಾವತಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸೋಮವಾರ (ಮೇ.22) ನಡೆದ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಎನ್.ಜಿ.ಟಿ. ಮಾರ್ಗಸೂಚಿ ಪ್ರಕಾರ ತ್ಯಾಜ್ಯ ಸಂಗ್ರಹ, ವರ್ಗೀಕರಣ ಮತ್ತು ವಿಲೇವಾರಿ ಪ್ರಕ್ರಿಯೆಯನ್ನು ನಡೆಸಬೇಕು. ಅಕ್ಕಪಕ್ಕದ ಸ್ಥಳೀಯ ಸಂಸ್ಥೆಗಳು ಕ್ಲಸ್ಟರ್ ಮಾಡಿಕೊಂಡು ತ್ಯಾಜ್ಯ ವಿಲೇವಾರಿ ಘಟಕಗಳನ್ನು ಸ್ಥಾಪಿಸಬೇಕು. ಒಂದು ವೇಳೆ ಗ್ರಾಮ ಪಂಚಾಯತಿ ಜಾಗೆ ಲಭ್ಯವಿದ್ದರೆ ಅವರೊಂದಿಗೂ ಸೇರಿ ಕ್ಲಸ್ಟರ್ ಸ್ಥಾಪಿಸಬಹುದು ಎಂದು ಜಿಲ್ಲಾಧಿಕಾರಿ ಪಾಟೀಲ ಸಲಹೆ ನೀಡಿದರು.

**ಮಳೆಗಾಲ; ಪೂರ್ವಸಿದ್ಧತೆಗೆ ಸೂಚನೆ:**

ಚರಂಡಿ, ಗಟಾರು, ನಾಲಾ ಸೇ–ರಿದಂತೆ ಪ್ರತಿಯೊಂದು ಕಡೆಯೂ ಮಳೆನೀರು ಹರಿದು ಹೋಗುವಂತೆ ಸ್ವಚ್ಛತೆ ಕೈಗೊಳ್ಳಬೇಕು ಎಂದು ಎಲ್ಲ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಎಲ್ಲ ಚರಂಡಿ ಮತ್ತು ದೊಡ್ಡ ಗಟಾರುಗಳಲ್ಲಿ ಹೂಳೆತ್ತಬೇಕು. ಇದರಿಂದ ನೀರು ಸರಾಗವಾಗಿ ಹರಿಯಲು ಅನುಕೂಲವಾಗುತ್ತದೆ. ಮಳೆಗಾಲ ಪೂರ್ವದಲ್ಲಿ ರಸ್ತೆ, ಚರಂಡಿ ಮತ್ತಿತರ ಕಾಮಗಾ–ರಿಗಳನ್ನು ಪೂರ್ಣಗೊಳಿಸಬೇಕು. ವಿದ್ಯುತ್ ಕಂಬಗಳ ಸುಸ್ಥಿತಿಯಲ್ಲಿರಬೇಕು. ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಮಳೆಗಾಲದಲ್ಲಿ ಪ್ರತಿಯೊಬ್ಬ ಮುಖ್ಯಾಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ಕಡ್ಡಾಯವಾಗಿ ಇರಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಈಶ್ವರ ಉಳ್ಳಾಗಡ್ಡಿ, ಎನ್.ಜಿ.ಟಿ. ಮಾರ್ಗಸೂಚಿ ಪಾಲನೆಗೆ ಸಂಬಂಧಿಸಿದಂತೆ ಎಲ್ಲ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ವಿವರಿಸಿದರು. ಬೆಳಗಾವಿ ಉಪ ವಿಭಾಗಾಧಿಕಾರಿ ಬಲರಾಮ್ ಚವಾಣ, ಬೈಲಹೊಂಗಲ ಉಪ ವಿಭಾಗಾಧಿಕಾರಿ ಸಭೆಯಲ್ಲಿ ಉಪಸ್ಥಿತರಿದ್ದರು. ಜಿಲ್ಲೆಯ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾ–ರಿಗಳು, ಎಂಜಿನಿಯರ್ ಗಳು ಪಾಲ್ಗೊಂಡಿದ್ದರು.

# ಕೈಮಗ್ಗ ನೇಕಾರರಿಂದ ಅರ್ಜಿ ಆಹ್ವಾನ

ಬೆಳಗಾವಿ: ಕೈಮಗ್ಗ ನೇಕಾರರ ಕೌಶಲ್ಯವನ್ನು ಗುರುತಿಸಿ ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಲು ಕೈಮಗ್ಗ ನೇಯ್ಗೆ ವೃತ್ತಿಯಲ್ಲಿ ನೈಪುಣ್ಯತೆ, ಶ್ರೇಷ್ಠತೆ, ತಾಂತ್ರಿಕತೆ, ಉತ್ಕೃಷ್ಟತೆ ಹೊಂದಿರುವ ಕೈಮಗ್ಗ ನೇಕಾರರಿಗೆ 2023–24ನೇ ಸಾಲಿನ ರಾಜ್ಯ ಪ್ರಶಸ್ತಿಯನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ, ಸಾಮರ್ಥ್ಯ ಸೌಧ ಕಟ್ಟಡ, ಹರಿಮಂದಿರ ರಸ್ತೆ, ಅನಗೋಳ, ಬೆಳಗಾವಿ ಕಛೇರಿಗೆ ಸಂಪರ್ಕಿಸಿ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಉತ್ಪನ್ನದ ಮಾದರಿ (ಖಚಿಟ–ಠಿಟಜ) ಯೊಂದಿಗೆ ಮೇ. 31 2023 ರ ಒಳಗಾಗಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 0831–2950674 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಟವಾಡುವಾಗ ಕಾಲುವೆಗೆ ಬಿದ್ದು ಮೂವರು ಮಕ್ಕಳ ಸಾವು



ಚಿಕ್ಕಮಗಳೂರು: ಆಟವಾಡುವಾಗ ಆಯಾ ತಪ್ಪಿ ಕಾಲುವೆಯಲ್ಲಿ ಬಿದ್ದು ಮೂವರ ಮಕ್ಕಳು ಸಾವನ್ನಪ್ಪಿದ ಘಟನೆ ತರೀಕೆರೆ ತಾಲೂಕಿನ ಭದ್ರಾ ಡ್ಯಾಂ ಪಕ್ಕದ ಕಾಲುವೆಯಲ್ಲಿ ನಡೆದಿದೆ.

ಒಬ್ಬರ ರಕ್ಷಣೆಗೆ ಮತ್ತೊಬ್ಬರು ಹೋಗಿ ಮೂವರು ಸಾವನ್ನಪ್ಪಿದ್ದಾರೆ. ರವಿ (31), ಅನನ್ಯ (17), ಶಾಮವೇಣಿ (16) ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ ಮೃತ ದುರ್ದೈವಿಗಳು. ರವಿ ಮೂಲತಃ ಲಕ್ಕವಳ್ಳಿ ನಿವಾಸಿ, ಅನನ್ಯ, ಶಾಮವೇಣಿ ರವಿಯ ಸಹೋದರಿಯರ ಮಕ್ಕಳು. ಅನನ್ಯ ಮೂಲತಃ ಶಿವಮೊಗ್ಗ, ಶಾಮವೇಣಿ ನಂಜನಗೂಡಿನವರು ಎಂದು ತಿಳಿದುಬಂದಿದೆ.

ಸಂಬಂಧಿ ಮನೆ ಲಕ್ಕವಳ್ಳಿಗೆ ಬಂದಾಗ ನೀರಿನಲ್ಲಿ ಆಟವಾಡಲು ತೆರಳಿದ್ದಾರೆ. ಈ ವೇಳೆ ಆಯಾ ತಪ್ಪಿ ಕಾಲುವೆಗೆ ಬಿದ್ದು ಮೂವರು ಸಾವನ್ನಪ್ಪಿದ್ದಾರೆ. ರವಿ ಮೃತದೇಹ ಪತ್ತೆಯಾಗಿದ್ದು, ಮತ್ತಿಬ್ಬರ ಮೃತದೇಹಕ್ಕಾಗಿ ಶೋಧ ಕಾರ್ಯ ನಡೆಯುತ್ತಿದೆ. ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# 24 ನೇ ವಿಟಿಯು ರಾಜ್ಯ ಮಟ್ಟದ ಅಥ್ಲೆಟಿಕ್ ಕೂಟಕ್ಕೆ ಚಾಲನೆ

ಬೆಳಗಾವಿ : ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿಯು "ರಜತ ಮಹೋತ್ಸವ" ಅಂಗವಾಗಿ ದಿನಾಂಕ ಮೇ21 ರಿಂದ ಮೇ24 ರವರಿಗೆ '24 ನೇ ಅಂತರ ಕಾಲೇಜು ರಾಜ್ಯ ಮಟ್ಟದ ಅಥ್ಲೆಟಿಕ್ ಕೂಟ' ವನ್ನು ವಿ.ತಾ.ವಿ. ಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಉದ್ಘಾಟನಾ ಸಮಾರಂಭ ರವಿವಾರ ವಿ.ತಾ.ವಿ.ಯ ಮೈದಾನದಲ್ಲಿ ಜರುಗಿ–ತು. ಮಾನ್ಯ ಕುಲಪತಿಗಳಾದ ಪ್ರೊ ವಿದ್ಯಾಶಂಕರ್ ಎಸ್. ಅಧ್ಯಕ್ಷತೆಯಲ್ಲಿ ಅಂತಾರಾಷ್ಟ್ರೀಯ ಕ್ರೀಡಾಪಟು ಒಲಿಂಪಿಕ್ ಕ್ರೀಡೆಯಲ್ಲಿ ಭಾಗವಹಿಸಿದ ಹಾಗೂ ಹೈಜಂಪ್ (ಎತ್ತರ ಜಿಗಿತ) ರಾಷ್ಟ್ರ ಮಟ್ಟದ ದಾಖಲೆಯನ್ನು ಹೊಂದಿರುವ ಶ್ರೀಮತಿ ಸಹನಾ ಕುಮಾರಿ ಹಾಗೂ ಇವರ ಪತಿಯಾದ ಅಂತಾರಾಷ್ಟ್ರೀಯ ಕ್ರೀಡಾಪಟು ಶ್ರೀ. ನಾಗರಾಜ ಬಿ.ಜಿ., ಮುಖ್ಯ ಅತಿಥಿಗಳಾಗಿ ಆಗಮಿಸಿ ಜಂಟಿಯಾಗಿ ಈ ಕ್ರೀಡಾ ಕೂಟವನ್ನು ಧ್ವಜಾರೋಹಣ ಮಾಡುವುದರೊಂದಿಗೆ ಹಾಗೂ ಕ್ರೀಡಾಜ್ಯೋತಿಗೆ ಚಾಲನೆ ನೀಡುವುದರ ಮೂಲಕ ಉದ್ಘಾಟಿಸಿದರು. ಕ್ರೀಡಾಕೂಟದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಪಥ–ಸಂಚಲನ ಮಾಡಿ ಅತಿಥಿಗಳಿಗೆ ಗೌರವ ಸಲ್ಲಿಸಿದರು.



ಮುಖ್ಯ ಅತಿಥಿ ಶ್ರೀಮತಿ ಸಹನಾ ಕುಮಾರಿ ಮಾತನಾಡಿ "ನೀವೆಲ್ಲ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಇಷ್ಟೊಂದು ಆಸಕ್ತಿಯಿಂದ ಪಾಲ್ಗೊಳ್ಳುತ್ತಿರವುದು ಹೆಮ್ಮೆಯ ವಿಷಯವಾಗಿದ್ದು ನೀವು ಈ ಕ್ರೀಡೆಯಲ್ಲಿ ತಂತ್ರಜ್ಞಾನದಲ್ಲಿ ಬಳಕೆಯ ಕುರಿತು ಅಧ್ಯಯನ ಮಾಡಬೇಕು ಜೊತೆಗೆ ಕ್ರೀಡೆಯನ್ನು ಇನ್ನಷ್ಟು ಶ್ರೀಮಂತಗೊಳಿಸಲು ತಂತ್ರಜ್ಞಾನ ಖಂಡಿತವಾಗಿ ಸಹಾಯ ಮಾಡುತ್ತದೆ ಎಂದು ಹೇಳಿದರು.

ನಿಮ್ಮ ಈ ಇವತ್ತಿನ ಆಸಕ್ತಿ ಮುಂದಿನ ದಿನಗಳಲ್ಲಿ ನಮ್ಮ ರಾಜ್ಯಕ್ಕೆ ಹಾಗೂ ರಾಷ್ಟ್ರಕ್ಕೆ ಒಲಿಂಪಿಕ್ ಪದಕ ಗೆಲ್ಲುವಂತಾಗಲಿ ಎಂದು ಹಾರೈಸಿದರು.

ನಂತರ ಮಾತನಾಡಿದ ಅತಿಥಿ ಶ್ರೀ ನಾಗರಾಜ ಬಿ.ಜಿ ಅವರು ಕ್ರೀಡೆ ಮನುಷ್ಯನ ಆರೋಗ್ಯದ ಮೇಲೆ ತುಂಬಾ ಪರಿಣಾಮ ಬೀರುತ್ತವೆ ಆದ್ದರಿಂದ ಕ್ರೀಡೆ ವ್ಯಾಯಾಮ ಯೋಗ ಇವೆಲ್ಲವೂ ಮನುಷ್ಯನ ನಿತ್ಯ ಬದುಕಿನ ಚಟುವಟಿಕೆಯಾಗಬೇಕು ಇದರಿಂದ ಆರೋಗ್ಯಕರ ಸಮಾಜವನ್ನವನ್ನು ನಿರ್ಮಿಸಲು ಸಾಧ್ಯ ಎಂದು ಹೇಳಿದರು.

ಕ್ರೀಡಾಕೂಟದ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಕುಲಪತಿಗಳಾದ ಪ್ರೊ. ವಿದ್ಯಾಶಂಕರ ಎಸ್, ಅಧ್ಯಕ್ಷೀಯ ಮಾತುಗಳನ್ನು ಹೇಳುತ್ತ ಕ್ರೀಡೆ ದೇಹ ಆರೋಗ್ಯಕ್ಕೆ ಅವಶ್ಯವಿರುವ ಕೇವಲ ಭೌತಿಕ ಅಗತ್ಯವಿರದೆ ಇದು ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಮೇಲೆ ಧನಾತ್ಮಕ ಪರಿಣಾಮ ಬೀರುವದರಿಂದ ವಿಶ್ವವಿದ್ಯಾಲಯದ ಇಂಜಿನಿಯರಿಂಗ್ ಪಠ್ಯ ಕ್ರಮದಲ್ಲಿ ಕ್ರೀಡೆ, ಏನ್ ಎಸ್ ಎಸ್ ಹಾಗೂ ಯೋಗ ವನ್ನು ಪಠ್ಯದಲ್ಲಿ ಸೇ–ರಿಸಲಾಗಿದೆ ಎಂದು ಹೇಳಿದರು.

# ನಾಳೆ ವಿದ್ಯುತ್ ವ್ಯತ್ಯಯ

ಧಾರವಾಡ: ಧಾರವಾಡ ಗ್ರಾಮೀಣ ಉಪವಿಭಾಗ ವ್ಯಾಪಿಯಲ್ಲಿ ಬರುವ 110 ಕೆ.ವಿ. ಅಳ್ನಾವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಮೇ.24 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು 1ನೇ ತ್ರೈಮಾಸಿಕ ತುರ್ತುಪಾಲನಾ ಕಾಮಗಾರಿಯನ್ನು ಕೈಗೊಳ್ಳಲಿದೆ.

ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ 11ಕೆವಿ ಮಾರ್ಗಗಳಲ್ಲಿ ಮೇ.24 ರಂದು ಬೆಳಿಗ್ಗೆ 10 ಘಂಟೆಯಿಂದ ಸಾಯಂಕಾಲ 6 ಘಂಟೆಯವರೆಗೆ ಅಳ್ನಾವರ ಪಟ್ಟಣ, ಬೆಣಚಿ, ಡೋರಿ, ಸುರೆಬೈಲ್, ಗೋಪನಟ್ಟಿ, ಹುಳ್ಳಿಗೇರಿ, ಕಡಬಗಟ್ಟಿ, ಇಂಡಸಗೇರಿ, ಅವರತ್ತೈಲ್, ಜೊಡಳ್ಳಿ, ದುಂಡಳ್ಳಿ, ಒದಗೆರಾ, ತಾವರಗೇರಿ, ಬಾಳಗುಂದ, ಚುಂಚವಾಡ, ಲಿಂಗನಮಠ, ಹೊಸ ಲಿಂಗನಮಠ ಮತ್ತು ಪಾಲಗೆರಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತುಮುತ್ತಲಿನ ಗ್ರಾಮಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಅದರಂತೆ, ಧಾರವಾಡ ಗ್ರಾಮೀಣ ಉಪವಿಭಾಗ ವ್ಯಾಪಿಯಲ್ಲಿ ಬರುವ 110 ಕೆ.ವಿ. ಶೇಡಬಾಳಖಾನಾಪುರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಮೇ.24 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು 1ನೇ ತ್ರೈಮಾಸಿಕ ತುರ್ತುಪಾಲನಾ ಕಾಮಗಾರಿಯನ್ನು ಕೈಗೊಳ್ಳಲಿದೆ.

ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ 11ಕೆವಿ ಮಾರ್ಗಗಳಲ್ಲಿ ಮೇ.24 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಗರಗ, ಹಂಗರಕಿ, ದುಬ್ಬದಮರಡಿ, ಅಗಸನಹಳ್ಳಿ, ಶೇಡಬಾಳಖಾನಾಪುರ, ತಡ್ಕೊಡ, ಮಾದನಭಾವಿ, ಮುಗಳಿ, ಹೋಸಟ್ಟಿ ಬೊಗುರ್, ಜಿರಗಿವಾಡ ಮತ್ತು ಕೊಟಬಾಗಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತುಮುತ್ತಲಿನ ಗ್ರಾಮಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# ಸುರಿದ ಮಹಾಮಳೆಗೆ ಯುವಕ ಬಲಿ



ಬೆಂಗಳೂರು: ಭಾನುವಾರ ನಗರದಲ್ಲಿ ಸು–ರಿದ ಮಹಾಮಳೆಗೆ ಯುವಕನೋರ್ವ ರಾಜ–ಕಾಲುವೆಯಲ್ಲಿ ಕೊಚ್ಚಿ ಹೋದ ಘಟನೆ ಕೆಪಿ ಅಗ್ರಹಾರದ ಬಳಿ ನಡೆದಿದೆ.

ಕೊಚ್ಚಿ ಹೋಗಿದ್ದ ಯುವಕನನ್ನು ಲೋಕೇಶ್ (27) ಎಂದು ಗುರುತಿಸಲಾಗಿದೆ. ಯುವಕನ ಮೃತದೇಹ ಬ್ಯಾಟರಾಯನಪುರದ ರಾಜಕಾಲುವೆ ಬಳಿ ಪತ್ತೆಯಾಗಿದೆ. ಸ್ಥಳದಲ್ಲಿ ಪೊಲೀಸರು ಪರಿಶೀಲನೆ ನಡೆಸಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ಸಾಗಿಸಲಾಗಿದೆ. ಈ ಕುರಿತು ಕೆಪಿ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅವೈಜ್ಞಾನಿಕ ರಾಜ–ಕಾಲುವೆ ಕಾಮಗಾರಿಯಿಂದ ಈ ದುರ್ಘಟನೆ ಸಂಭವಿಸಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

# ಕನ್ನಡ ಭಾಷೆ ಉಳಿಸಿಕೊಳ್ಳುವ ಮೂಲಕ ಮಕ್ಕಳಲ್ಲಿ ಸಾಹಿತ್ಯ ಭಾವನೆ ಮೂಡಿಸಬೇಕಾಗಿದೆ: ಎಲ್ ಎಸ್ ಶಾಸ್ತ್ರಿ

ಬೆಳಗಾವಿ : ರವಿವಾರದದಂದು ಸರಕಾರಿ ನೌಕರರ ಭವನದಲ್ಲಿ ಭಾವಸಂಗಮ 9ನೆಯ ವಾರ್ಷಿಕ ಸರ್ವ ಸದಸ್ಯರ ಮಹಾಸಂಗಮ ಕಾರ್ಯಕ್ರಮ ಅಯೋಜಿಸಲಾಗಿತ್ತು.

ಭಾವ ಸಂಗಮದಕಾರ್ಯಕ್ರಮದಲ್ಲಿ ಮನಸು ಮನಸುಗಳ ಬೆಸೆಯುವ ಸಮಾಗಮ ನಡೆಯಿತು.ಸಾಹಿತಿಗಳಿಗೆ ಹಾಗೂ ಲೇಖಕರಿಗೆ ಪ್ರಶಸ್ತಿ ವಿತರಣಾ ಕಾರ್ಯಕ್ರಮ ಮಾಡಲಾತು.ಕಾರ್ಯಕಮದ ಉದ್ಘಾಟಕ ಎಲ್.ಎಸ್ .ಶಾಸ್ತ್ರೀ ಮಾತನಾಡಿ ಈ ಕಾರ್ಯಕ್ರಮ ಭಾವಸಂಗಮವಲ್ಲ ಸಾಹಿತ್ಯ ಸಮ್ಮೇಳನವಾಗಿದೆ ವಿಶೇಷವಾಗಿ ಬೆಳಗಾವಿಯ ಮಹಿಳಾಮಣಿಗಳು ಕನ್ನಡದ ಸಾಹಿತ್ಯದ ಬಗೆಗಿನ ಕಾರ್ಯಕ್ರಮ ಮಾಡುವುದರಲ್ಲಿ ಎತ್ತಿದ ಕೈ ಎಂದರು.



ಭಾವ ಎಲ್ಲರ ಮನಸ್ಸಿನಲ್ಲಿರುವ ಶಕ್ತಿಯಾಗಿದೆ ಅದನ್ನು ಬರವಣಿಗೆಯ ಮೂಲಕ ಸಂಗಮವಾಗಬೇಕಿದೆ ನಮ್ಮ ನಂತರವೂ ಕಾವ್ಯ ಉಳಿಯಬೇಕಾದರೆ ಅದರಲ್ಲಿ ಸತ್ವಗುಣ ಹೊಂದಿರಬೇಕಾಗಿರುವುದು ಬಹಳ ಮುಖ್ಯ ಹಿರಿಯ ಸಾಹಿತಿಗಳು ಬರೆದ ಬರವಣಿಗೆಗಳನ್ನು ಇಲ್ಲಿಯ ವರೆಗೆ ಉಳಿಸಿಕೊಂಡು ಬಂದಿದ್ದೇವೆ ಅವುಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದರು

ಕಾರ್ಯಕ್ರಮದ ಸರ್ವಾಅಧ್ಯಕ್ಷತೆ ಶ್ರೀಮತಿ ಜ್ಯೋತಿ ಬಾದಾಮಿ,ಉದ್ಘಾಟಕರು ಎಲ್,ಎಸ್,ಶಾಸ್ತ್ರಿ,ಹಾಗೂ ಶ್ರೀಮತಿ ಶಾರದಾ ಶಾಸ್ತ್ರಿ,ಮುಖ್ಯ ಅತಿಥಿಗಳು ಶ್ರೀಮತಿ ರಜನಿ ಜೀರಾಗ್ಯಾಳ ಗೌರವ ಉಪಸ್ಥಿತಿ ವಾಲ್ಟರ್ ಹೆಚ್ ಡಿಮೆಲ್ಲೋ ಅಧ್ಯಕ್ಷತೆ ರಾಜೇಂದ್ರ ಪಾಟೀಲ್ ಹಾಗೂ ಸಾಹಿತಿಗಳು ಕವಿಗಳು ಮುಂತಾದವರು ಉಪಸ್ಥಿತ–ರಿದ್ದರು.

# ಡಿಮ್ಹಾನ್ಸ್ ಸಂಸ್ಥೆಯಲ್ಲಿ ಬೌದ್ಧಿಕ ವಿಕಲಚೇತನ ವ್ಯಕ್ತಿಗಳಿಗಾಗಿ ತಪಾಸಣಾ ಶಿಬಿರ

ಧಾರವಾಡ: ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ (ಡಿಮ್ಹಾನ್ಸ್) ಸಂಸ್ಥೆಯ ಸಭಾಗಂಣದಲ್ಲಿ ಬೌದ್ಧಿಕ ವಿಕಲಚೇತನ ವ್ಯಕ್ತಿಗಳಿಗೆ ತರಬೇತಿ, ಕಲಿಕಾ, ಸಾಮಾಗ್ರಿಗಳು (ಟಿ.ಎಲ್.ಎಮ್.ಕಿಟ್) ಒದಗಿಸುವ ಸಲುವಾಗಿ ತಪಾಸಣಾ ಶಿಬಿರವನ್ನು ಇತ್ತೀಚಿಗೆ (ಮೇ.19, 20) ಎರಡು ದಿನಗಳ ಕಾಲ ಹಮ್ಮಿಕೊಳ್ಳಲಾಗಿತ್ತು. ಸಂಯುಕ್ತ ಪ್ರಾದೇಶಿಕ ಕೆಂದ್ರ (ದಿವ್ಯಾಂಗ ಜನರಿಗಾಗಿ) ದಾವಣಗೆರೆ, ಡಿಮ್ಹಾನ್ಸ್ ಸಂಸ್ಥೆಯ ಕ್ಲಿನಿಕಲ್ ಸೈಕಾಲಜಿ ವಿಭಾಗ, ಸಮುದಾಯ ಆಧಾರಿತ ಆರೋಗ್ಯ ಕಾರ್ಯಕ್ರಮಗಳ ಘಟಕ ಮತ್ತು ಸ್ವಾಮಿ ವಿವೇಕಾನಂದ ಯೂತ್ ಮೂವಮೆಂಟ್ (ಎಸ್.ವ್ಹಿ.ವಾಯ್.ಎಮ್) ಧಾರವಾಡದ ವತಿಯಿಂದ ಈ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ಈ ತಪಾಸಣಾ ಶಿಬಿರವನ್ನು ಧಾರವಾಡ ಡಿಮ್ಹಾನ್ಸ್ ಮಾನಸಿಕ ಆರೋಗ್ಯ ವಿಮರ್ಶಾ ಮಂಡಳಿಯ ಅಧ್ಯಕ್ಷರಾದ ಆರ್.ರೇಣುಕೆ ಅವರು ಸಸಿಗೆ ನೀರು ಹಾಕುವುದರ ಮೂಲಕ ಚಾಲನೆ ನೀಡಿದರು.



ನಂತರ ಅವರು ಮಾತನಾಡಿ, ಬೌದ್ಧಿಕ ವಿಕಲಚೇತನ ಸಮಸ್ಯೆಯನ್ನು ಹೊಂದಿರುವ ವಿಶೇಷ ಮಕ್ಕಳನ್ನು ಅಥ–ವಾ ವ್ಯಕ್ತಿಗಳನ್ನು ಯಾವುದೇ ತಾರತಮ್ಯ ಮಾಡದೇ ಪ್ರೀತಿಯಿಂದ ಕಾಳಜಿ ಮಾಡಬೇಕು. ಬೌದ್ಧಿಕ ವಿಕಲಚೇತನ ಹೊಂದಿದ ವ್ಯಕ್ತಿಗಳನ್ನು ಗೌರವದೊಂದಿಗೆ ಮತ್ತು ಸಮುದಾಯದಲ್ಲಿ ಇತರರಂತೆ ಸಮಾನವಾಗಿ ಕಾಣಬೇಕು ಎಂದು ತಿಳಿಸಿದರು.

ಡಿಮ್ಹಾನ್ಸ್ ಸಂಸ್ಥೆಯ ವೈದ್ಯಕೀಯ ಅಧೀಕ್ಷಕರಾದ ಡಾ.ಸರಸ್ವತಿ ತೆನಗಿ ಮಾತನಾಡಿ, ಡಿಮ್ಹಾನ್ಸ್ ಸಂಸ್ಥೆಯ ವತಿಯಿಂದ ಹಲವಾರು ಮಾನಸಿಕ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗಿದೆ. ವಿಕಲಚೇತನ ಹೊಂದಿದ ಮಕ್ಕಳ ಸೇವೆ ದೇವರ ಸೇವೆಯಿದ್ದ ಹಾಗೆ ಮತ್ತು ಇವರ ಸೇವೆ ಮಾಡುವುದು ದೇವರಿಗೆ ಮುಟ್ಟುತ್ತದೆಯೆಂದು ತಿಳಿಸಿದರು.

ಧಾರವಾಡದ ಸ್ವಾಮಿ ವಿವೇಕಾನಂದ ಯೂತ್ ಮೂವಮೆಂಟ್ನ ಹಿರಿಯ ವ್ಯವಸ್ಥಾಪಕ ಡಾ.ಮೋಹನ್ ಕುಮಾರ ಥಂಬದ, ಡಿಮ್ಹಾನ್ಸ್ ಸಂಸ್ಥೆಯ ಕ್ಲಿನಿಕಲ್ ಸೈಕಾಲಜಿ ವಿಭಾಗದ ಮುಖ್ಯಸ್ಥರಾದ ಡಾ.ಗಾಯತ್ರಿ ಹೆಗಡೆ ಅವರು ಮಾತನಾಡಿದರು.

ಸಂಯುಕ್ತ ಪ್ರಾದೇಶಿಕ ಕೆಂದ್ರ (ದಿವ್ಯಾಂಗ ಜನರಿಗಾಗಿ) ದಾವಣಗೆರೆಯ ಕ್ಲಿನಿಕಲ್ ಅಸಿಸ್ಟಂಟ್ ಮತ್ತು ಸಂಯೋಜಕರಾದ ರಾಜು .ಟಿ. ಅವರು ವಿಶೇಷ ಉಪನ್ಯಾಸ ನೀಡಿದರು. ವಿಕಲಚೇತನ ವ್ಯಕ್ತಿಗಳಿಗೆ ಇರುವ ಸರಕಾರಿ ಸೌಲಭ್ಯಗಳ ಬಗ್ಗೆ ವಿವರಿಸಿದರು.

ಧಾರವಾಡ ಜಿಲ್ಲೆಯ ವಿವಿಧ ಸ್ಥಳಗಳಿಂದ ಈ ಶಿಬಿರಕ್ಕೆ 160 ಕ್ಕೂ ಹೆಚ್ಚು ಬೌದ್ಧಿಕ ವಿಕಲಚೇತನ ವ್ಯಕ್ತಿಗಳು ಅವರ ಆರೈಕೆದಾರರ ಜೊತೆ ಈ ಎರಡು ದಿನಗಳ ಶಿಬಿರದಲ್ಲಿ ಹಾಜರಿದ್ದರು.

ಈ ತಪಾಸಣಾ ಶಿಬಿರದಲ್ಲಿ ಕ್ಲಿನಿಕಲ್ ಸೈಕಾಲಜಿ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ವಿಜಯಕುಮಾರ ಹಿರೇಮಠ ಅವರು ಉಪಸ್ಥಿತರಿದ್ದರು. ಕ್ಲಿನಿಕಲ್ ಸೈಕಾಲಜಿ ವಿಭಾಗದದ ಎಂ.ಫೀಲ್ ವಿದ್ಯಾರ್ಥಿನಿಯರಾದ ದೀಪಾ, ಸಂಕಲ್ಪ, ಚೈತ್ರಾ, ಶ್ರೀನಿಧಿ, ಸುಷ್ಮಾ ಜೈನ್ ಮತ್ತು ಎಂ.ಎಸ್ಸಿ ಇನ್ ಕ್ಲಿನಿಕಲ್ ಸೈಕಾಲಜಿ ವಿಭಾಗದ ವಿದ್ಯಾರ್ಥಿನಿಯರಾದ ಶ್ರೇಯಾ, ವೀಣಾ, ರಾಘವೇಣಿ, ಅರ್ಪಿತಾ ಇವರು ತಪಾಸಣಾ ಶಿಬಿರದಲ್ಲಿ ಭಾಗವಹಿಸಿದ್ದರು.

ಡಿಮ್ಹಾನ್ಸ್ ಸೈಕಿಯಾಟ್ರಿ ವಿಭಾಗದ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥರಾದ ಡಾ.ರಾಘವೇಂದ್ರ ನಾಯಕ್, ಎಸ್.ವ್ಹಿ.ವಾಯ್.ಎಮ್ ಸಂಸ್ಥೆಯ ಹೇಮಾ, ಸುಹಾನಾ ಚೌವಾಣ್ ಮತ್ತು ಕುಮಾರ್ ಹಾಗೂ ಡಿಮ್ಹಾನ್ಸ್ ಸಂಸ್ಥೆಯ ಸಿಬ್ಬಂದಿ ಪ್ರವೀಣ್ ಭಾಗವಹಿಸಿದ್ದರು. ಆರೂಢ ಸಂಸ್ಥೆಯ ಮುಖ್ಯಸ್ಥರಾದ ನಾಗರಾಜ ಹೂಗಾರ ಮತ್ತು ಧಾರವಾಡದ ಮಮತಾ ಬುದ್ದಿಮಾಂದ್ಯ ವಿಶೇಷ ಮಕ್ಕಳ ಶಾಲೆಯ ಮುಖ್ಯಸ್ಥರು ಉಪಸ್ಥಿತರಿದ್ದರು. ಅರ್ಪಿತಾ ಅವರು ಪ್ರಾರ್ಥಿಸಿದರು. ಚೈತ್ರಾ ಕಾರ್ಯಕ್ರಮ ನಿರೂಪಣೆ ಮತ್ತು ಸ್ವಾಗತ ಮಾಡಿದರು.

# ಕನ್ನಡದ ಖ್ಯಾತ ನಟ ಶರತ್ ಬಾಬು ಇನ್ನಿಲ್ಲ



ಬೆಂಗಳೂರು: ಕನ್ನಡದ ಹಲವು ಸಿನಿಮಾಗಳಲ್ಲಿ ನಟಿಸಿರುವ ಶರತ್ ಬಾಬು ಅವರು ನಿಧನರಾಗಿದ್ದಾರೆ. ಮೇ 22ರಂದು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ನಟ ಕೊನೆಯುಸಿರೆಳೆದಿದ್ದಾರೆ.

ನಟ ಶರತ್ ಬಾಬು ಅವರನ್ನು ಏಪ್ರಿಲ್ ಮೊದಲ ವಾರದಲ್ಲಿ ಬೆಂಗಳೂರಿನ ಚಿಕಿತ್ಸೆ ನೀಡಲಾಗಿ–ತ್ತು. ಆರೋಗ್ಯದಲ್ಲಿ ಚೇತರಿಕೆ ಕಂಡ ಬಳಿಕ ಹೈದರಾಬಾದ್‌ನ ಖಾಸಗಿ ಆಸ್ಪತ್ರೆಗೆ ಸೇರಿಸಲಾಯಿತು. ಬಹು ಅಂಗಾಂಗ ವೈಫಲ್ಯದಿಂದ ಶರತ್ ಬಾಬು ಅವರು ಬಳಲುತ್ತಿದ್ದರು. ಈಗ ಚಿಕಿತ್ಸೆ ಫಲಕಾರಿಯಾಗದೇ ನಟ ಶರತ್ (ಮೇ.22) ಇಹಲೋಕ ತ್ಯಜಿಸಿದ್ದಾರೆ. ಐಸಿಯು ವಾರ್ಡ್‌ನಲ್ಲಿಟ್ಟು ಸೂಕ್ತ ಚಿಕಿತ್ಸೆ ನೀಡಿ, ಲಕ್ಷ ಲಕ್ಷ ಖರ್ಚು ಮಾಡಿದ್ರು ಕೂಡ ಶರತ್ ಬಾಬು ಅವರನ್ನ ಉಳಿಸಿಕೊಳ್ಳಲು ಆಗಲಿಲ್ಲ.

ನಾಲ್ಕು ದಶಕಗಳ ಕಾಲ ಚಿತ್ರೋದ್ಯಮದಲ್ಲಿ ಕಲಾವಿದರಾಗಿ ಗುರುತಿಸಿಕೊಂಡಿರುವ ಶರತ್ ಬಾಬು, ಹುಟ್ಟಿದ್ದು ಆಂಧ್ರಪ್ರದೇಶದಲ್ಲಿ. ಆದರೂ, ಕನ್ನಡ ಸೇರಿದಂತೆ ಹಲವು ಭಾಷೆಗಳಲ್ಲಿ ಅವರು ನಟಿಸಿದ್ದಾರೆ. ಕನ್ನಡದಲ್ಲಿ ಅವರು 'ಅಮೃತವರ್ಷಿಣಿ' ಶರತ್ ಬಾಬು ಎಂದೇ ಫೇಮಸ್ ಆಗಿದ್ದಾರೆ. ಇನ್ನೂರಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ ಹೆಗ್ಗಳಿಕೆ ಅವರದಾಗಿತ್ತು. ಶಕ್ತಿ, ಕಂಪನ, ರಣಚಂಡಿ, ತುಳಸಿದಳ ಸೇರಿದಂತೆ ಕನ್ನಡದ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. ಶರತ್ ಬಾಬು ಅವರ ನಿಧನಕ್ಕೆ ಚಿತ್ರರಂಗದ ನಟ– ನಟಿಯರು ಸಂತಾಪ ಸೂಚಿಸಿದ್ದಾರೆ. ನೆಚ್ಚಿನ ನಟನ ನಿಧನಕ್ಕೆ ಅಭಿಮಾನಿಗಳು ಕಂಬನಿ ಮಿಡಿದಿದ್ದಾರೆ.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

# ಅತಿವೃಷ್ಟಿ–ಪ್ರಾಣಹಾನಿ ತಡೆಗೆ ಸೂಕ್ತ ಕ್ರಮಕ್ಕೆ ಜಿಲ್ಲಾಧಿಕಾರಿ ಕಟ್ಟುನಿಟ್ಟಿನ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಅತಿವೃಷ್ಟಿ ಅಥ–'ವಾ ಪ್ರವಾಹ ಸಂದರ್ಭದಲ್ಲಿ ಯಾವುದೇ ರೀತಿಯ ಪ್ರಾಣಹಾನಿಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸೋಮವಾರ (ಮೇ 22) ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ತಾಲ್ಲೂಕಿನಲ್ಲಿ ವಿಪತ್ತು ನಿರ್ವಹಣಾ ಸಭೆಯನ್ನು ನಡೆಸಿ ಮಳೆಗಾಲದಲ್ಲಿ ಎದುರಾಗಬಹುದಾದ ಸಮಸ್ಯೆಗಳ ನಿರ್ವಹಣೆಗೆ ಸೂಕ್ತ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಬೆಂಗಳೂರಿನಲ್ಲಿ ನಡೆದಂತಹ ದುರ್ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು.

ಯಾವುದೇ ರೀತಿಯ ವಿದ್ಯುತ್ ದುರ್ಘಟನೆ ಆಗದಂತೆ ಎಚ್ಚರಿಕೆ ವಹಿಸಬೇಕು. ಜಮೀನುಗಳಲ್ಲಿ ವಿದ್ಯುತ್ ತಂತಿ ಹರಿದು ಬಿದ್ದ ಪರಿಣಾಮವಾಗಿ ಕೆಲವೆಡೆ ಜೀವಹಾನಿಯಾದ ಬಗ್ಗೆ ವರದಿಯಾಗಿರುತ್ತವೆ. ಇಂತಹ ಘಟನೆಗಳು ಮರುಕಳಿಸಬಾರದು.

**ಚರಂಡಿ, ಗಟಾರು ಹೂಳೆತ್ತಲು ಸೂಚನೆ:** ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಇರುವ ಚರಂಡಿಗಳು, ದೊಡ್ಡ ದೊಡ್ಡ ಗಟಾರುಗಳ ಹೂಳೆತ್ತುವ ಕೆಲಸವನ್ನು ಆದ್ಯತೆ ಮೇರೆಗೆ ಮಾಡಬೇಕು. ನೀರು ಸರಾಗವಾಗಿ ಹರಿದು ಹೋಗುವಂತೆ ಸ್ವಚ್ಛಗೊಳಿಸಬೇಕು.



ನದಿಯಲ್ಲಿ ಈಜಲು ತೆರಳಿದಾಗ ಪ್ರಾಣಹಾನಿ ಸಂಭವಿಸುತ್ತದೆ. ಆದ್ದರಿಂದ ಎಚ್ಚರಿಕೆ ಫಲಕಗಳನ್ನು ಅಳವಡಿಸಬೇಕು. ಇದಲ್ಲದೇ ನದಿ ಪಾತ್ರದ ಅಪಾಯಕಾರಿ ಸ್ಥಳಗಳ ಬಗ್ಗೆ ಫಲಕ ಅಳವಡಿಸಬೇಕು.

ಅನೇಕ ಕಡೆ ಮರಗಳು ಉರುಳಿ ಬಿದ್ದು ಪ್ರಾಣಹಾನಿ ಸಂಭವಿಸುತ್ತಿವೆ. ಆದ್ದರಿಂದ ರಸ್ತೆಬದಿಯ ಮರಗಳ ಸ್ಥಿತಿಗತಿಯನ್ನು ಪರಿಶೀಲಿಸಬೇಕು. ಅಗತ್ಯವೆನಿಸಿದರೆ ಅರಣ್ಯ ಇಲಾಖೆಯ ಜತೆಗೂಡಿ ನಿಯಮಾನುಸಾರ ಟೊಂಗೆಗಳನ್ನು ಅಥ–'ವಾ ಮರವನ್ನು ತೆರವುಗೊಳಿಸಬೇಕು ಎಂದು ತಿಳಿಸಿದರು.

ಕುಡಿಯುವ ನೀರಿನ ಕೊರತೆ ಕಂಡುಬಂದರೆ ಟ್ಯಾಂಕರ್ ಮೂಲಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಎಂದು ತಹಶೀಲ್ದಾರರು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾ–ರಿಗಳಿಗೆ ತಿಳಿಸಿದರು.

**ಕಂಟ್ರೋಲ್ ರೂಮ್ ಆರಂಭಿಸಲು ಸೂಚನೆ:** ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿ ಕಚೇ–ರಿಯಲ್ಲಿ ತುರ್ತು ಸಹಾಯಕ್ಕಾಗಿ ಕಂಟ್ರೋಲ್ ರೂಮ್ ಸ್ಥಾಪಿಸಲಾಗುವುದು. ಅದೇ ರೀತಿ ಎಲ್ಲ ತಾಲ್ಲೂಕು ಕೇಂದ್ರಗಳಲ್ಲಿ ಕೂಡ ಜನರಿಗೆ ತುರ್ತು ನೆರವು ನೀಡಲು ಸಹಾಯವಾಗುವಂತೆ ಕಂಟ್ರೋಲ್ ರೂಮ್ ಆರಂಭಿಸಬೇಕು.

ಜಿಲ್ಲೆಯಲ್ಲಿ ಕೃಷ್ಣಾ, ಮಲಪ್ರಭಾ, ಘಟಪ್ರಭಾ ಸೇರಿದಂತೆ ಎಲ್ಲ ನದಿಯ ಒಳಹರಿವು ಮೇಲೆ ನಿರಂತರ ನಿಗಾ ವಹಿಸಬೇಕು. ತುರ್ತು ಸೇವೆಗೆ ಅಗತ್ಯವಿರುವ ಬೋಟ್, ಜೆಸಿಬಿ ಮತ್ತಿತರ ಉಪಕರಣಗಳಿಗೆ ಸಂಬಂಧಿಸಿದಂತೆ ಎಲ್ಲ ರೀತಿಯ ಪೂರ್ವಸಿದ್ಧತೆ ಮಾಡಿಕೊಳ್ಳಬೇಕು.

**ಕಾಳಜಿ ಕೇಂದ್ರ ಪಟ್ಟಿ ಸಿದ್ಧಪಡಿಸಲು ಸೂಚನೆ:** ಪ್ರವಾಹ ಸಂದರ್ಭದಲ್ಲಿ ಜನರನ್ನು ರಕ್ಷಿಸಿದ ಬಳಿಕ ಅವರಿಗೆ ಸೂಕ್ತ ವಸತಿ, ಊಟೋಪಹಾರ ಒದಗಿಸಲು ಅನುಕೂಲವಾಗುವಂತೆ ಕಾಳಜಿ ಕೇಂದ್ರ ಸ್ಥಾಪಿಸಬೇಕಾಗುತ್ತದೆ. ಆದ–'ರಿಂದ ಕಾಳಜಿ ಕೇಂದ್ರಗಳ ಪಟ್ಟಿಯನ್ನು ಸಿದ್ಧಪಡಿಸಿಟ್ಟುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

ಮಳೆಯ ಮುನ್ಸೂಚನೆ ಕುರಿತು ಪ್ರತಿಯೊಂದು ಗ್ರಾಮಗಳ ಜನರಿಗೆ ಮಾಹಿತಿಯನ್ನು ನೀಡಲು ಡಂಗುರ ಸಾರಬೇಕು.

ಸಿಡಿಲು, ಸಚೇತ್ ಹಾಗೂ ಧಾಮಿನಿ ಆಪ್ ಡೌನ್‌ಲೋಡ್ ಮಾಡಿಕೊಳ್ಳಬೇಕು. ಸಿಡಿಲು ಬರುವ 30 ನಿಮಿಷಗಳ ಮುಂಚೆಯೇ ಇವುಗಳಲ್ಲಿ ಮಾಹಿತಿ ಲಭಿಸಲಿದೆ. ಮರಗಳು ಉರುಳಿ ಬಿದ್ದಾಗ ತಕ್ಷಣವೇ ತೆರವುಗೊಳಿಸಲು ಅಗತ್ಯವಿರುವ ಯಂತ್ರೋಪಕರಣಗಳು ಮತ್ತು ಸಲಕರಣೆಗಳನ್ನು ಸಿದ್ಧವಾಗಿಟ್ಟುಗೊಳ್ಳಬೇಕು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಎಚ್ಚ–ರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಶಿಥಿಲಗೊಂಡಿರುವ ಅಂಗನವಾಡಿ ಕೇಂದ್ರಗಳು ಮತ್ತು ಶಾಲಾ ಕೊಠಡಿಗಳನ್ನು ಗುರುತಿಸಬೇಕು. ಅದೇ ರೀತಿ ಶಿಥಿಲಗೊಂಡ ಮನೆಗಳನ್ನು ಗುರುತಿಸಬೇಕು. ಸಾಧ್ಯವಾದರೆ ಮಳೆಗಾಲದಲ್ಲಿ ಸುರಕ್ಷಿತ ಜಾಗೆಯಲ್ಲಿ ಇರುವಂತೆ ಮನವೊಲಿಸಬೇಕು ಎಂದು ತಿಳಿಸಿದರು.

ಎನ್.ಡಿ.ಆರ್.ಎಫ್. ತಂಡ ಜೂನ್‌ನಲ್ಲಿ ಆಗಮಿಸಲಿದ್ದು, ಕಳೆದ ಬಾರಿಯಂತೆ ನದಿತೀರದ ಗ್ರಾಮಗಳಲ್ಲಿ ಅವರು ಪರಿಶೀಲನೆ ನಡೆಸಿ ಸೂಕ್ತ ಸಿದ್ಧತೆಗಳನ್ನು ಮಾಡಿಕೊಳ್ಳಲಿದ್ದಾರೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಂಜೀವ ಪಾಟೀಲ ಮಾತನಾಡಿ, ತುರ್ತು ಸಂದರ್ಭದಲ್ಲಿ ಬರುವ ಕರೆಗಳನ್ನು ನಿರ್ಲಕ್ಷಿಸಬಾರದು ಎಂದು ತಿಳಿಸಿದರು.


ತುರ್ತು ಸಂದರ್ಭದಲ್ಲಿ ಸ್ಪಂದಿಸಲು ತಂಡಗಳನ್ನು ರಚಿಸಬೇಕು. ಪ್ರತಿಯೊಬ್ಬ–ರಿಗೂ ತಮ್ಮ ಕೆಲಸದ ಬಗ್ಗೆ ಸ್ಪಷ್ಟ ಅರಿವು ಇರಬೇಕು. ಅಗತ್ಯವಾದ ತರಬೇತಿ ಮತ್ತು ಅಗತ್ಯ ಸಲಕರಣೆಗಳನ್ನು ನೀಡಬೇಕು ಎಂದು ತಿಳಿಸಿದರು.

ಜಿಲ್ಲೆಯ ಕೆಲ ಪ್ರಮುಖ ರಸ್ತೆಗಳ ಬದಿಯಲ್ಲಿ ದೊಡ್ಡ ದೊಡ್ಡ ಕಂದಕಗಳಿದ್ದು, ವಾಹನಗಳು ಸುರಕ್ಷಿತವಾಗಿ ಸಾಗಲು ಅನುಕೂಲವಾಗುವಂತೆ ಫಲಕಗಳನ್ನು ಅಳವಡಿಸಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್, ಸ್ಥಳಾಂತರ ಮಾಡಲಾದ ಗ್ರಾಮಗಳಲ್ಲಿ ಈಗಲೂ ಜನರು ವಾಸವಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ನದಿತೀರದ ಅಂತಹ ಗ್ರಾಮಗಳ ಜನರನ್ನು ಬೇರೆಡೆಗೆ ಸ್ಥಳಾಂತರಿಸಬೇಕು ಎಂದು ತಿಳಿಸಿದರು.

ಉಪ ವಿಭಾಗಾಧಿಕಾರಿ ಬಲರಾಮ್ ಚವಾಣ, ಬೈಲಹೊಂಗಲ ಉಪ ವಿಭಾಗಾಧಿಕಾರಿ ಪ್ರಭಾವತಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತ–ರಿದ್ದರು. ಜಿಲ್ಲೆಯ ಎಲ್ಲ ತಹಶೀಲ್ದಾರರು ವಿಡಿಯೋ ಸಂವಾದದಲ್ಲಿ ಪಾಲ್ಗೊಂಡಿದ್ದರು.

## ಉತ್ತರ ಕರ್ನಾಟಕ ಭಾಗದ ವಿಚಾರ ಸಿದ್ದಾಂತ ಒಳಗೊಂಡ ಸಿನೆಮಾ ಮಾಡುವೆ: ಸತೀಶ ನೀನಾಸಂ



ಉತ್ತರ ಕರ್ನಾಟಕ ಜನ ನನ್ನ ಎಲ್ಲ ಸಿನಿಮಾಗಳನ್ನು ಗೆಲ್ಲಿಸಿದ್ದಾರೆ ಈ ಭಾಗದ ಜನರ ಪ್ರೀತಿಗೆ ನಾನು ಸದಾ ಚಿರಋಣಿ ಎಂದು ಕನ್ನಡದ ಖ್ಯಾತ ಚಿತ್ರನಟ ಸತೀಶ ನೀನಾಸಂ ಹೇಳಿದರುನಗರದಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ತಮ್ಮ ಮುಂದಿನ ಸಿನಿಮಾ 'ಅಶೋಕ್ ಬ್ಲೇಡ್'ಕುರಿತಾಗಿ ಮಾತನಾಡಿದರು ಸುಮಾರು 70 ದಶಕಗಳ ಹಿಂದಿನ ದಂತ ಕಥೆತೆಯ ಕಾರ್ಯ 90% ಮುಗಿದಿದ್ದು ತೆರೆಯೇ ಮೇಲೆ ಬರಲಿದ್ದು ಉತ್ತಮ ಚಿತ್ರವಗಿ ಹೊರಹೊಮ್ಮಲಿದೆ ಎಂದರು. ಇನ್ನು ನಾಯಕ ನಟಿ ರಚಿತಾರಾಮ್ ಪಾರ್ವತಿ ಪ್ರೊಡಕ್ಸ್ನ್ ನವರ ಮ್ಯಾಟ್ನಿ ಚಿತ್ರ 2 ತಿಂಗಳಲ್ಲಿ ಬಿಡುಗಡೆ ಯಾಗಲಿದೆ ಎಂದರು.

ಇನ್ನು ಉತ್ತರ ಕರ್ನಾಟಕದ ಸಾಕಷ್ಟು ಮಹದಾಯಿ ಹೋರಾಟ ಹಾಗೂ ಕಾರ್ಯಕ್ರಮಗಳಲ್ಲಿ ನಾನು ಭಾಗವಹಿಸಿದ್ದೇನೆ ಈ ಭಾಗದ ಕುರಿತು ಒಂದು ಉತ್ತಮವಾದ ಸಿನಿಮಾ ಮಾಡುತ್ತೇನೆ ಜನರು ಸದಾ ನನ್ನ ಚಿತ್ರಗಳನ್ನು ಗೆಲ್ಲಿಸಿದ್ದಾರೆ.ಲೂಸಿಯಾ ನನ್ನ ಜೀವನದಲ್ಲಿ ಎಲ್ಲರೂ ಗುರುತಿಸುವ ಚಿತ್ರವಾಗಿ ಹೊರಹೊಮ್ಮಿದೆ ಎಂದರು.ಕನ್ನಡಿಗರು ನಮ್ಮ ಕೈ ಹಿಡಿದಾಗ ನಂತರ ತಮಿಳು ತೆಲಗು ದೊಡ್ಡ ಮಟ್ಟದಲ್ಲಿ ತಲಿಪಿಸಲು ಸಾಧ್ಯವಾಗುತ್ತದೆ.ಎಂದರುಇನ್ನು ಹೊಸ ಸರ್ಕಾರ ಬಂದ ಮೇಲೆ ಚಿತ್ರರಂಗಕ್ಕೆ ಏನಾದ್ರು ಕೇಳುತ್ತೀರಾ ಎಂದಾಗ ಪ್ರತಿ ತಾಲೂಕುಗಳಲ್ಲಿ ಚಿತ್ರಮಂದಿರ ತಗೆದು ಹಾಗೂ ಕಡಿಮೆ ದರದಲ್ಲಿ ಟಿಕೆಟ್ ನೀಡುವ ಮೂಲಕ ಚಿತ್ರರಂಗವನ್ನು ಬೆಳಸಬೇಕು ಎಂದರುಎಲ್ಲ ಸಮುದಾಯದ ಜನ ಜಾತಿ ಭೇದ ಮರೆತು ಒಗ್ಗಟ್ಟಿನಿಂದ ಸೇರುವ ಸ್ಥಳ ಚಿತ್ರಮಂದಿರ ಅವುಗನ್ನು ಸದಾ ಕಾಲ ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿ ಎಂದರು.–ಬೈಟ್ಸುದ್ದಿಗೋಷ್ಠಿಯಲ್ಲಿ ಶಿವಾನಂದ ಮುತ್ತಣ್ಣವರ,ನಿರ್ದೇಶಕ ನಂದಿಶ ಉಪಸ್ಥಿತರಿದ್ದರು.

## ರಸ್ತೆ ಅಪಘಾತ: ಐವರ ಸ್ಥಿತಿ ಗಂಭೀರ



ಬೆಳಗಾವಿ : ಬೆಳಗಾವಿ ಜಿಲ್ಲೆಯ ಕಾಗವಾಡ ತಾಲೂಕಿನ ಉಗಾರ ಗ್ರಾಮದ ಸಮೀಪ ಕೆಎಸ್‌ಆ–ರ್‌ಟಿಸಿ ಬಸ್ ಹಾಗೂ ಕಾರು ಮುಖಾಮುಖಿ ಡಿಕ್ಕಿಯಾದ ಪರಿಣಾಮ ಕಾರಿನಲ್ಲಿದ್ದ ಐವರ ಸ್ಥಿತಿ ಗಂಭೀರವಾದ ಘಟನೆ ನಡೆದಿದೆ.

ಕಾರಿನಲ್ಲಿ ಹೋಗುತ್ತಿದ್ದವರು ಕೊಲ್ಲಾಪುರ ಮಹಾಲಕ್ಷ್ಮೀ ದರ್ಶನಕ್ಕೆ ಹೊರಟಿದ್ದರು ಎಂದು ತಿಳಿದು ಬಂದಿದೆ. ಈ ಘಟನೆಯಲ್ಲಿ ಗಂಭೀರ ಗಾಯಗೊಂಡ ಐವರನ್ನು ಮಹಾರಾಷ್ಟ್ರದ ಮೀರಜ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನೂ ಗಂಭೀರವಾಗಿ ಗಾಯಗೊಂಡವರ ಹೆಸರು ಇನ್ನು ತಿಳಿದು ಬಂದಿಲ್ಲ. ಕಾಗವಾಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಮೀರಜ್–ಜಮಖಂಡಿ ರಾಜ್ಯ ಹೆದ್ದಾರಿ ಮಧ್ಯೆ ಈ ದುರ್ಘಟನೆ ಸಂಭವಿಸಿದೆ. ಕಾಗವಾಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಉಚಿತ ಮೂಳೆ ಸಾಂದ್ರತೆ ಪರೀಕ್ಷೆ ಮತ್ತು ಸಲಹಾ ಶಿಬಿರ

ಬೆಳಗಾವಿ: ಕೆ.ಎಲ್.ಇ. ಆಯುರ್ವೇದ ಆಸ್ಪತ್ರೆ ಶಹಾಪೂರ ಬೆಳಗಾವಿ ಹಾಗೂ ಗುಫಿಕ್ಬಯೋಸೈನ್ಸ್ಲಿಮಿಟೆಡ ಸಹಯೋಗದೊಂದಿಗೆ ಮಂಗಳವಾರ ದಿನಾಂಕ: 23/05/2023ರಂದು ಮುಂಜಾನೆ 10.00 ರಿಂದ 2.00 ಮಧ್ಯಾನ್ಹದವರೆಗೆ ಉಚಿತ ಮೂಳೆ ಸಾಂದ್ರತೆ ಪರಿಕ್ಷೆ (Bone Mineral Density Test) ಹಾಗೂ ಸಂಬದಿಸಿದ ರೋಗಗಳ ತಪಾಸಣೆ ಏರ್ಪಡಿಸಲಾಗಿದೆ.

ಸಾಮಾನ್ಯವಾಗಿ ಬರುವಂತಹ ತೊಂದರೆಗಳಾದ ಮೂಳೆ ಕ್ಯಾಲ್ಸಿಯಂ ಕೊರತೆ, ಮೂಳೆಮುರಿತ, ಸಂಧಿಸರಿತ, ಮುರಿದ ಮೂಳೆ ಜೋಡಣೆ ಆಗದೆ ಇರುವುದು, ಮೂಳೆ ಸೊಂಕು, ಎಲುಬುಗಳನೋವು, ಭುಜನೋವು, ಮೊಣ–ಕೈನೋವು,ಮೊಣಕಾಲುನೋವು, ಹಿಂಬಡಿ ನೋವು ಈ ಎಲ್ಲತರಹದ ರೋಗಗಳಿಗೆ ತಪಾಸಣೆ ಮಾಡಲಾಗುವುದು. ಈಶಿಬಿರದಲ್ಲಿ ಆಸ್ಪತ್ರೆಯ ತಜ್ಞವೈದ್ಯರು ತಪಾಸಣೆ ಮಾಡಿ ಸೂಕ್ತ ಸಲಹೆ ನೀಡಲಿದ್ದಾರೆ.

ಈ ಶಿಬಿರದ ಪ್ರಯೋಜನೆಯನ್ನು ಪಡೆದು ಕೊಳ್ಳಬೇಕೆಂದು ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 23.05.2023 ರಂದು ಬೆಳಿಗ್ಗೆ 11.00 ಘಂಟೆಯಿಂದ ಸಾಯಂಕಾಲ 05.00 ಘಂಟೆಯವರೆಗೆ ಹುವಿಸಕಂನಿ ವತಿಯಿಂದ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ. ಮಚ್ಚೆ ಉಪಕೇಂದ್ರದಿಂದ ಸರಬರಾಜು ಆಗುವ ಬೆಳಗಾವಿ ತಾಲೂಕಿನ ಬಳಗಾಮಟ್ಟಿ, ಕುಟ್ಟಲವಾಡಿ, ಬಾಮನವಾಡಿ, ನಾವಗೆ, ಜಾನೇವಾಡಿ, ಬಾದರವಾಡಿ, ರಣಕುಂಡೆ, ಕರ್ಲೆ, ಕಿನಯೇ, ತೀರ್ಥಕುಂಡೆ, ಕವಲಪುರವಾಡಾ ಗ್ರಾಮಗಳಿಗೆ ಹಾಗೂ ಖಾನಾಪೂರ ತಾಲೂಕಿನ ಉಚವಡಾ, ಕುಸಮಳಿ, ಬೈಲೂರ, ಮೊರಬ, ಜಾಂಬೋಟಿ, ಓಲಮನಿ, ವಡಗಾಂವ, ದಾರೋಳಿ, ಚಾಪೋಲಿ, ಕಾಪೋಲಿ, ಮುಡವಿ, ಹಬ್ಬಾನಟ್ಟಿ, ದೇವಾಚಿಹಟ್ಟಿ, ತೋರಾಳಿ, ಗೋಲ್ಯಾಳಿ, ಬೆಟಗೇರಿ, ತಳೇವಾಡಿ, ಅಮಟೆ, ಕಾಲಮನಿ, ಚಿಕಲೆ, ಕಣಕುಂಬಿ, ಗವಸೆ, ಅಮಗಾಂವ, ಬೇಟ್ನೆ, ಪಾರವಾಡ, ಚಿಗುಳೆ, ಮಾನ, ಸಡಾ, ಚೋರ್ಲಾ, ಹಳೆ ಹಾಗೂ ಹೊಸ ಹುಳಂದ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

# ರಾಜ್ಯದಲ್ಲಿ ಜಾರಕಿಹೊಳಿ ಕುಟುಂಬಕ್ಕಿದೆ ಪ್ರತ್ಯೇಕ ಶಕ್ತಿ

ಬೆಳಗಾವಿ: ಬೆಳಗಾವಿ ಜಿಲ್ಲೆಯ ರಾಜಕಾರಣದ ಮಾತು ಬಂದಾಗ ಮೊದಲು ಪ್ರಸ್ತಾಪವಾಗುವುದು ಜಾರಕಿಹೊಳಿ ಹೆಸರು.

ಜಿಲ್ಲೆಯ ರಾಜಕಾರಣದಲ್ಲಿ ತಮ್ಮ ಬಿಗಿ ಹಿಡಿತ ಸಾಧಿಸಿರುವ ಈ ಸಹೋದರರು ಅಧಿಕಾರ ಹಾಗೂ ಸಚಿವ ಸ್ಥಾನ ಸತತವಾಗಿ ತಮ್ಮ ಕುಟುಂಬದಲ್ಲಿ ಇರುವಂತೆ ನೋಡಿಕೊಂಡಿದ್ದಾರೆ.

ತಮ್ಮ ಚಾಣಾಕ್ಷ ರಾಜಕೀಯ ತಂತ್ರಗಳಿಂದಾಗಿ ಇಡೀ ಗೋಕಾಕ ತಾಲೂಕಿನ ಮೇಲೆ ಹಿಡಿತ ಸಾಧಿಸಿದ್ದ ಈ ಪರಿವಾರ ಇಡೀ ಜಿಲ್ಲೆಗೂ ಇದನ್ನು ವಿಸ್ತರಿಸಿ ರಾಜ್ಯದ ಗಮನ ತಮ್ಮೆಡೆ ಕೇಂದ್ರೀಕೃತವಾಗುವಂತೆ ಮಾಡಿದ್ದಾರೆ.

ರಾಜ್ಯದಲ್ಲಿ ಸರ್ಕಾರ ಯಾವುದೇ ಇರಲಿ, ಆಡಳಿತ ಪಕ್ಷದಲ್ಲಿ ನಮ್ಮ ಮನೆಯ ಒಬ್ಬರು ಸಚಿವರು ಇರಲೇಬೇಕು. ಜಿಲ್ಲಾ ರಾಜಕಾರಣ ನಮ್ಮ ಹಿಡಿತಕ್ಕೆ ಬರಬೇಕು.

ಹೊರಗಡೆ ನಮ್ಮಲ್ಲಿ ಭಿನ್ನಮತವಿದೆ ಎಂದು ಜನ–ರಿಗೆ ಕಂಡು ಬಂದರೂ ರಾಜಕಾರಣ ಹಾಗೂ ಅಧಿಕಾರದ ಪ್ರಶ್ನೆ ಬಂದಾಗ ನಾವು ಒಂದಾಗಿರಬೇಕು ಎಂಬುವುದು ಇದು ಗೋಕಾಕದ ಜಾರಕಿಹೊಳಿ ಕುಟುಂಬದ ರಾಜಕಾರಣ.

ಸದ್ಯ ಕಗ್ಗಂಟಾಗಿದ್ದ ಕೆಪಿಸಿಸಿ ಅಧ್ಯಕ್ಷ ಹಾಗೂ ಕಾರ್ಯಾಧ್ಯಕ್ಷರ ನೇಮಕವನ್ನು ಎಐಸಿಸಿ ಪ್ರಕಟಿಸಿದ್ದು,



ಕೆಪಿಸಿಸಿ ಅಧ್ಯಕ್ಷರಾಗಿ ಡಿ.ಕೆ.ಶಿವಕುಮಾರ್ ನೇಮಕವಾಗಿದ್ದಾರೆ. ಇನ್ನು ಕಾರ್ಯಾಧ್ಯಕ್ಷರಾಗಿ ಸತೀಶ ಜಾರಕಿಹೊಳಿ ನೇಮಕವಾಗಿದ್ದಾರೆ. ಈ ಮೂಲಕ ಜಾಕಿಹೊಳಿ ಸಹೋದರರು ಕಾಂಗ್ರೆಸ್, ಬಿಜೆಪಿಯಲ್ಲಿ ತಮ್ಮ ಪ್ರಾಬಲ್ಯ ಸಾಧಿಸಿದ್ದಾರೆ.

**ಕಡಿಮೆಯಾಗದ ಜಾರಕಿಹೊಳಿ ಬ್ರದರ್ಸ್ ವರ್ಚಸ್ಸ್:** ಗೋಕಾಕ ತಾಲೂಕಿನಲ್ಲಿ ಈ ಕುಟುಂಬದ ಪ್ರಾಬಲ್ಯ ಎಷ್ಟು ಜೋರಾಗಿದೆ ಎಂದರೆ ಪ್ರಮುಖ ರಾಜಕೀಯ ಪಕ್ಷಗಳೂ ಇಲ್ಲಿ ಈ ಕುಟುಂಬದ ಮೂಲಕವೇ ಗುರುತಿಸಿಕೊಳ್ಳುತ್ತವೆ. ಕಾಂಗ್ರೆಸ್‌ನ ಭದ್ರಕೋಟೆ ಭೇದಿಸಿ ಮೊದಲ ಪ್ರಯತ್ನದಲ್ಲೇ ಯಶಸ್ಸು ಕಂಡ ಬಾಲಚಂದ್ರ ಜಾರಕಿಹೊಳಿ, ನಂತರ ರಾಜ್ಯದ ರಾಜಕೀಯದಲ್ಲಿ ಪ್ರಮುಖ ಪಾತ್ರ ವಹಿಸಿದ್ದು ಅವರ ಕುಟುಂಬದ ಪ್ರಭಾವಕ್ಕೆ ಸಾಕ್ಷಿ. ಸತೀಶ ಜಾರಕಿಹೊಳಿ ಕಾಂಗ್ರೆಸ್‌ನಲ್ಲಿ ಪ್ರಭಾವಿಗಳಾಗಿದ್ದರೆ, ರಮೇಶ ಜಾರಕಿಹೊಳಿ ಹಾಗೂ ಬಾಲಚಂದ್ರ ಜಾರಕಿಹೊಳಿ ಬಿಜೆಪಿಯಲ್ಲಿ ವರ್ಚಸ್ಸು ಹೊಂದಿದ್ದಾರೆ.

ನಂತರ 4ನೇ ಸಹೋದರ ಲಖನ ಜಾರಕಿಹೊಳಿ ಅವರು ವಿಧಾನ ಪರಿಷತ್ ಚುನಾವಣೆಯಲ್ಲಿ ಸ್ವತಂತ್ರ್ಯ ಅಭ್ಯರ್ಥಿಯಾಗಿ ನಿಲ್ಲುವ ಮೂಲಕ ಗೆಲುವು ಸಾಧಿಸಿ 4ನೇ ಸಹೋದರ ಕೂಡಾ ರಾಜಕೀಯಕ್ಕೆ ಎಂಟ್ರಿಕೊಟ್ಟು ರಾಜ್ಯದಲ್ಲಿ ಗಮನ ಸೆಳೆದಿದ್ದಾರೆ.

ಈಗ ಮತ್ತೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಮಂತ್ರಿ ಸ್ಥಾನ ಪಡೆಯುವ ಮೂಲಕ ಜಿಲ್ಲೆಯ ರಾಜಕೀಯದ ಮೇಲೆ ಬಿಗಿ ಹಿಡಿತ ಸಾಧಿಸಿದ್ದಾರೆ. ಈ ಮೂಲಕ ಜಾರಕಿಹೊಳಿ ಕುಟುಂಬದ ಸದಸ್ಯರೊಬ್ಬರು ಮತ್ತೆ ಮಂತ್ರಿಗಿರಿ ಪಟ್ಟ ಸಿಕ್ಕಂತಾಗಿದೆ.

**ಕಾಂಗ್ರೆಸ್ಸಿನ ಮಾಸ್ಟರ್ ಮೈಂಡ್ ಸತೀಶ್:** ಬೆಳಗಾವಿ ಜಿಲ್ಲೆಯ ಸೇರಿದಂತೆ ರಾಜ್ಯದ ವಿವಿಧೆಡೆ ಪುಟೆದೇದ್ದಿದೆ. ಕಾಂಗ್ರೆಸ್ಸಿನ ಮಾಸ್ಟರ್ ಮೈಂಡ್ ಎನಿಸಿದ ಸತೀಶ್ ಜಾರಕಿಹೊಳಿ ಅವರು ಬೆಳಗಾವಿ ಜಿಲ್ಲೆಯಲ್ಲಿ ಅತ್ಯಂತ ವ್ಯವಸ್ಥಿತವಾಗಿ ಕಾಂಗ್ರೆಸ್ ಪಕ್ಷ ಕಟ್ಟುವ ಮೂಲಕ 18 ಕ್ಷೇತ್ರಗಳ ಪೈಕಿ 11 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಜಯಭೇರಿ ಭಾರಿಸುವ ಮೂಲಕ ಬಿಜೆಪಿ ಭದ್ರಕೋಟೆಯಾದ ಬೆಳಗಾವಿ ಜಿಲ್ಲೆಯನ್ನು ಚಿದ್ರ ಮಾಡುವ ಮೂಲಕ ಬೆಳಗಾವಿ ಜಿಲ್ಲೆಯನ್ನ ಕಾಂಗ್ರೆಸ ಭದ್ರಕೋಟೆಯನ್ನಾಗಿ ರೂಪಿಸಿದ ಕೀರ್ತಿ ಸತೀಶ್ ಜಾರಕಿಹೊಳಿ ಅವರಿಗೆ ಸಲ್ಲುತ್ತದೆ.

### ಮೇ.23 ರಿಂದ ಜೂನ್ 3 ರವರೆಗೆ ದ್ವಿತೀಯ ಪಿ.ಯು. ಪೂರಕ ಪರೀಕ್ಷೆ

## ■ ಪರೀಕ್ಷಾ ಕೇಂದ್ರದ ಸುತ್ತ 200 ಮೀ. ವ್ಯಾಪ್ತಿಯನ್ನು ನಿರ್ಬಂಧಿತ ಪ್ರದೇಶ ಘೋಷಿಸಿ ಜಿಲ್ಲಾಧಿಕಾರಿ ಆದೇಶ

ಧಾರವಾಡ: ಮೇ.23 ರಿಂದ ಜೂನ್ 3 ರವರೆಗೆ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗಳು ಜರುಗಲಿವೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟ–ರ್ ಪ್ರದೇಶವನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಆದೇಶಿಸಿದ್ದಾರೆ.

ಈ ಕುರಿತು ಆದ–'ೇಶ ಹೊರಡಿಸಿರುವ ಅವರು, ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳು ಸುಗಮವಾಗಿ ಮತ್ತು ಪಾರದರ್ಶಕವಾಗಿ ಜರುಗಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಮತ್ತು ಅಧಿಕಾರಿಗಳನ್ನು ನೇಮಿಸಲಾಗಿದೆ.

ದ್ವಿತೀಯ ಪಿಯುಸಿ ಪರೀಕ್ಷೆಗಳು ಧಾರವಾಡ ಜಿಲ್ಲಾ ಗ್ರಾಮೀಣ



ವ್ಯಾಪ್ತಿಯ ಕುಂದಗೋಳದ ಹರಭಟ್ ಸಂಯುಕ್ತ ಪದವಿಪೂರ್ವ ಕಾಲೇಜು, ಮತ್ತು ನವಲಗುಂದದ ಶಂಕರ ಪದವಿಪೂರ್ವ ಕಾಲೇಜು, ಕಲಘಟಗಿಯ ಗುಡ್ನ್ಯೂಸ್ ಸ್ವತಂತ್ರ ಪದವಿಪೂರ್ವ ಕಾಲೇಜುಗಳಲ್ಲಿ ಬೆಳಿಗ್ಗೆ 10–15 ಗಂಟೆಯಿಂದ ಅಪರಾಹ್ನ 1–30 ಗಂಟೆಯವರೆಗೆ ಮತ್ತು ಅಪರಾಹ್ನ 2–15 ಗಂಟೆಯಿಂದ ಸಾಯಂಕಾಲ 5–30 ಗಂಟೆಯವರೆಗೆ ಜರುಗಲಿವೆ.

ಪ್ರತಿ ಪರೀಕ್ಷಾ ಕೇಂದ್ರದ ಸುತ್ತಮುತ್ತಲಿನ 200 ಮೀ. ಪ್ರದೇಶವನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಿದೆ. ಈ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶ ನಿಷೇಧಿಸಲಾಗಿದೆ.

ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡುವಂತಹ ಗುಂಪು, ವ್ಯಕ್ತಿಗಳ ವಿರುದ್ಧ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144ರ ಅನ್ವಯ ಕಲಂ 107 ಮತ್ತು 100 ರ ಅಡಿಯಲ್ಲಿ ಅಗತ್ಯ ಕ್ರಮ ಜರುಗಿಸಲಾಗುವುದೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಬೆಳಗಾವಿಯಲ್ಲಿ ಸತೀಶ ಜಾರಕಿಹೊಳಿ ಬೆಂಬಲಿಗರ ವಿಜಯೋತ್ಸವ

ಬೆಳಗಾವಿ: ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ಯಮಕನಮರಡಿ ಶಾಸಕ ಸತೀಶ್ ಜಾರಕಿಹೊಳಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೂತನ ಸಂಪುಟದಲ್ಲಿ ಸಚಿವರಾಗಿ ಆಯ್ಕೆಯಾಗಿದ್ದ ನಿಮಿತ್ತ ಸತೀಶ ಜಾರಕಿಹೊಳಿ ಬೆಂಬಲಿಗರು ಹಾಗೂ ಅಭಿಮಾನಿಗಳು ಬೆಳಗಾವಿಯ ಚನ್ನಮ್ಮ ವೃತ್ತದಲ್ಲಿ ವಿಜಯೋತ್ಸವ ಆಚರಿಸಿದರು.

ಸಿದ್ದರಾಮಯ್ಯ ಅವರು ಶನಿವಾರ ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು ಈ ವೇಳೆ ಸಮಾರಂಭದಲ್ಲಿ ಸತೀಶ ಜಾರಕಿಹೊಳಿ ಸಂಪುಟ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಹೀಗಾಗಿ ಜಿಲ್ಲೆಯ ಜಾರಕಿಹೊಳಿ ಬೆಂಬಲಿಗರಲ್ಲಿ ಸಂತಸದ ವಾತಾವರಣ



ಮೂಡಿದೆ. ಈ ಹಿನ್ನೆಲೆಯಲ್ಲಿ ಭಾನುವಾರ ಬೆಳಗಾವಿಯಲ್ಲಿ ಅವರ ಬೆಂಬಲಿಗರು, ಅಭಿಮಾನಿಗಳು ಸುಮಾರು 32 ಅಡಿ ಎತ್ತರದ ಕಟೌಟ್ ಮುಂದೆ ಪಟಾಕಿ ಸಿಡಿಸುವುದರ ಮೂಲಕ ನಗರದ ಚನ್ನಮ್ಮ ವೃತ್ತದಲ್ಲಿ ದಲಿತ ಮುಖಂಡ ಮಲ್ಲೇಶ ಚೌಗುಲೆ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸತೀಶ ಜಾರಕಿಹೊಳಿ ಹಾಗೂ ಅವರ ಪುತ್ರ ರಾಹುಲ್ ಅವರ ಪರವಾಗಿ ಘೋಷಣೆ ಕೂಗಿದರು.ಬಣ್ಣ ಎರಚುವ ಮೂಲಕ ವಿಜಯೋತ್ಸವ ಆಚ–ರಿಸಲಾಯಿತು.

ಈ ವೇಳೆ ಕಾಂಗ್ರೆಸ್ ಮುಖಂಡ ಬಾಹು ಗಡ್ಕರಿ ಮಾತನಾಡಿ, ಸತೀಶ ಜಾರಕಿಹೊಳಿ ಅವ–ರಿಗೆ ಸಚಿವಸ್ಥಾನ ಸಿಕ್ಕಿದ್ದು ತುಂಬಾ ಖುಷಿಯಾಗಲಿದೆ ಬಡವರು ದಲಿತರು ಎಲ್ಲ ಸಮುದಾಯದವರನ್ನು ಒಟ್ಟಿಗೆ ಕರೆದು ಕೊಂಡು ಹೋಗುವ ನಾಯಕ ಈ ಹಿಂದೆ ಬೆಳಗಾವಿ ಜಿಲ್ಲೆ ಅಭಿವೃದ್ಧಿ ಮಾಡಿದಂತೆ ಮುಂದೆಯೂ ಸಹ ಅಭಿವೃದ್ಧಿ ಮಾಡಲಿದ್ದಾರೆ ಎಂದು ಹೇಳಿದರು.

ಬೆಳಗಾವಿ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ದೌರ್ಜನ್ಯ ಸಮಿತಿ ಸದಸ್ಯ ವಿಜಯ ತಳವಾರ ಹಾಗೂ ಕಾಂಗ್ರೆಸ್ ಮುಖಂಡ ಮಲ್ಲೇಶ ಚೌಗುಲೆ ಮಾತನಾಡಿ, ಹೈಕಮಾಂಡ್ ಮೇಲೆ ಡಿಸಿಎಂ ಸ್ಥಾನ ನೀಡುತ್ತಾರೆ ಎಂಬ ನಿರೀಕ್ಷೆ ಇತ್ತು. ಆದರೆ ಸಚಿವ ಸ್ಥಾನ ನೀಡಿದ್ದಾರೆ ಅದಕ್ಕೆ ನಾವೆಲ್ಲ ಬದ್ಧರಿದ್ದೇವೆ.

ಜಿಲ್ಲೆ ಹಾಗೂ ರಾಜ್ಯಾದ್ಯಂತ ನಾಯಕರಿಗೆ ವಿಶೇಷ ಸ್ಥಾನ ಮಾನ ಇದೆ ಅವರಿಗೆ ಪ್ರಬಲ ಖಾತೆ ನೀಡಬೇಕು ಎಂದು ಮನವಿ ಮಾಡಿದರು.

ಬುದ್ಧ,ಬಸವಣ್ಣ.ಡಾ. ಬಿ.ಆರ್. ಅಂಬೇಡ್ಕರ್ ಅವರ ಹಾದಿಯಲ್ಲಿ ಸಾಗುತ್ತ ಕರ್ನಾಟಕವನ್ನು ಅಭಿವೃದ್ಧಿ ಪಥದತ್ತ ನಡೆಸುತ್ತಾರೆ ಎಂಬ ವಿಶ್ವಾಸ ಇದೆ ಮುಂದಿನ ದಿನಗಳಲ್ಲಿ ಸಿ ಎಂ ಆಗುವ ಭರವಸೆಯು ನಮ್ಮಲ್ಲಿ ಇದೆ. ಹೀಗಾಗಿ ವಿವಿದ ದಲಿತ ಸಂಘಟನೆಗಳು ಸದಾ ಅವರ ಬೆಂಬಲಕ್ಕೆ ಇರುತ್ತವೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ವೃತ್ತಿಪರ ವಿಭಾಗದ ಜಿಲ್ಲಾ ಉಪಾಧ್ಯಕ್ಷ ಸನ್ನಿ ತೆಲಸಂಗ, ಕಾಂಗ್ರೆಸ್ ಮುಖಂಡರಾದ ಗಡ್ಕರಿ ಸಿದ್ದಪ್ಪ ಕಾಂಬಳೆ, ರಮೇಶ ದಡ್ಡಿ, ಸಂತೋಷ ಗುಬಚಿ, ಬಸು ಡುಮ್ಮನಾಯ್ಕ, ಸಂಜು ವಾಜಂತ್ರಿ, ಮಲ್ಲೇಶ ಪೂಜೇರಿ, ರಾಜು ಯರಗಾಣಿ , ಸಣ್ಣಪ್ಪ ತೊಲಗಿ, ಸುಧಾಮ ಪಾಟೀಲ, ದೀಪಕ ಗಿಡ್ಡನ್ನವರ, ಸಂತೋಷ ಟೈಗರ್, ಬಸವರಾಜ್ ದುಮ್ಮನಾಯಕ್, ಕೃಷ್ಣಾ ಪಾಟೀಲ, ರಾಜು ಯರಗಾಣಿ ಸೇರಿದಂತೆ ಕಾಂಗ್ರೆಸ್ ಹಾಗೂ ದಲಿತ ಹೋರಾಟಗಾರ ಸತೀಶ ಜಾರಕಿಹೊಳಿ ಬೆಂಬಲಿಗರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.



# ಆರೋಗ್ಯಕರ ನಗೆ ನಮಗಿಂದು ಬೇಕಾಗಿದೆ: ಮಂಗಲಾ ಮೆಟಗುಡ್ಡ

ಬೆಳಗಾವಿ: ಆರೋಗ್ಯಕರ ನಗೆ ನಮಗಿಂದು ಬೇಕಾಗಿದೆ. 'ಮುದ್ದಣ್ಣನ ಪ್ರಮೋಷನ್ ಪ್ರಸಂಗ' ನಾಟಕದಲ್ಲಿ ಅದನ್ನು ನಾವು ಕಾಣುತ್ತೇವೆ. ಹಾಸ್ಯದ ಹೆಸರಲ್ಲಿ ಏನೇನೋ ಮಾಡಿ ನಗೆಸಲು ಪ್ರಯತ್ನಿಸಿ ಸೋಲುತ್ತಿರುವ ಇಂದಿನ ದಿನಗಳಲ್ಲಿ ಸಂಪೂರ್ಣ ಹಾಸ್ಯ ನಾಟಕವನ್ನು ನೋಡಿ ಆನಂದಿಸುವ ಸಮಯ ಬಹಳ ದಿನಗಳ ನಂತರ ನನಗಿಂದು ಲಭಿಸಿದೆ. ಕುಟುಂಬ ಸಹಿತ ಕುಳಿತು ನೋಡಿ ಆನಂದಿಸಬಹುದಾದಂತಹ ಒಳ್ಳೆಯ ನಾಟಕ ಇದಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷರಾದ ಶ್ರೀಮತಿ ಮಂಗಲಾ ಮೆಟಗುಡ್ ಇಂದಿಲ್ಲಿ ಹೇಳಿದರು.

ನಗರದ ರಂಗಸಂಪದದವ–ರಿಂದ ಇದೇ ದಿ. 21 ರವಿವಾರದಂದು ತಿಲಕಚೌಕ ಹತ್ತಿರವಿರುವ ಲೋಕಮಾನ್ಯ ರಂಗಮಂದಿರದಲ್ಲಿ 'ಮುದ್ದಣ್ಣನ ಪ್ರಮೋಷನ್ ಪ್ರಸಂಗ' ಹಾಸ್ಯ ನಾಟಕ ಪ್ರದರ್ಶನಗೊಂಡಿತು. ಅತಿಥಿಗಳಾಗಿ ಆಗಮಿಸಿದ್ದ ಶ್ರೀಮತಿ ಮಂಗಲಾ ಮೆಟಗುಡ್ಡ ನಾಟಕವನ್ನು ವೀಕ್ಷಿಸಿ ನಾಟಕದ ನಿರ್ದೇಶಕ ಹಾಗೂ ಪ್ರಮುಖ ಪಾತ್ರಧಾರಿ ಡಾ. ಅರವಿಂದ ಕುಲಕರ್ಣಿ ಹಾಗೂ ಕಲಾವಿದೆ ಶ್ರೀಮತಿ ಪ್ರತಿಭಾ ಕಳ್ಳಿಮಠರ ಅಭಿನಯ ಮೆಚ್ಚಿಕೊಂಡು ಅವರನ್ನು ಸನ್ಮಾನಿಸಿ ಮಾತನಾಡುತ್ತ ಮೇಲಿನಂತೆ ಅಭಿಪ್ರಾಯ ವ್ಯಕ್ತಪಡಿಸಿದರು.

ಶ್ರೀಮತಿ ಮಂಗಲಾ ಮೆಟಗುಡ್ಡ ಅವರು ಸಂದೇಶದೊಂದಿಗೆ ಜನರನ್ನು ರಂಜಿಸುವ 'ಮುದ್ದಣ್ಣನ ಪ್ರಮೋಷನ್ ಪ್ರಸಂಗ' ನಾಟಕವನ್ನು ಜಿಲ್ಲೆಯ ಬೇರೆ ಬೇರೆಡೆ ಪ್ರದರ್ಶನಗೊಳ್ಳುವಂತೆ ಮಾಡುವ ಭರವಸೆಯನ್ನು ನೀಡಿದರು.

ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷೆ ಶ್ರೀಮತಿ ಜಯಶೀಲಾ ಬ್ಯಾಕೋಡ ಮತ್ತು ಶ್ರೀಮತಿ. ಶೈಲಜಾ ಭಿಂಗೆ ನಾಟಕ ಕುರಿತಂತೆ ಮೆಚ್ಚುಗೆ ವ್ಯಕ್ತ ಪಡಿಸಿದರು. ಎರಡೂ ನಾಟಕಗಳ ಪ್ರಾಯೋಜಕರಾದ ಶ್ರೀ. ಮಧ್ವಾಚಾರ್ಯ ಆಯಿ ಅಭಿಷೇಕ ಅಲಾಯ್ಸ ಪ್ರೈ ಲಿ. ಇದರ ಮಾಲಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಿರ್ದೇಶನ ಹಾಗೂ ಗಂಭೀರ ಪಾತ್ರಗಳಿಂದ ಪರಚಿತರಾಗಿದ್ದ ಡಾ. ಅರವಿಂದ ಕುಲಕರ್ಣಿಯವರು ಮುದ್ದಣ್ಣನ ಪಾತ್ರದಲ್ಲಿ ಕಾಣಿಸಿಕೊಂಡು ಹಾಸ್ಯ ಪಾತ್ರವನ್ನೂ ಅಷ್ಟೇ ಸಮಥ–'ರ್ವಾಗಿ ಅಭಿನಯಿಸಬಲ್ಲರೆಂಬುದನ್ನು ತೋರಿಸಿಕೊಟ್ಟರು. ರಂಗ ಪರಿಕರ, ಸಂಗೀತ, ನಾಟಕ ನಿರ್ದೇಶನ ಮುದ್ದಣ್ಣನ ಪಾತ್ರ ಡಾ. ಅರವಿಂದ ಕುಲಕರ್ಣಿಯವರದಾಗಿತ್ತು

ರಾಜೇಂದ್ರ ಕಾರಂತ ಅವರ ರಚನೆಯಾಗಿದ್ದು ಅರವಿಂದ ಪಾಟೀಲ, ಪದ್ಮಾ ಕುಲಕರ್ಣಿ, ಪ್ರಸಾದ ಕಾರಜೋಳ, ರುದ್ರೇಶ ಕೆ, ಶರಣಯ್ಯ ಮಠಪತಿ, ಮಂಜುನಾಥ ಕೊಟಬಾಗಿ, ಮುಕುಂದ ನಿಂಗಣ್ಣವರ ತಮ್ಮ ತಮ್ಮ ಪಾತ್ರಗಳಿಗೆ ನ್ಯಾಯವನ್ನೊದಗಿಸಿಕೊಟ್ಟರು. ತಾಂತ್ರಿಕ ಸಹಾಯ ಪವನ ಹಾದಿಮನಿಯವರದಾಗಿತ್ತು.

## ಎಸ್ಪಿ ಹೆಸರಿನಲ್ಲಿ ನಕಲಿ ಫೇಸ್‌ಬುಕ್ ಖಾತೆ ಸೃಷ್ಟಿಸಿ ಹಣಕ್ಕೆ ಬೇಡಿಕೆ



ವಿಜಯನಗರ : ವಿಜಯನಗರ ಎಸ್ಪಿ ಹೆಸರಿನಲ್ಲಿ ನಕಲಿ ಫೇಸ್‌ಬುಕ್ ಖಾತೆ ಸೃಷ್ಟಿಸಿ, ಮೆಸೇಂಜರ್‌ನಲ್ಲಿ ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ.

ನೂತನ ವಿಜಯನಗರ ಎಸ್ಪಿ ಫೇಸ್‌ಬುಕ್ ಖಾತೆ ಹೊಂದಿದ್ದಾರೆ. ಈ ಖಾತೆ 'ಎಸ್ಪಿ ವಿಜಯನಗರ ಡಿಸ್ಟ್' ಎಂದು ಇಂಗ್ಲಿಷ್ ಹೆಡ್ ಲೈನ್ ಹೊಂದಿದೆ. ಆದರೆ, ಈ ಖಾತೆಯನ್ನು ನಕಲಿ ಸೃಷ್ಟಿಸಿದ ಹ್ಯಾಕರ್‌ಗಳು ಮೆಸೇಂಜರ್‌ನಲ್ಲಿ ಸಾರ್ವಜನಿಕರಿಗೆ ಹಣದ ಬೇಡಿಕೆ ಇಟ್ಟಿದ್ದಾರೆ. ಮೇ 21ರ ಬೆಳಗ್ಗೆ 10.30ರ ಹೊತ್ತಿಗೆ ಎಸ್ಪಿ ಶ್ರೀಹರಿಬಾಬು ಅವರಿಗೆ ಸಾರ್ವಜನಿಕರೊಬ್ಬರು ಕರೆ ಮಾಡಿದ್ದಾರೆ.

ಈ ಕುರಿತು ಪರಿಶೀಲನೆ ನಡೆಸಲಾಗಿದ್ದು, ನಕಲಿ ಖಾತೆ ಸೃಷ್ಟಿಸಲಾಗಿದೆ ಎಂಬುದು ದೃಢಪಟ್ಟ ಕೂಡಲೇ ಗ್ರಾಮೀಣ ಠಾಣೆಯಲ್ಲಿ ಅನಾಮಿಕ ಹ್ಯಾಕರ್‌ಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಕೂಡಲೇ ಆ ನಕಲಿ ಖಾತೆಯನ್ನು ಬಂದ್ ಮಾಡಲಾಗಿದೆ. ಫೇಸ್‌ಬುಕ್ ನಕಲಿ ಖಾತೆ ಸೃಷ್ಟಿಸಿ ಸಾರ್ವಜನಿಕರಿಗೆ ಹಣದ ಬೇಡಿಕೆ ಇಟ್ಟಿರುವುದು ಗಮನಕ್ಕೆ ಬಂದಿದೆ. ಸಾರ್ವಜನಿಕರು ಯಾರೂ ಹಣ ಕಳುಹಿಸಿ, ಮೋಸ ಹೋಗಿಲ್ಲ. ಗ್ರಾಮೀಣ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089